ಸಂಪುಟ: 21, ಸಂಚಿಕೆ: 104, ಪುಟಗಳು: 8, ಬುಧವಾರ, 24 ಜನವರಿ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು



ವೇಣು ಸಾರಥ್ಯದಲ್ಲಿ...

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಬುಧವಾರ 24, ಜನವರಿ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ತಿಥಿ: ಚೌತಿ
- ನಕ್ಷತ್ರ: ರೇವತಿ,
- ರಾಹುಕಾಲ: 12 : 27 PM 01 : 53 PM
- ಗುಳಿಕಕಾಲ: 11 : 01 AM 12 : 27 PM
- ಯಮಗಂಡಕಾಲ : 08 : 10 AM 09 : 36 AM



# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com



We Undertake Printing of
Newspapers | Tabloids | Magazines

## ಸಂಕ್ಷಿಪ್ತ ಸುದ್ದಿ

### ತೃತೀಯಲಿಂಗಿ 5 ತಿಂಗಳ ಗರ್ಭಿಣಿ!

**ಇಟಲಿ:** ಇಟಲಿಯಲ್ಲಿ ಲಿಂಗಪರಿವರ್ತನೆ ಮಾಡಿಸಿಕೊಳ್ಳಬೇಕೆಂದು ಆಸ್ಪತ್ರೆಗೆ ಬಂದಿದ್ದಾಗ ತೃತೀಯಲಿಂಗಿ 5 ತಿಂಗಳ ಗರ್ಭಿಣಿ ಎಂಬುದು ಗೊತ್ತಾಗಿದೆ. ಇನ್ನೇನು ಸ್ತನಗಳನ್ನು ತೆಗೆಯುವ ಶಸ್ತ್ರಚಿಕಿತ್ಸೆ ಮಾಡಬೇಕಿತ್ತು, ಆಗ ಆಕೆ ಗರ್ಭಿಣಿ ಎಂಬುದು ತಿಳಿದುಬಂದಿದೆ. ಇಟಲಿಯ ಇತಿಹಾಸದಲ್ಲೇ ಇದು ಮೊದಲ ಪ್ರಕರಣ ಎಂದು ವೈದ್ಯರು ಹೇಳಿದ್ದಾರೆ. ಪುಟ 2

### ಪ್ರಿಯಕರನ ಹಣ ಖರ್ಚು ಮಾಡಿಸಿ ಹೋದ ಮಹಿಳೆ



**ಬಳ್ಳಾರಿ:** ಇದು ಒಂದು ರೊಟ್ಟಿಯಿಂದಾದ ಪ್ರೀತಿ ಪ್ರೇಮದ ರಿಯಲ್ ಸ್ಟೋರಿ. ರೊಟ್ಟಿ ಖರೀದಿಗೆ ಹೋಗಿದ್ದಾಗ ವಿವಾಹಿತ ಪುರುಷನಿಗೆ ವಿವಾಹಿತ ಮಹಿಳೆ ಮೇಲೆ ಲವ್ ಆಗಿದೆ. ಗಂಡನಿಂದ ದೂರ ಉಳಿದು ಪ್ರಿಯಕರನೊಂದಿಗೆ ಬಳ್ಳಾರಿಯಲ್ಲಿ ನೆಲೆಸಿದ್ದಳು. ಪ್ರಿಯಕರನೊಂದಿಗೆ ಇದ್ದುಕೊಂಡು ಭರ್ಜರಿ ಹಣ ಖರ್ಚು ಮಾಡಿ ಕೊನೆಗೆ ಮಹಿಳೆ ಮರಳಿ ಪತಿಯೊಂದಿಗೆ ಹೋಗಿದ್ದಾಳೆ ಮಾರಾಯ್ರೆ. ಪುಟ 2

### ಯುವಕನ ಮೂಕ ಪ್ರೀತಿ, ಯುವತಿಯ ಎಳೆದೊಯ್ದ ಸಹೋದರರು



**ರಾಜಸ್ಥಾನ:** ಆಕೆ ರಾಜಸ್ಥಾನದವಳು. ಈತ ಬಾಗಲಕೋಟೆ ಮೂಲದವ. ಇಬ್ಬರಿಗೂ ಮಾತುಬರುವುದಿಲ್ಲ. ಆದರೂ ಇನ್ಸ್ಟಾಗ್ರಾಮ್ ಮೂಲಕ ಪರಿಚಯ, ಲವ್ ಆಗಿ ಇಬ್ಬರು ಮೂಕ ಪ್ರೇಮಿಗಳು ಮದುವೆಯೂ ಆಗಿದ್ದರು. ಆದರೆ ಯುವತಿಯನ್ನು ಸಹೋದರರು ಕರೆದೊಯ್ದಿದ್ದು, ಈಗ ಆ ಎರಡೂ ಪ್ರೇಮಪಕ್ಷಿಗಳು ಮೂಕ ರೋದನೆ ಅನುಭವಿಸುತ್ತಿದ್ದಾರೆ. ಪುಟ 2

## ಅಯೋಧ್ಯೆಯ ರಾಮನಿಗೆ ಉಡುಗೊರೆಗಳ ಮಹಾಪೂರ



**ಅಯೋಧ್ಯೆ:** ಅಯೋಧ್ಯೆಯ ರಾಮಮಂದಿರ ಶತಶತಮಾನಗಳ ಭಾರತೀಯರ ಕನಸು. ರಾಮಮಂದಿರ ನಿರ್ಮಾಣಕ್ಕಾಗಿ ದೇಶದ ಮೂಲೆ ಮೂಲೆಯಿಂದಲೂ ಭಕ್ತರು ತಮ್ಮ ಶಕ್ತ್ಯಾನುಸಾರ ಕಾಣಿಕೆ ಅರ್ಪಿಸಿದ್ದಾರೆ. ಹಣ ಮಾತ್ರವಲ್ಲ ಕಬ್ಬಿಣ, ಇಟ್ಟಿಗೆ ಹೀಗೆ ಅನೇಕ ವಸ್ತುಗಳನ್ನು ಸಮರ್ಪಿಸಿದ್ದಾರೆ. ಈಗ ಭವ್ಯ ರಾಮಮಂದಿರ ತಲೆ ಎತ್ತಿ ನಿಂತಿದೆ. ಈ ರಾಮಮಂದಿರಕ್ಕೆ ಅತಿಹೆಚ್ಚು ದೇಣಿಗೆ ನೀಡಿದವರು, ಅತಿದೊಡ್ಡ ಕಾಣಿಕೆ ನೀಡಿದರು ಯಾರು ಎಂದರೆ, ಭಾರತದ ಶ್ರೀಮಂತ ಉದ್ಯಮಿ ಅಂಬಾನಿಯೋ, ಟಾಟಾ ಬಿರ್ಲಾ ಅವರೋ ಯಾರೂ ಅಲ್ಲ. ಗುಜರಾತ್ ನ ಖ್ಯಾತ ವಜ್ರದ ವ್ಯಾಪಾರಿ ದಿಲೀಪ್ ಕುಮಾರ್ ವಿ ಲಖಿ ಎಂಬವರು.

**ರಾಮನಿಗೆ 101 ಕೆಜಿ ಚಿನ್ನ ಅರ್ಪಣೆ:** ದಿಲೀಪ್ ಕುಮಾರ್ ವಿ ಲಖಿ ಉದಾತ್ತ ಮನಸ್ಸಿನಿಂದ ರಾಮನ ಸೇವೆಗಾಗಿ ಬರೋಬ್ಬರಿ 101 ಕೆಜಿ ಚಿನ್ನವನ್ನು ಸಮರ್ಪಿಸಿದ್ದಾರೆ. ಗುಜರಾತ್ ದಿಲೀಪ್ ಕುಮಾರ ವಿ ಲಖಿ ಅವರದ್ದು ವಜ್ರ ವ್ಯಾಪಾರದ ಕುಟುಂಬ. ರಾಮನ ಪರಮಭಕ್ತರಾಗಿರುವ ಅವರು 101 ಕೆಜಿ ಚಿನ್ನವನ್ನ ಕಾಣಿಕೆಯಾಗಿ ನೀಡಿದ್ದಾರೆ. ಸದ್ಯ 10 ಗ್ರಾಮ್ ಚಿನ್ನಕ್ಕೆ 68 ಸಾವಿರ ರೂಪಾಯಿ ಇದ್ದು, 101 ಕೆಜಿಗೆ ಅಂದಾಜು 68 ಕೋಟಿ ರೂಪಾಯಿಗಳಷ್ಟು ಆಗುತ್ತದೆ.

ದಿಲೀಪ್ ಕೊಟ್ಟ ಚಿನ್ನವನ್ನು ಯಾವುದಕ್ಕೆಲ್ಲ ಬಳಕೆ

ವಜ್ರದ ವ್ಯಾಪಾರಿ ದಿಲೀಪ್ ಕುಮಾರ್ ಕೊಟ್ಟಿರುವ 101 ಕೆಜಿ ಬಂಗಾರವನ್ನು ರಾಮಮಂದಿರದ ಬಾಗಿಲುಗಳಿಗೆ ಬಳಸಿಕೊಳ್ಳಲಾಗಿದೆ. ಗರ್ಭಗುಡಿಗೆ ಬಳಸಿಕೊಳ್ಳಲಾಗಿದೆ. ಚಿನ್ನದ ತ್ರಿಶೂಲ, ಚಿನ್ನ ಢಮರುಗ, ಹಾಗೇ ಗರ್ಭಗುಡಿ ಮುಂಭಾಗದ ಸ್ತಂಭಗಳಿಗೆ ಈ ಚಿನ್ನವನ್ನು ಬಳಸಿಕೊಳ್ಳಲಾಗಿದೆ.

ಹೆಚ್ಚುವರಿಯಾಗಿ, ಸೂರತ್‌ನ ಮತ್ತೊಬ್ಬ ವಜ್ರದ ಉದ್ಯಮಿ ಗೋವಿಂದಭಾಯ್ ಧೋಲಾಕಿಯಾ ಅವರು 11 ಕೋಟಿ ರೂ. ನೀಡಿದ್ದಾರೆ. ಧೋಲಾಕಿಯಾ ಅವರು ಶ್ರೀ ರಾಮಕೃಷ್ಣ ಎಕ್ಸ್‌ಪೋರ್ಟ್ಸ್ ಸ್ಥಾಪಕರು.

**ಬಾಲರಾಮನಿಗೆ 11ಕೋಟಿ ರೂ.ನ ವಜ್ರ ಖಚಿತ ಕಿರೀಟ:** ಗುಜರಾತ್‌ನ ಮತ್ತೊಬ್ಬ ವಜ್ರದ ವ್ಯಾಪಾರಿ ಮುಖೇಶ್ ಪಟೇಲ್ ಎಂಬವರು 11 ಕೋಟಿ ರೂಪಾಯಿ ಬೆಲೆಬಾಳುವ 6 ಕೆ ಜಿ ತೂಕದ ವಜ್ರಖಚಿತ ಕಿರೀಟವನ್ನು ಬಾಲರಾಮನಿಗೆ ಅರ್ಪಿಸಿದ್ದಾರೆ. ಬಂಗಾರ, ವಜ್ರ, ಅಮೂಲ್ಯ ರತ್ನದ ಕಲ್ಲುಗಳನ್ನು ಈ ಕಿರೀಟ ಒಳಗೊಂಡಿದೆ. ಪುಟ 2



# ಫೆಬ್ರವರಿ 1 ರಂದು ಬಜೆಟ್!

## 2024-25 ರ ಆರ್ಥಿಕ ವರ್ಷಕ್ಕೆ ನಿರ್ಮಲಾ ಸೀತಾರಾಮನ್ ಕೊಡುಗೆ ಏನು?



**ನವದೆಹಲಿ:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ 1 ರಂದು 2024-25 ರ ಮಧ್ಯಂತರ ಬಜೆಟ್ ಅನ್ನು ಮಂಡಿಸಲಿದ್ದಾರೆ. ಸಾರ್ವತ್ರಿಕ ಚುನಾವಣೆಯ ನಂತರ ಹೊಸ ಸರ್ಕಾರ ರಚನೆಯಾದ ನಂತರ 2024-25 ರ ಆರ್ಥಿಕ ವರ್ಷಕ್ಕೆ ಪೂರ್ಣ ಬಜೆಟ್ ಮಂಡನೆಯಾಗಲಿದೆ. ಏನಿದು ಮಧ್ಯಂತಕ ಬಜೆಟ್ ಇದರ ಬಗ್ಗೆ ತಿಳಿದುಕೊಳ್ಳೋಣ

ಸಾರ್ವತ್ರಿಕ ಚುನಾವಣೆಗಳು ಸಮೀಪಿಸುತ್ತಿರುವಾಗ ಅಥವಾ ಹೊಸ ಸರ್ಕಾರವು ಅಧಿಕಾರಕ್ಕೆ ಬರುವವರೆಗೆ ಸರ್ಕಾರವು ಘೋಷಣೆ ಮಾಡುವ ತಾತ್ಕಾಲಿಕ ಹಣಕಾಸು ಯೋಜನೆಯೇ ಮಧ್ಯಂತರ ಬಜೆಟ್

ಚುನಾವಣೆಯಲ್ಲಿ ಗೆದ್ದ ನಂತರ ಹೊಸ ಸರ್ಕಾರವು ಪೂರ್ಣ ಪ್ರಮಾಣದ ಬಜೆಟ್ ಅನ್ನು ರೂಪಿಸುವ ಮತ್ತು ಪ್ರಸ್ತುತಪಡಿಸುವವರೆಗೆ ಅಲ್ಪಾವಧಿಗೆ ಸರ್ಕಾರದ ವೆಚ್ಚದ ಅಗತ್ಯಗಳನ್ನು ಪೂರೈಸಲು ಮಧ್ಯಂತರ ಬಜೆಟ್ ತಾತ್ಕಾಲಿಕ ವ್ಯವಸ್ಥೆಯಾಗಿ ಕಾರ್ಯನಿರ್ವಹಿಸುತ್ತದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ 1 ರಂದು 2024-25 ರ ಮಧ್ಯಂತರ ಬಜೆಟ್ ಅನ್ನು ಮಂಡಿಸಲಿದ್ದಾರೆ. ಸಾರ್ವತ್ರಿಕ ಚುನಾವಣೆಯ ನಂತರ ಹೊಸ ಸರ್ಕಾರ ರಚನೆಯಾದ ನಂತರ 2024-25ರ ಆರ್ಥಿಕ ವರ್ಷಕ್ಕೆ ಪೂರ್ಣ ಬಜೆಟ್ ಮಂಡಿಸಲಾಗುವುದು. ಪುಟ 2

## ಹಲ್ವಾ ತಿನಿಸುವ ಕಾರ್ಯಕ್ರಮ

**ನವದೆಹಲಿ:** ಫೆಬ್ರುವರಿ 1ರಂದು ಕೇಂದ್ರ ಹಣಕಾಸು ಸಚಿವೆ ಬಜೆಟ್ ಮಂಡಿಸಲಿದ್ದಾರೆ. ಲೋಕಸಭೆಗೆ ಮುನ್ನ ನಡೆಯುವ ಇದು ಪೂರ್ಣ ಬಜೆಟ್ ಬದಲು ಮಧ್ಯಂತರ ಬಜೆಟ್ ಮಾತ್ರವೇ ಆಗಿರುತ್ತದೆ. ಯಾವುದೇ ಬಜೆಟ್ ಮಂಡಿಸುವ ಮೊದಲು ಕೆಲವಿಷ್ಟು ಸಂಪ್ರದಾಯ, ಆಚರಣೆಗಳನ್ನು ನಡೆಸಲಾಗುತ್ತದೆ. ಇಂಥ ಕೆಲ ಸಂಪ್ರದಾಯಗಳನ್ನು ಸರ್ಕಾರಗಳು ಕೈಬಿಟ್ಟಿರುವುದುಂಟು. ಹಾಗೆಯೇ, ಕೆಲ ಆಚರಣೆಗಳು ಮುಂದುವರಿದುಕೊಂಡು ಬಂದಿವೆ. ಇಂಥ ಸಂಪ್ರದಾಯದಲ್ಲಿ ಹಲ್ವಾ ಕಾರ್ಯಕ್ರಮವೂ ಒಂದು. ಬಜೆಟ್ ಮಂಡನೆಗೆ ಕೆಲ ದಿನಗಳ ಮೊದಲು ಹಲ್ವಾ ಕಾರ್ಯಕ್ರಮ ನಡೆಯುತ್ತದೆ. ಪುಟ 2



## ಇತಿಹಾಸದ ಪುಟ ಸೇರಲಿದೆ ಕೆಜಿಎಫ್!

**ಕೋಲಾರ:** ಕೋಲಾರದ ಕೆಜಿಎಫ್ ನ ಪ್ರಸಿದ್ಧ ಚಿನ್ನದ ಗಣಿ ಇನ್ನು ಶಾಶ್ವತವಾಗಿ ಇತಿಹಾಸದ ಪುಟ ಸೇರುವುದು ಬಹುತೇಕ ಖಚಿತವಾಗಿದೆ. ಚಿನ್ನದ ಗಣಿಯ ಕೇಂದ್ರದ ಗುತ್ತಿಗೆ ಅವಧಿ ಮುಕ್ತಾಯವಾಗಿದ್ದು, ಪುನರಾರಂಭಕ್ಕೆ ಕೇಂದ್ರ ನಿರಾಸಕ್ತಿ ತಾಳಿದೆ. ರಾಜ್ಯ ಸರ್ಕಾರಕ್ಕೆ ಭೂಮಿಯನ್ನು ಹಿಂತಿರುಗಿಸುವ ಪ್ರಕ್ರಿಯೆಯನ್ನೂ ಕೇಂದ್ರ ಗಣಿ ಇಲಾಖೆ ಆರಂಭಿಸಿದೆ. 2001 ರ ಫೆಬ್ರವರಿಯಲ್ಲಿ ಕೆಜಿಎಫ್ ಚಿನ್ನದ ಗಣಿಗೆ ಅಧಿಕೃತವಾಗಿ ಬೀಗ ಹಾಕಲಾಗಿತ್ತು. ನಂತರ ಚಿನ್ನದ ಗಣಿ ಪುನರಾರಂಭ ಮಾಡುವ ಬಗ್ಗೆ ಸತತ 22 ವರ್ಷಗಳಿಂದ ಪ್ರಯತ್ನ ನಡೆಯುತ್ತಿದೆ. ಆದರೆ, ಈಗ ಅದೂ ಕೊನೆಗೊಂಡಿದೆ.

ಕೆಜಿಎಫ್ ಚಿನ್ನದ ಗಣಿಯ ಕೇಂದ್ರ ಸರ್ಕಾರಕ್ಕೆ ನೀಡಿದ್ದ ಗುತ್ತಿಗೆ ಅವಧಿ 2023ರ ಆಗಸ್ಟ್ ಗೆ ಮುಕ್ತಾಯವಾಗಲಿದೆ. ಹೀಗಾಗಿ 12,500 ಎಕರೆ ಪ್ರದೇಶವನ್ನು ರಾಜ್ಯ ಸರ್ಕಾರಕ್ಕೆ ಹಿಂದುರುಗಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಈ ಮಧ್ಯೆ, ಚಿನ್ನದ ಅದಿರು ತೆಗೆದು ಹಾಕಲಾಗಿರುವ ಸೈನೆಡ್ ಮಿಶ್ರಿತ ಮಣ್ಣಿನ ಗುಡ್ಡಗಳನ್ನು ಶೋಧಿಸಿ ಚಿನ್ನ ತೆಗೆಯಲು ಕೇಂದ್ರ ಸರ್ಕಾರ ಗ್ಲೋಬಲ್ ಟೆಂಡರ್ ಕರೆದಿದೆ. ಪುಟ 2



### ಬಗೆಹರಿಯುತ್ತಿಲ್ಲ ನಿಗಮ ಮಂಡಳಿ ಕಗ್ಗಂಟು

## 26ಕ್ಕೆ ಮತ್ತೆ ಸಭೆ

**ಬೆಂಗಳೂರು:** ನಿಗಮ ಮಂಡಳಿ ನೇಮಕ ವಿಚಾರ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಬಹುದೊಡ್ಡ ತಲೆನೋವಾಗಿ ಪರಿಣಮಿಸಿದೆ. ಹಲವು ಸುತ್ತುಗಳ ಸಮಾಲೋಚನೆ, ಸಭೆಗಳ ಬಳಿಕವೂ ಪಟ್ಟಿ ಅಂತಿಮಗೊಳಿಸಲು ಸಾಧ್ಯವಾಗುತ್ತಿಲ್ಲ. ಇದೀಗ ನಿಗಮ ಮಂಡಳಿ ನೇಮಕ ವಿಚಾರ ರಾಜ್ಯ ಕಾಂಗ್ರೆಸ್ ನಾಯಕರು ಮತ್ತು ಹೈಕಮಾಂಡ್ ನಡುವಣ ಸಂಘರ್ಷವಾಗಿ ಮಾರ್ಪಟ್ಟಿದೆ. ಹೈಕಮಾಂಡ್ ಕಳುಹಿಸಿರುವ ಪಟ್ಟಿಯಲ್ಲಿ ಕೆಲವು ಅಚ್ಚರಿಯ ಹೆಸರುಗಳು ಕಾಣಿಸಿವೆ ಎನ್ನಲಾಗಿದ್ದು, ಪುಟ 2



### ಕಲಬುರಗಿಯಲ್ಲಿ ಅಂಬೇಡ್ಕರ್ ಪ್ರತಿಮೆಗೆ ಅಪಮಾನ

## ಕುತೂಹಲ ಮೂಡಿಸಿದ ಪುತ್ಥಳಿ ಬಳಿ ಸಿಕ್ಕ ಚೀಟಿ

**ಕಲಬುರಗಿ:** ಸಂವಿಧಾನ ಶಿಲ್ಪಿ ಬಿ.ಆರ್ ಅಂಬೇಡ್ಕರ್ ಅವರ ಪ್ರತಿಮೆಗೆ ಅಪಮಾನ ಪ್ರಕರಣಕ್ಕೆ ಸಂಬಂಧಿಸಿದಂತೆ ಪುತ್ಥಳಿ ಬಳಿ ಸಿಕ್ಕ ಚೀಟಿಯೊಂದು ತೀವ್ರ ಕುತೂಹಲ ಮೂಡಿಸಿದೆ. ಮಂಗಳವಾರ (ಜ.23) ರಂದು ಕಲಬುರಗಿ ಹೊರವಲಯದ ಕೋಟನೂರ (ಡಿ) ಗ್ರಾಮದಲ್ಲಿನ ಅಂಬೇಡ್ಕರ್ ಪ್ರತಿಮೆಗೆ ಅಪಮಾನ ಮಾಡಲಾಗಿತ್ತು. ಕಿಡಿಗೇಡಿಗಳು ಪುತ್ಥಳಿಗೆ ಚಪ್ಪಲಿ ಪುಟ 2



### ಹುಲಿ ಅಂಗಾಂಗ ಮಾರಾಟಕ್ಕೆ ಯತ್ನ

## ಇಬ್ಬರ ಬಂಧನ



**ಚಿಕ್ಕಮಗಳೂರು:** ಹುಲಿ ಉಗುರಿನ ಮಾಲೆ ಧರಿಸುತ್ತಿದ್ದ ಪ್ರಕರಣ ರಾಜ್ಯದಲ್ಲಿ ಭಾರೀ ಸುದ್ದಿ ಮಾಡಿತ್ತು. ಬಿಗ್?ಬಾಸ್ ಸ್ಪರ್ಧಿಯೊಬ್ಬರ ಬಂಧನವೂ ಆಗಿತ್ತು. ಬಳಿಕ ಕನ್ನಡದ ನಟರ ಫೋಟೋಗಳು ಹರಿದಾಡಿದವು. ಹೀಗಾಗಿ ಪ್ರಾಣಿಗಳ ಅಂಗಾಂಗಗಳನ್ನು ವಾಪಸ್ ಅರಣ್ಯ ಇಲಾಖೆಗೆ ಒಪ್ಪಿಸಲು ಸಾರ್ವಜನಿಕರಿಗೆ ಅವಕಾಶ ನೀಡಲಾಗಿತ್ತು. ಇದರ ಬೆನ್ನಲ್ಲೇ, ಚಿಕ್ಕಮಗಳೂರು ಜಿಲ್ಲೆಯಲ್ಲಿ ಹುಲಿ ಅಂಗಾಂಗ ಮಾರಾಟಕ್ಕೆ ಯತ್ನಿಸುತ್ತಿದ್ದ ಇಬ್ಬರನ್ನು ಬಂಧಿಸಲಾಗಿದೆ. ಪುಟ 2

### ಅಸ್ಸಾಂನಲ್ಲಿ ರಾಹುಲ್ ಗಾಂಧಿ ಭದ್ರತೆ ಬಗ್ಗೆ ಕಳವಳ

## ಅಮಿತ್ ಶಾಗೆ ಪತ್ರ ಬರೆದ ಖರ್ಗೆ

**ಅಸ್ಸಾಂ:** ಅಸ್ಸಾಂನಲ್ಲಿ ಭಾರತ್ ಜೋಡೋ ನ್ಯಾಯ ಯಾತ್ರೆ ವೇಳೆ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಎದುರಿಸಿರುವ ಭದ್ರತಾ ಲೋಪಗಳ ಬಗ್ಗೆ ಕಳವಳ ವ್ಯಕ್ತಪಡಿಸಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾಗೆ ಪತ್ರ ಬರೆದಿದ್ದಾರೆ. ರಾಜ್ಯಸಭೆಯ ವಿರೋಧಪಕ್ಷ ನಾಯಕರೂ ಆಗಿರುವ ಖರ್ಗೆ ಮಂಗಳವಾರ ರಾತ್ರಿ ಬರೆದ ಪತ್ರವು ಕಾಂಗ್ರೆಸ್ ನಾಯಕನ ಸುರಕ್ಷತೆಯ ಬಗ್ಗೆ ಮೂಡಿರುವ ಕಳವಳವನ್ನು ಎತ್ತಿ ಹೇಳಿದೆ. ಜನವರಿ 22ರಂದು ನಾಗಾಂವ್ ಜಿಲ್ಲೆಯಲ್ಲಿ ಬಿಜೆಪಿ ಕಾರ್ಯಕರ್ತರು ರಾಹುಲ್ ಗಾಂಧಿ ಬೆಂಗಾವಲು ಪಡೆಗೆ ಅಡ್ಡಿಪಡಿಸಿದರು ಎಂದು ಪತ್ರದಲ್ಲಿ ಬರೆದಿದ್ದಾರೆ.

ಅಸ್ಸಾಂ ಪೊಲೀಸರು ಮೂಕ ಪ್ರೇಕ್ಷಕರಾಗಿದ್ದಾರೆ ಮತ್ತು ಕೆಲವೊಮ್ಮೆ ಕಾರ್ಯಕರ್ತರ ಬೆಂಗಾವಲು ವಾಹನವನ್ನು ಪ್ರವೇಶಿಸಲು ಅವಕಾಶ ಮಾಡಿಕೊಟ್ಟಿದ್ದಾರೆ ಹೀಗಾಗಿ ರಾಹುಲ್ ಗಾಂಧಿ ಭದ್ರತೆಗೆ ಅಪಾಯವಿದೆ ಎಂದಿದ್ದಾರೆ. ಮಂಗಳವಾರ ಗುವಾಹಟಿಯ ಹೊರವಲಯದಲ್ಲಿ ಗಾಂಧಿ ನೇತೃತ್ವದ ಕಾಂಗ್ರೆಸ್ ಕಾರ್ಯಕರ್ತರು ಪೊಲೀಸ್ ಸಿಬ್ಬಂದಿಯೊಂದಿಗೆ ಘರ್ಷಣೆ ನಡೆಸಿದ ನಂತರ ಅಮಿತ್ ಶಾ ಗೆ ಪತ್ರ ಬರೆಯಲಾಗಿದೆ. ಪುಟ 2



# 25 ಕೋಟಿ ಆಸೆ ತೋರಿಸಿ 1.10 ಕೋಟಿ ರೂ ವಂಚನೆ

**ಮಂಡ್ಯ:** 25 ಕೋಟಿ ಆಸೆ ತೋರಿಸಿ ಪೇಪರ್ ನೋಟು ಕೊಟ್ಟು, 1.10 ಕೋಟಿ ರೂ ದೋಚಿ ಪರಾರಿಯಾಗಿರುವ ಘಟನೆ ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಶಿಂಷಾಪುರ ಗ್ರಾಮದಲ್ಲಿ ನಡೆದಿದೆ. ಸೂರ್ಯ ಎಂಬ ಅಪರಿಚಿತ ವ್ಯಕ್ತಿ ಆಮಿಷವೊಡ್ಡಿ ಶಿಂಷಾಪುರದ ಮೇರಿ ಎಂಬುವವರಿಗೆ ವಂಚನೆ ಮಾಡಿದ್ದಾನೆ. ಈ ಘಟನೆ ಸಂಬಂಧ ಬೆಳಕವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶ್ಯಾಲೋಮ್ ಎಜುಕೇಷನ್ ಚಾರಿಟಬಲ್ ಟ್ರಸ್ಟ್ ನಡೆಸುತ್ತಿದ್ದ ಮೇರಿ ಎಂಬುವವರಿಗೆ ಕರೆ ಮಾಡಿ ಶಿಕ್ಷಣ ಸಂಸ್ಥೆಗೆ ದೇಣಿಗೆ ಕೊಡುವ ಆಮಿಷವೊಡ್ಡಿ ಸೂರ್ಯ ಎಂಬಾತ ಪರಿಚಯವಾಗಿದ್ದ. ಟ್ರಸ್ಟ್‌ಗೆ 25 ಕೋಟಿ ರೂ. ದೇಣಿಗೆ ಕೊಡುತ್ತೇನೆ. ಬದಲಿಗೆ ತೆರಿಗೆ ಕಟ್ಟಲು ನಗದು ರೂಪದಲ್ಲಿ 1.10 ಕೋಟಿ ನಗದು ಕೊಡುವಂತೆ ಸೂರ್ಯ ಡಿಮ್ಯಾಂಡ್ ಮಾಡಿದ್ದ. ಸೂರ್ಯನ ಮಾತು ನಂಬಿ ಮೇರಿ ಅವರು ಕಷ್ಟಪಟ್ಟು 1.10 ಕೋಟಿ ನಗದು ಹಣ ಹೊಂದಿಸಿದ್ದರು. ಬಳಿಕ ಕಾರೊಂದರಲ್ಲಿ ನಕಲಿ ನೋಟು ತುಂಬಿಕೊಂಡು ಮೇರಿ ಮನೆಗೆ ಬಂದಿದ್ದ ವಂಚಕ ಸೂರ್ಯ ಔಪಚಾರಿಕ ಮಾತುಗಳನ್ನಾಡುತ್ತಾ ಮನೆಯವರಿಗೆಲ್ಲ ತಾನೇ ತಂದಿದ್ದ ಜ್ಯೂಸ್ ಕುಡಿಸಿದ್ದಾನೆ. ನಂತರ ಕುಟುಂಬದವರೆಲ್ಲ ಪ್ರಜ್ಞೆ ತಪ್ಪುತ್ತಿದ್ದಂತೆ ಮೇರಿಯವರು ಕಷ್ಟಪಟ್ಟ ಅರೇಂಜ್ ಮಾಡಿದ್ದ ಹಣದೊಂದಿಗೆ ಪರಾರಿಯಾಗಿದ್ದಾನೆ. ಪ್ರಜ್ಞೆ ಬಂದ ನಂತರ ಸೂರ್ಯನ ವಂಚನೆ ಬೆಳಕಿಗೆ ಬಂದಿದೆ. ತಕ್ಷಣ ಮೇರಿಯವರು ಪೊಲೀಸರಿಗೆ ದೂರು ಕೊಟ್ಟಿದ್ದಾರೆ. ಪ್ರಕರಣ ದಾಖಲಿಸಿಕೊಂಡು ವಂಚಕನ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ. ಮಳವಳ್ಳಿ ಡಿವೈಎಸ್ಪಿ ಪಿ.ಕೃಷ್ಣಪ್ಪ ನೇತೃತ್ವದಲ್ಲಿ ಆರೋಪಿ ಪತ್ತೆಗೆ ಕಾರ್ಯಾಚರಣೆ ನಡೆಯುತ್ತಿದೆ. ಪ್ರಕರಣ ಸಂಬಂಧ ಬೆಳಕವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಪ್ರೇಮಿ

**ಬೆಂಗಳೂರು:** ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಪ್ರೇಮಿ ಹಾಗೂ ಸ್ವಾತಂತ್ರ್ಯ ಹೋರಾಟಗಾರರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮಾಧ್ಯಮದರೊಂದಿಗೆ ಮಾತನಾಡಿದ ಅವರು, ಸುಭಾಷ್ ಚಂದ್ರ ಬೋಸ್ ಅವರ 127ನೇ ಜಯಂತಿಯನ್ನು ಆಚರಿಸುತ್ತಿದ್ದು, ಇಂದು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಸ್ಮರಿಸಿ, ಗೌರವಿಸಿದ್ದೇವೆ. ಕಾಂಗ್ರೆಸ್ ಅಧ್ಯಕ್ಷರಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದರು ಎಂದರು. ಗಾಂಧೀಜಿ ಹಾಗೂ ಸುಭಾಷ್ ಚಂದ್ರ ಬೋಸ್ ನಡುವೆ ಸ್ವಾತಂತ್ರ್ಯ ಹೋರಾಟದ ಹಾದಿಯ ಬಗ್ಗೆ ಭಿನ್ನಾಭಿಪ್ರಾಯ ಮೂಡಿತ್ತು. ಮಹಾತ್ಮ ಗಾಂಧೀಜಿ ಶಾಂತಿ, ಅಹಿಂಸೆ ಮೂಲಕ ಸ್ವಾತಂತ್ರ್ಯ ಗಳಿಸಬೇಕು ಎಂದರೆ ಸುಭಾಷ್ ಚಂದ್ರ ಬೋಸ್ ಅವರಿಗೆ ಅದರ ತದ್ವಿರುದ್ಧವಾದ ನಿಲುವು ಇತ್ತು. ಬೇರೆ ವಿಚಾರಗಳಲ್ಲಿ ಗಾಂಧೀಜಿಯವರ ಬಗ್ಗೆ ಅಪಾರವಾದ ಗೌರವವಿತ್ತು. ಈ ವಿಚಾರದಲ್ಲಿ ಮಾತ್ರ ಆಲೋಚನೆಗಳಲ್ಲಿ ಭಿನ್ನಾಭಿಪ್ರಾಯ ಇತ್ತು ಎಂದು ಹೇಳಿದರು. ಭಾರತೀಯ ರಾಷ್ಟ್ರೀಯ ಸೇನೆಯನ್ನು ಸ್ಥಾಪಿಸಿ ಅದರ ಮುಖ್ಯಸ್ಥರಾಗಿದ್ದರು. ಜಪಾನ್ ದೇಶದಲ್ಲಿ ವಿಮಾನ ದುರಂತದಲ್ಲಿ ಅವರು ಸಾವಿಗೀಡಾದರು. ಅಪ್ರತಿಮ ಸ್ವಾತಂತ್ರ್ಯ ಪ್ರೇಮಿ, ದೇಶಪ್ರೇಮಿಯಾಗಿದ್ದರು. ಸುಭಾಷ್ ಚಂದ್ರ ಬೋಸ್ ಅವರು ನಮಗೆಲ್ಲಾ ಆದರ್ಶ. ಅವರ ಆದರ್ಶಗಳನ್ನು ನಾವೆಲ್ಲರೂ ಅನುಸರಿಸುವುದೇ ಅವರಿಗೆ ಸಲ್ಲಿಸುವ ಗೌರವ. ಅವರ ತತ್ವಾದರ್ಶಗಳು ನಮಗೆ ದಾರಿದೀಪವಾಗಲಿ ಎಂದು ತಿಳಿಸಿದರು.

# ಅಲ್ಪಮತಿಗಳ ಬಗ್ಗೆ ನಾನು ಹೆಚ್ಚು ಒತ್ತುಕೊಡುವುದಿಲ್ಲ

**ಬೆಳಗಾವಿ:** ಅಯೋಧ್ಯೆ ರಾಮ ಮಂದಿರದಲ್ಲಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆ ಸಮಾರಂಭಕ್ಕೆ ಆಹ್ವಾನ ಮತ್ತು ದೇವಸ್ಥಾನಕ್ಕೆ ದೇಣಿಗೆ ನೀಡಿರುವ ವಿಚಾರವಾಗಿ ಬೆಳಗಾವಿಯ ಘಟಾನುಘಟಿ ನಾಯಕರ ನಡುವೆ ವಾಗ್ಯುದ್ಧ ಶುರುವಾಗಿದೆ. ರಾಮ ಮಂದಿರ ನಿರ್ಮಾಣಕ್ಕೆ ದೇಣಿಗೆ ನೀಡಿರುವ ವಿಚಾರವಾಗಿ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಮತ್ತು ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ನಡುವೆ ಮಾತಿನ ಜಟಾಪಟಿ ನಡೆದಿದೆ. 'ಪ್ರತಿಯೊಬ್ಬರು ಅಲ್ಪಮತಿಗೆ ಹೊಳೆದಷ್ಟು ಮಾತನಾಡುತ್ತಾರೆ. ಅಲ್ಪಮತಿಗಳ ಬಗ್ಗೆ ನಾನು ಹೆಚ್ಚು ಒತ್ತುಕೊಡುವುದಿಲ್ಲ' ಎಂದು ಶಾಸಕ ಲಕ್ಷ್ಮಣ ಸವದಿ ಪರೋಕ್ಷವಾಗಿ ರಮೇಶ್ ಜಾರಕಿಹೊಳಿಗೆ ಅಲ್ಪಮತಿ ಎಂದು ಜರಿದರು. ಅಥಣಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಮ ಮಂದಿರ ಆಹ್ವಾನ ಬಂದಿದೆಯಾ? ನೀವು ದೇಣಿ ಕೊಟ್ಟಿದ್ದೀರಾ? ಅಂತ ಮಾಧ್ಯಮದವರು ಪ್ರಶ್ನಿಸಿದರು. ಅದಕ್ಕೆ ನಾನು ಬಿಜೆಪಿಯಲ್ಲಿದ್ದಾಗ 10 ಲಕ್ಷ ರೂ. ದೇಣಿಗೆ ಕೊಟ್ಟಿರುವೆ ಎಂದು ಹೇಳಿದೆ. ಇಲ್ಲಿ ಯಾರೋ ಒಬ್ಬರು ಕೋಟಿ ಕೊಟ್ಟವರಿಗೆ ಕರೆದಿಲ್ಲಾ ಹತ್ತು ಲಕ್ಷ ಕೊಟ್ಟವರು ಏನು ದೊಡ್ಡ ವಿಷಯ ಅಂದಿದ್ದಾರೆ. ಅದರ ಬಗ್ಗೆ ನನಗೆ ಬೇಸರವೇ ಇಲ್ಲ ಎಂದರು. ನನಗೆ ಯಾಕೆ ಕರೆದಿಲ್ಲ ಅಂತ ಕೇಳಿಲ್ಲ. ನನ್ನ ತಂದೆ ತಾಯಿ ನನಗೆ ಲಕ್ಷ್ಮಣ ಅಂತ ಹೆಸರು ಇಟ್ಟಿದ್ದಾರೆ. ಶ್ರೀರಾಮನ ಸಹೋದರ ಲಕ್ಷ್ಮಣನ ಹೆಸರು ನನಗೆ ನಾಮಕರಣ ಮಾಡಿದ್ದಾರೆ. ಇವರು ಹಣ ಸಂಗ್ರಹ ಮಾಡುವಂತವರು. ಹಣ ಸಂಗ್ರಹ ಮಾಡಿ ರಾಮಮಂದಿರಕ್ಕೆ ಕೊಟ್ಟಿದ್ದಾರೆ ಎಂದು ಹೇಳುವ ಮೂಲಕ ರಮೇಶ್ ಜಾರಕಿಹೊಳಿ ಸ್ವಂತ ಹಣ ನೀಡದೇ ಸಂಗ್ರಹ ಮಾಡಿ ಕೊಟ್ಟಿದ್ದಾರೆ. ಈ ಶುಭ ಸಂದರ್ಭದಲ್ಲಿ ಚರ್ಚೆ ಬೇಡ. ಸಮಯ ಬಂದಾಗ ಚರ್ಚೆ ಮಾಡೋಣ ಅಂತಾ ಪರೋಕ್ಷವಾಗಿ ರಮೇಶ್ ಜಾರಕಿಹೊಳಿಗೆ ತಿರುಗೇಟು ನೀಡಿದರು. ಅಯೋಧ್ಯೆ ರಾಮಮಂದಿರದಲ್ಲಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆಗೆ ಆಹ್ವಾನ ನೀಡಿಲ್ಲ ಎಂದು ರಾಜ್ಯದ ಪ್ರಮುಖ ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದರು. ಇದು ರಾಜಕೀಯ ಬಣ್ಣ ಪಡೆದುಕೊಂಡಿತು. ಈ ವಿಚಾರವಾಗಿ ಶಾಸಕ ಲಕ್ಷ್ಮಣ ಸವದಿ ಬೆಳಗಾವಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುವಾಗ 'ಮಂದಿರಕ್ಕೆ ನಾನು 10 ಲಕ್ಷ ರೂ. ದೇಣಿಗೆ ಕೊಟ್ಟಿದ್ದೇನೆ. ನಾನು ಲಕ್ಷ್ಮಣ ಅಯೋಧ್ಯೆಗೆ ಹೋಗುವುದಿಲ್ಲ' ಎಂದು ಹೇಳಿದ್ದರು. ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಮಾತಿಗೆ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ತಿರುಗೇಟು ನೀಡಿದ್ದರು. 'ನಾನು ಒಂದು ಕೋಟಿ ರೂ. ದೇಣಿಗೆ ನೀಡಿದ್ದೇನೆ. ನನಗು ಕೂಡ ಸಮಾರಂಭಕ್ಕೆ ಆಹ್ವಾನ ಬಂದಿಲ್ಲ' ಎಂದು ಪರೋಕ್ಷವಾಗಿ ಲಕ್ಷ್ಮಣ ಸವದಿಗೆ ತಿರುಗೇಟು ನೀಡಿದ್ದರು. ಒಟ್ಟಿನಲ್ಲಿ ರಾಮಮಂದಿರಕ್ಕೆ ದೇಣಿಗೆ ನೀಡಿರುವ ಮತ್ತು ಆಹ್ವಾನದ ವಿಚಾರವಾಗಿ ಇಬ್ಬರು ನಾಯಕರ ನಡುವೆ ವಾಗ್ಯುದ್ಧ ಶುರುವಾಗಿದೆ.

# ನಿಜವಾದ ಬ್ರಾಹ್ಮಣರು, ಸ್ವಾಮೀಜಿಗಳು ಮೋದಿಯನ್ನು ಗರ್ಭಗುಡಿಗೆ ಬಿಡಬಾರದಿತ್ತು





**ಚಿಕ್ಕಬಳ್ಳಾಪುರ:** ನಿಜವಾದ ಬ್ರಾಹ್ಮಣರು-ಸ್ವಾಮೀಜಿಗಳು ಆಗಿದ್ರೆ, ಅಯೋಧ್ಯೆ ರಾಮಮಂದಿರ ಲೋಕಾರ್ಪಣೆ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯನ್ನು ಗರ್ಭಗುಡಿಗೆ ಬಿಡಬಾರದಿತ್ತು ಅಂತ ಮಾಜಿ ಸಿಎಂ ವೀರಪ್ಪಮೊಯ್ಲಿ ಹೇಳಿದರು.

ಚಿಕ್ಕಬಳ್ಳಾಪುರ ನಗರದಲ್ಲಿ ಕಾಂಗ್ರೆಸ್ ವತಿಯಿಂದ ನಡೆದ ಪ್ರತಿಭಟನೆ ವೇಳೆ ಮಾತನಾಡಿದ ಅವರು, ರಾಮಮಂದಿರ ಅಪೂರ್ಣ ಮಂದಿರ. ಕೇವಲ ರಾಮಲಲ್ಲಾ ಪ್ರಾಣಪ್ರತಿಷ್ಠಾಪನೆ ಮಾಡಿದ್ರೆ ಸಾಲದು. ಅಲ್ಲಿ ರಾಮ ಲಕ್ಷಣ, ಸೀತಾ ಹಾಗೂ ಆಂಜನೇಯನ ವಿಗ್ರಹಗಳು ಇರಬೇಕು ಆಗಲೇ ರಾಮಮಂದಿರ ಪೂರ್ಣ ಆಗೋದು ಎಂದರು. ಗುಜರಾತ್‌ನ ಹತ್ಯಾಕಾಂಡದ ವೇಳೆ ಅಂದಿನ ಸಿಎಂ ಆಗಿದ್ದ ನರೇಂದ್ರ ಮೋದಿ ರಾಜಧರ್ಮ, ಕಾನೂನು ಪರಿಪಾಲನೆ ಮಾಡಲಿಲ್ಲ. ಅಂತಹ ನರೇಂದ್ರ ಮೋದಿಯವರಿಂದ ರಾಮಲಲ್ಲಾ ಪ್ರತಿಷ್ಠಾಪನೆ ಮಾಡಿಸಿದ್ದು ಎಷ್ಟು ಸರಿ..? ಅವರಿಂದ ದೇವಾಲಯಕ್ಕೆ ಎಷ್ಟು ಪಾವಿತ್ರ್ಯತೆ ಬರಲಿದೆ..? ನರೇಂದ್ರ ಮೋದಿ ಗರ್ಭಗುಡಿಗೆ ಪ್ರವೇಶ ಮಾಡಿದ್ದೇ ತಪ್ಪು, ಪ್ರಾಣ ಪ್ರತಿಷ್ಠಾಪನೆ ಮಾಡಿದ್ದು ಸಹ ತಪ್ಪು, ನಿಜವಾದ ಸ್ವಾಮೀಜಿಗಳು, ಬ್ರಾಹ್ಮಣರು ಆಗಿದ್ರೆ ನರೇಂದ್ರ ಮೋದಿಯನ್ನ ಗರ್ಭಗುಡಿ ಒಳಗೆ ಬಿಡಬಾರದಿತ್ತು ಅಂತ ವಾಗ್ದಾಳಿ ನಡೆಸಿದರು.

# ಬೆಂಗಳೂರಿನಲ್ಲಿ ಜಿಎಎಫ್‌ಎಕ್ಸ್ ಸಮ್ಮೇಳನ



**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಜನವರಿ 29 ರಿಂದ ಗೇಮಿಂಗ್ ಮತ್ತು ಅನಿಮೇಷನ್ ಸಮ್ಮೇಳನ ನಡೆಯಲಿದೆ ಎಂದು ಐಟಿ-ಬಿಟಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಕರ್ನಾಟಕ ಸರ್ಕಾರ ಮತ್ತು ಅಬೈ ಸಂಯುಕ್ತಾಶ್ರಯದಲ್ಲಿ ಮೂರು ದಿನಗಳ ಕಾಲ ನಡೆಯಲಿರುವ ಸಮ್ಮೇಳನದಲ್ಲಿ 10 ರಾಷ್ಟಗಳಿಂದ 32 ಅಂತಾರಾಷ್ಟ್ರೀಯ ಭಾಷಣಕಾರರು ಭಾಗಿಯಾಗುತ್ತಾರೆ. ನಗರದ ಖಾಸಗಿ ಹೋಟೆಲ್‌ನಲ್ಲಿ ಸಮ್ಮೇಳನ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮ್ಮೇಳನಕ್ಕೆ ಚಾಲನೆ ನೀಡಲಿದ್ದಾರೆ ಎಂದರು.

ರಾಮಮಂದಿರಕ್ಕೆ ಜನರನ್ನು ಕರೆದುಕೊಂಡು ಹೋಗಲು ಬಿಜೆಪಿ ವ್ಯವಸ್ಥೆ ಮಾಡುತ್ತಿರುವ ವಿಚಾರವಾಗಿ ಮಾತನಾಡಿದ ಅವರು, ರಾಮಮಂದಿರಕ್ಕೆ ಕರೆದೊಯ್ಯಲಿ. ತೀರ್ಥಯಾತ್ರೆ ತಾನೆ, ಸ್ವಲ್ಪ ಪ್ರಬುದ್ಧತೆ ಆದರು ಬರಲಿ. ಬಂಡವಾಳ ಬಯಲಾಗುತ್ತೆ. ರಾಜ್ಯ ಸರ್ಕಾರದಿಂದ ಅಯೋಧ್ಯೆಗೆ ಕರೆದುಕೊಂಡು ಹೋಗುವ ಯಾವುದೇ ಯೋಜನೆ ಇಲ್ಲ ಎಂದು ಹೇಳಿದರು.

ರಾಮಮಂದಿರದ ಬಗ್ಗೆ ನಾವು ಎಲ್ಲಿ ಪ್ರಶ್ನೆ ಮಾಡಿದ್ದೇವೆ? ಅಪೂರ್ಣ ಮಂದಿರದಲ್ಲಿ ಮೂರ್ತಿ ಪ್ರತಿಷ್ಠಾಪನೆ ಏಕೆ? ಅಂತ ಸಾಧು ಸಂತರು ಕೇಳಿದ್ದಾರೆ, ನಾವು ಕೇಳಿದ್ದಲ್ಲ. ನಾನು ಯಾವ ದೇವಾಲಯಕ್ಕೂ ಹೋಗುವುದಿಲ್ಲ. ಯಾರಾದರೂ ಬನ್ನಿ ಪ್ರಿಯಾಂಕ್ ಅಂದರೇ ಬರುತ್ತೇನೆ. ಯಾರಾರೂ ಕರೆದುಕೊಂಡು ಹೋದರೆ ಹೋಗುತ್ತೇನೆ. ಕಲಿಯಲು ಹೋದರೆ ತಪ್ಪೇನು? ನಾನು ಜನತಾ ಜನಾರ್ದನ ಭಕ್ತ. ನಾನು ಬಸವ, ಸಂವಿಧಾನ ಮತ್ತು ಅಂಬೇಡ್ಕರ್ ತತ್ವ ನಂಬಿದವನು. ನನಗೆ ಭಕ್ತಿ ಇಲ್ಲ, ಏನು ಮಾಡಲಿ ಎಂದರು. ಬಿಜೆಪಿಯ ಎಷ್ಟು ಜನ ಶಾಸಕರು ರಾಮಾಯಣ ಓದಿದ್ದಾರೆ? ಎಷ್ಟು ಜನರಿಗೆ ಹನುಮಾನ್ ಚಾಲೀಸಾ ಬರುತ್ತದೆ? ನಾನು ಋಷಿಕೇಶ, ಬನಾರಸ್ ಎಲ್ಲಾ ಕಡೆ ಹೋಗಿದ್ದೇನೆ. ನಾನು ನಂಬಿರುವುದು ಬಸವ ತತ್ವ, ಅಂಬೇಡ್ಕರ್ ತತ್ವ ಮತ್ತು ಸಂವಿಧಾನ ತತ್ವ. ನನಗೆ ಭಕ್ತಿ ಇಲ್ಲ ಏನು ಮಾಡಲಿ. ನೀವು ಯಾರಾದರೂ ಅಯೋಧ್ಯೆಗೆ ಕರೆದುಕೊಂಡು ಹೋದರೆ ಅಧ್ಯಯನ ಮಾಡಲು ಬರುತ್ತೇನೆ ಎಂದು ಸ್ಪಷ್ಟಪಡಿಸಿದರು.

# ಹೆಚ್ಚು ಭಕ್ತರು ಬರುವ ದೇವಳಗಳಿಗೆ ಪ್ರಾಧಿಕಾರ ರಚನೆ



**ಕುಂದಾಪುರ:** ಹೆಚ್ಚೆಚ್ಚು ಭಕ್ತರು ಆಗಮಿಸುವ ಮೈಸೂರಿನ ಚಾಮುಂಡೇಶ್ವರಿ, ಕೊಪ್ಪಳದ ಹುಲಿಗೆಮ್ಮ ಹಾಗೂ ದೊಡ್ಡಬಳ್ಳಾಪುರದ ಘಾಟಿ ಸುಬ್ರಮಣ್ಯ ದೇವಸ್ಥಾನಗಳ ಉಸ್ತುವಾರಿಗೆ ಪ್ರಾಧಿಕಾರ ರಚನೆ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದು ರಾಜ್ಯ ಮುಜರಾಯಿ, ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ. ಇಲ್ಲಿನ ಮಾರಣಕಟ್ಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಜರಾಯಿ ಇಲಾಖೆ ದೇವಸ್ಥಾನಗಳ ಆಸ್ತಿ ಸರ್ವೇ ಮಾಡಲು ಈಗಾಗಲೇ ಕಂದಾಯ ಇಲಾಖೆ ಜೊತೆ ಕ್ರಮ ವಹಿಸಲಾಗಿದೆ. ಇಲಾಖೆಗೆ ಆಸ್ತಿಗಳು ಪರಭಾರೆ ಅಥವಾ ಅತಿಕ್ರಮಣವಾಗಿದ್ದರೆ ಹಿಂಪಡೆಯಲು ಸ್ಪಷ್ಟ ನಿರ್ಧಾರ ಕೈಗೊಳ್ಳಲಾಗಿದೆ ಎಂದರು. ಮುಜರಾಯಿ ದೇವಸ್ಥಾನದ ಎ, ಬಿ ದರ್ಜೆಯ ನೌಕರರನ್ನು ಹೊರತುಪಡಿಸಿ ಉಳಿದವರನ್ನು ಇಲಾಖೆಯ ಇತರೆ ದೇವಾಲಯಗಳಿಗೆ ಅಂತರ್ ವರ್ಗಾವಣೆ ಮಾಡುವ ಪ್ರಸ್ತಾಪ ಇಲ್ಲ. ಆದರೆ ನೌಕರರ ಮೇಲೆ ನಿರ್ದಿಷ್ಟ ದೂರುಗಳು ಬಂದಲ್ಲಿ ತನಿಖೆ ನಡೆಸಿ ವರ್ಗಾವಣೆ ಸೇರಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದರು. ಕೊಲ್ಲೂರು ಸೇರಿ ಮುಜರಾಯಿ ದೇವಸ್ಥಾನಗಳ ವ್ಯವಸ್ಥಾಪನಾ ಸಮಿತಿಗಳ ನೇಮಕಾತಿ ಕುರಿತು ಸದ್ಯವೇ ತೀರ್ಮಾನ ಕೈಗೊಳ್ಳುವುದಾಗಿ ಹೇಳಿದರು.

**ಕೊಲ್ಲೂರು ಅವ್ಯವಸ್ಥೆ ತನಿಖೆ:** ಕೊಲ್ಲೂರು ಪರಿಸರದಲ್ಲಿ ಒಳಚರಂಡಿ ಅವ್ಯವಸ್ಥೆಯಿಂದ ಇಲ್ಲಿನ ಧಾರ್ಮಿಕತೆಗೆ ಧಕ್ಕೆಯಾಗುತ್ತಿರುವ ದೂರಿದ್ದು, ಶೀಘ್ರ ವರದಿ ತರಿಸಿ ಸಮಗ್ರ ತನಿಖೆ ನಡೆಸುವುದಾಗಿ ಸಚಿವರು ಹೇಳಿದರು. ಮುಜರಾಯಿ ಇಲಾಖೆ ಹಣವನ್ನು ಇಲಾಖೆ ಉದ್ದೇಶಗಳಿಗಲ್ಲದೆ ಬೇರೆ ಉದ್ದೇಶಗಳಿಗೆ ಬಳಸುವುದು ಸಾಧ್ಯವಿಲ್ಲ. ಮುಜರಾಯಿ ದೇವಸ್ಥಾನಗಳಿಂದ ಆಗಿರುವ ಕಾಮಗಾರಿಗಳ ನಿರ್ವಹಣೆ ಕೂಡ ದೇವಸ್ಥಾನದ್ದೇ ಆಗಿರುತ್ತದೆ. ಕೊಲ್ಲೂರಿನಲ್ಲಿ ಒಳಚರಂಡಿ ಯೋಜನೆಗೆ ಬಳಕೆಯಾಗಿರುವ ಇಲಾಖೆ ಅನುದಾನದ ಮಾಹಿತಿ ಪಡೆದುಕೊಳ್ಳುತ್ತೇನೆ. ಯೋಜನೆ ನಿರ್ವಹಣೆ ಬಗ್ಗೆಯೂ ಮಾಹಿತಿ ಪಡೆದುಕೊಳ್ಳುತ್ತೇನೆ. ತಪ್ಪಾಗಿದ್ದಲ್ಲಿ ಖಂಡಿತಾ ಕ್ರಮಕೈಗೊಳ್ಳುತ್ತೇನೆ ಎಂದರು.

# ಉಡುಗೊರೆಗಳ ಮಹಾಪೂರ

**ರಾಮಾಯಣ ಪ್ರಚಾರಕನಿಂದ 18.3 ಕೋಟಿ ರೂಪಾಯಿ ದೇಣಿಗೆ:** ಕಳೆದ 6 ದಶಕಗಳಿಂದ ದೇಶ, ವಿದೇಶದಲ್ಲಿ ರಾಮಾಯಣ ಪ್ರಚಾರದಲ್ಲಿ ತಮ್ಮ ತೊಡಗಿಸಿಕೊಂಡಿರುವ ಮೊರಾರಿ ಬಾಪು ಎಂಬವರು ರಾಮಮಂದಿರ ನಿರ್ಮಾಣ ಕಾರ್ಯಕ್ಕೆ 18.3 ಕೋಟಿ ರೂಪಾಯಿ ಸಂಗ್ರಹಿಸಿ ಕೊಟ್ಟಿದ್ದಾರೆ.

**ಅಯೋಧ್ಯೆಯ ರಾಮ ಮಂದಿರ ಗರ್ಭಗುಡಿಯ ಚಿನ್ನಲೇಪಿತ ದ್ವಾರ:**

ಅಮೆರಿಕ, ಬ್ರಿಟನ್, ಯುರೋಪ್, ಕೆನಡಾ ಹೀಗೆ ವಿವಿಧ ದೇಶಗಳಲ್ಲಿ ಕಾರ್ಯಕ್ರಮ ನೀಡಿ ಈ ದೇಣಿಗೆ ಸಂಗ್ರಹಿಸಿದ್ದಾರೆ. ಈಗಾಗಲೇ 11.30ಕೋಟಿ ರೂಪಾಯಿಯನ್ನು ಅಯೋಧ್ಯೆ ಟ್ರಸ್ಟ್‌ಗೆ ಹಸ್ತಾಂತರಿಸಿದ್ದು, ಉಳಿದ ಹಣವನ್ನು ಫೆಬ್ರವರಿಯನ್ನು ನೀಡುವುದಾಗಿ ಹೇಳಿದ್ದಾರೆ.

**ವಿದೇಶಗಳಿಂದ ರಾಮನಿಗೆ ಹರಿದು ಬಂತು 8 ಕೋಟಿ ರೂ.:** ಸೋಮವಾರ ರಾಮಮಂದಿರ ಉದ್ಘಾಟನಾ ಕಾರ್ಯಕ್ರಮದಲ್ಲಿ ಕುಟುಂಬ ಸಮೇತರಾಗಿ ಪಾಲ್ಗೊಂಡಿದ್ದ ಖ್ಯಾತ ಉದ್ಯಮಿ ಮುಕೇಶ್ ಅಂಬಾನಿ ರಾಮಮಂದಿರಕ್ಕೆ 2.51 ಕೋಟಿ ರೂಪಾಯಿ ದೇಣಿಗೆ ನೀಡಿದ್ದಾರೆ. ಇನ್ನು ಅಮೆರಿಕ, ಕೆನಡಾ, ಬ್ರಿಟನ್ ಸೇರಿ ವಿದೇಶಗಳಲ್ಲಿರುವ ಅನಿವಾಸಿ ಭಾರತೀಯರು, ರಾಮನ ಭಕ್ತರು 8 ಕೋಟಿ ರೂಪಾಯಿಗೂ ಹೆಚ್ಚು ದೇಣಿಗೆಯನ್ನು ರಾಮಮಂದಿರಕ್ಕೆ ಸಮರ್ಪಿಸಿದ್ದಾರೆ.

# ಫೆಬ್ರವರಿ 1 ರಂದು ಬಜೆಟ್!

ಹೊರಹೋಗುವ ಸರ್ಕಾರದ ಅವಧಿಯಲ್ಲಿ ಮಧ್ಯಂತರ ಬಜೆಟ್ ಅನ್ನು ಮಂಡಿಸಲಾಗುತ್ತದೆ. ಮುಂದಿನ ಸರ್ಕಾರ ಪೂರ್ಣ ಪ್ರಮಾಣದ ಬಜೆಟ್ ಮಂಡಿಸುವ ಹೊಣೆಗಾರಿಕೆ ವಹಿಸಿಕೊಳ್ಳಲಿದೆ.

ಮಧ್ಯಂತರ ಬಜೆಟ್ ಅನ್ನು 'ವೋಟ್-ಆನ್-ಅಕೌಂಟ್' ಎಂದೂ ಕರೆಯುತ್ತಾರೆ, ಹೊಸ ಸರ್ಕಾರವು ಅಧಿಕಾರ ವಹಿಸಿಕೊಳ್ಳುವವರೆಗೆ ಅಗತ್ಯವಾದ ನಿರ್ದಿಷ್ಟ ಖರ್ಚುಗಳನ್ನು ಮಾಡುವ ಅಧಿಕಾರವಾಗಿ ಇದು ಕಾರ್ಯನಿರ್ವಹಿಸುತ್ತದೆ.

ವೋಟ್ ಆನ್ ಅಕೌಂಟ್ ಸಮಯದಲ್ಲಿ ಪ್ರಮುಖ ನೀತಿ ಪ್ರಕಟಣೆಗಳನ್ನು ಮಾಡಲಾಗುವುದಿಲ್ಲ, ಆದಾಗ್ಯೂ, ಗಣನೀಯ ಘೋಷಣೆಗಳನ್ನು ಮಾಡುವುದರ ವಿರುದ್ಧ ಯಾವುದೇ ಸಾಂವಿಧಾನಿಕ ನಿಷೇಧವಿಲ್ಲ.

ಮಧ್ಯಂತರ ಬಜೆಟ್‌ಗಳು ಮತದಾರರ ಮೇಲೆ ಯಾವುದೇ ಅನಗತ್ಯ ಪ್ರಭಾವ ಬೀರದಂತೆ ನೋಡಿಕೊಳ್ಳಲು ಭಾರತದ ಚುನಾವಣಾ ಆಯೋಗವು ಕೆಲವು ಮಿತಿಗಳನ್ನು ವಿಧಿಸಿದೆ.

ಸರ್ಕಾರವು ಪ್ರಮುಖ ತೆರಿಗೆಗಳು ಅಥವಾ ನೀತಿ ಸುಧಾರಣೆಗಳನ್ನು ಬಜೆಟ್‌ನಲ್ಲಿ ಪ್ರಸ್ತಾಪಿಸಲು ಸಾಧ್ಯವಿಲ್ಲ ಏಕೆಂದರೆ ಅದು ಆಡಳಿತದ ವಿತರಣೆಯ ಪರವಾಗಿ ಮತದಾರರ ಮೇಲೆ ಪ್ರಭಾವ ಬೀರಬಹುದು. ವೋಟ್-ಆನ್-ಅಕೌಂಟ್ ಎರಡು ತಿಂಗಳ ಅವಧಿಯವರೆಗೆ ಪರಿಣಾಮಕಾರಿಯಾಗಿ ಉಳಿಯುತ್ತದೆ, ಅಗತ್ಯವಿದ್ದರೆ ವಿಸ್ತರಣೆಯನ್ನೂ ಮಾಡಬಹುದಾಗಿದೆ.

ಸಂವಿಧಾನದ 116 ನೇ ವಿಧಿಯ ಪ್ರಕಾರ, ವೋಟ್-ಆನ್-ಖಾತೆಯು ಸರ್ಕಾರಕ್ಕೆ 'ಕನ್ಸಾಲಿಡೇಟೆಡ್ ಫಂಡ್ ಆಫ್ ಇಂಡಿಯಾ'ದಿಂದ ಮುಂಗಡ ಹಂಚಿಕೆಯನ್ನು ಸೂಚಿಸುತ್ತದೆ, ನಿರ್ದಿಷ್ಟವಾಗಿ ತಕ್ಷಣದ ವೆಚ್ಚದ ಅಗತ್ಯಗಳನ್ನು ಪರಿಹರಿಸಲು ಇದನ್ನು ಗೊತ್ತುಪಡಿಸಲಾಗಿದೆ.

# ಹಲ್ವಾ ತಿನಿಸುವ ಕಾರ್ಯಕ್ರಮ

**ಏನಿದು ಹಲ್ವಾ ಕಾರ್ಯಕ್ರಮ:** ಒಂದು ಬಜೆಟ್ ತಯಾರಿಸಲು ಆರು ತಿಂಗಳ ಹಿಂದಿನಿಂದಲೇ ಕೆಲಸಗಳು ನಡೆಯುತ್ತವೆ. ಬಜೆಟ್ ಅನ್ನು ಅಂತಿಮಗೊಳಿಸಿ ಬಜೆಟ್ ಪುಸ್ತಕ ಸೇರಿದಂತೆ ಅದಕ್ಕೆ ಸಂಬಂಧಿಸಿ ವಿವಿಧ ದಾಖಲೆಗಳನ್ನು ಮುದ್ರಿಸಲಾಗುತ್ತದೆ. ಬಜೆಟ್ ಅನ್ನು ಅಂತಿಮಗೊಳಿಸಿದ ಖುಷಿಯನ್ನು ಆಚರಿಸಲು ಹಲ್ವಾ ಕಾರ್ಯಕ್ರಮ ನಡೆಸಲಾಗುತ್ತದೆ. ಪುಸ್ತಕ ಮುದ್ರಣಕ್ಕೆ ಮೊದಲು ಇದು ನಡೆಯುತ್ತದೆ.

ಹಲ್ವಾ ಕಾರ್ಯಕ್ರಮದಲ್ಲಿ ದೊಡ್ಡ ಕಡಾಯಿಯಲ್ಲಿ ಹಲ್ವಾ ಸಿಹಿಯನ್ನು ತಯಾರಿಸಲಾಗುತ್ತದೆ. ಹಣಕಾಸು ಖಾತೆ ಹೊತ್ತವರು ಸಿಹಿ ತಯಾರಿಸುವ ಕಾರ್ಯಕ್ಕೆ ಕೈಜೋಡಿಸುತ್ತಾರೆ. ಸಿಹಿ ತಯಾರಾದ ಬಳಿಕ ತಮ್ಮ ಸಚಿವಾಲಯದ ಸಿಬ್ಬಂದಿಗೆ ಸಿಹಿ ನೀಡುತ್ತಾರೆ.

**ಬಜೆಟ್ ತಯಾರಿಸುವ ಶ್ರಮ ಅಷ್ಟಿಷ್ಟಲ್ಲ:** ಬಜೆಟ್ ಅನ್ನು ತಯಾರಿಸುವ ಕಾರ್ಯ ಬಹಳ ವಿಶೇಷವಾದುದು. ಬಜೆಟ್ ಮಂಡನೆ ಆಗುವವರೆಗೂ ಇದನ್ನು ಬಹಳ ರಹಸ್ಯದಲ್ಲಿ ಇಟ್ಟುಕೊಳ್ಳಬೇಕಾಗುತ್ತದೆ. ಇದರಲ್ಲಿ ತೊಡಗಿರುವ ಎಲ್ಲಾ ಸಿಬ್ಬಂದಿಯನ್ನೂ ಪ್ರತ್ಯೇಕವಾಗಿ ಇಡಲಾಗುತ್ತದೆ. ಬಜೆಟ್ ಮಂಡನೆ ಆಗುವವರೆಗೂ ಇವರಿಗೆ ಹೊರಜಗತ್ತಿನ ಸಂಪರ್ಕವೇ ಇರುವುದಿಲ್ಲ.

ಗುಪ್ತಚರರ ಕಣ್ಗಾವಲು ಸದಾ ಇರುತ್ತದೆ. ತುರ್ತು ಕರೆಗೆ ಮಾತ್ರವೇ ಆಸ್ಪದ ಇರುತ್ತದೆ. ಫೋನ್ ಮಾಡಿದರೂ ಅದರ ಮೇಲೂ ಕಿವಿ ಇರುತ್ತದೆ. ಪ್ರಬಲ ಸೈಬರ್ ಸೆಕ್ಯೂರಿಟಿ ವ್ಯವಸ್ಥೆ ಇರುತ್ತದೆ. ಹಣಕಾಸು ಸಚಿವರು ಮಾತ್ರವೇ ಇವರಿರುವ ಸ್ಥಳಕ್ಕೆ ಹೋಗಿ ಬರಬಹುದು. ಅವರು ಹೋದರೂ ಅಲ್ಲಿಂದ ಮೊಬೈಲ್ ಫೋನ್ ಬಳಸಲು ನಿರ್ಬಂಧ ಇರುತ್ತದೆ.

ಈಗ ಬಜೆಟ್ ಪುಸ್ತಕಗಳನ್ನು ಮುದ್ರಿಸುವ ಕಾರ್ಯ ಕೈಬಿಡಲಾಗಿದೆ. ಎಲ್ಲವೂ ಡಿಜಿಟಲ್ ಆಗಿದೆ. ಆದರೂ ಬಜೆಟ್ ತಯಾರಿಕೆಯ ಶ್ರಮ ಕಡಿಮೆ ಆಗಿಲ್ಲ. ಹೀಗಾಗಿ, ಹಲ್ವಾ ತಿನಿಸುವ ಕಾರ್ಯಕ್ರಮ ಇನ್ನೂ ಮುಂದುವರಿದುಕೊಂಡು ಬಂದಿದೆ.

# ಪುಟ ಸೇರಲಿದೆ ಕೆಜಿಎಫ್!

ಸದ್ಯ ರಾಜ್ಯ ಸರ್ಕಾರದ ಅಂಗಳದಲ್ಲಿ ಕೆಜಿಎಫ್ ಚಿನ್ನದ ಗಣಿ ಪ್ರದೇಶ ಇದ್ದು, ರಾಜ್ಯ ಸರ್ಕಾರ ಕೈಗಾರಿಕಾ ಪ್ರದೇಶ ಹಾಗೂ ಹೊಸ ಟೌನ್ ಶಿಪ್ ಮಾಡುವ ಆಲೋಚನೆಯಲ್ಲಿದೆ.

ಕೇಂದ್ರ ಗಣಿ ಇಲಾಖೆಯ ಸ್ಪಷ್ಟನೆ ಏನು

ಕೆಜಿಎಫ್ ಚಿನ್ನದ ಗಣಿಯ ಕೇಂದ್ರದ ಗುತ್ತಿಗೆ ಅವಧಿ ಮುಕ್ತಾಯವಾದ ಕುರಿತು ಕೇಂದ್ರ ಗಣಿ ಇಲಾಖೆಯ ಕಾರ್ಯದರ್ಶಿ ಕಾಂತರಾವ್ ಸ್ಪಷ್ಟನೆ ನೀಡಿದ್ದು, ಗಣಿ ಪ್ರದೇಶದ ಒತ್ತುವರಿ ತೆರವು ಕಾರ್ಯ ಹಾಗೂ ಸೈನೈಡ್ ಗುಡ್ಡಗಳ ಮರುಸಂಸ್ಕರಣೆ ಪ್ರಕ್ರಿಯೆ ಮುಗಿದ ನಂತರ ರಾಜ್ಯಕ್ಕೆ ಅಧಿಕೃತವಾಗಿ ಭೂಮಿ ಹಸ್ತಾಂತರ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಕೆಜಿಎಫ್ ಚಿನ್ನದ ಗಣಿಗಳನ್ನು ಸಾರ್ವಜನಿಕ ಸಹಭಾಗಿತ್ವದಲ್ಲಿ ಪುನಾರಂಭಿಸಲು ಕೇಂದ್ರ ಸರಕಾರ ಚಿಂತನೆ ನಡೆಸಿದೆ ಎಂದು ಕಳೆದ ವರ್ಷ ವರದಿಯಾಗಿತ್ತು. ಆದರೆ, ಇದೀಗ ಗಣಿ ಶಾಶ್ವತವಾಗಿ ಇತಿಹಾಸದ ಪುಟ ಸೇರುವ ಎಲ್ಲ ಸಾಧ್ಯತೆ ಗೋಚರಿಸಿದೆ.

ಮುಚ್ಚಿದ್ದೇಕೆ ಕೆಜಿಎಫ್ ಚಿನ್ನದ ಗಣಿ

ನಿಕ್ಷೇಪ ಕೊರತೆ ಮತ್ತು ಹೆಚ್ಚುತ್ತಿರುವ ಕಾರ್ಯಾಚರಣೆ ಬೆಲೆಗಳ ಕಾರಣ ಕೋಲಾರದ ಕೆಜಿಎಫ್ ಚಿನ್ನದ ಗಣಿಯನ್ನು 2001 ರಲ್ಲಿ ಮುಚ್ಚಲಾಗಿತ್ತು. ಅದಾದ ನಂತರ ಅದನ್ನು ಪುನರಾರಂಭಿಸುವ ಪ್ರಯತ್ನಗಳು ನಡೆಯುತ್ತಲೇ ಇದ್ದವು.

# 26ಕ್ಕೆ ಮತ್ತೆ ಸಭೆ

ಇದನ್ನು ಅಂತಿಮಗೊಳಿಸಲು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಸಮ್ಮತಿಸುತ್ತಿಲ್ಲ. ಈ ವಿಚಾರವಾಗಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಈಗಾಗಲೇ ಮಾತುಕತೆಯನ್ನೂ ನಡೆಸಿದ್ದಾರೆ.

ನಿಗಮ ಮಂಡಳಿ ಹಂಚಿಕೆ ವಿಚಾರ ಇದೀಗ ಮತ್ತೆ ಕಾಂಗ್ರೆಸ್ ಹೈಕಮಾಂಡ್ ಅಂಗಳ ತಲುಪಿದೆ. ಹೈಕಮಾಂಡ್ ಪಟ್ಟಿಗೆ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಇನ್ನೂ ಗ್ರೀನ್ ಸಿಗ್ನಲ್ ನೀಡಿಲ್ಲ. ಎಐಸಿಸಿ ಜನರಲ್ ಸೆಕ್ರೆಟರಿ ಕೆಸಿ ವೇಣುಗೋಪಾಲ ನಡೆಗೆ ಸಿಎಂ ಹಾಗೂ ಡಿಸಿಎಂ ಬೇಸರ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಸುರ್ಜೇವಾಲ ಬೆಂಗಳೂರಿಗೆ ಮತ್ತೆ ಆಗಮಿಸುತ್ತಿದ್ದಾರೆ.

**ಮತ್ತೊಂದು ಸುತ್ತಿನ ಸಭೆ:** ನಿಗಮ ಮಂಡಳಿ ಕುರಿತು ಮತ್ತೆ ಚರ್ಚಿಸಲು ರಣದೀಪ್ ಸುರ್ಜೇವಾಲ ಬೆಂಗಳೂರಿಗೆ ಬರಲಿದ್ದು, ಜನವರಿ 26ರಂದು ಮತ್ತೊಂದು ಸುತ್ತಿನ ಸಭೆ ನಡೆಯಲಿದೆ. ಅದೇ ದಿನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಹೀಗಾಗಿ ಖರ್ಗೆ ಉಪಸ್ಥಿತಿಯಲ್ಲೇ ಮತ್ತೊಂದು ಸುತ್ತಿನ ಚರ್ಚೆ ನಡೆಯುವ ಸಾಧ್ಯತೆ ಇದೆ.

ಹೈಕಮಾಂಡ್ ನಾಯಕರು ತಮ್ಮನ್ನು ಪರಿಗಣಿಸಿಲ್ಲ ಎಂದು ಮತ್ತೊಂದು ಕಡೆ ಸಚಿವರಿಗೂ ಬೇಸರ ಉಂಟಾಗಿದೆ. ಹೀಗಾಗಿ ಗೊಂದಲ ಬಗೆಹರಿಸಲು ಮತ್ತೆ ಹೈಕಮಾಂಡ್ ನಾಯಕರು ರಾಜ್ಯಕ್ಕೆ ಬರುತ್ತಿದ್ದಾರೆ.

ನಿಗಮ ಮಂಡಳಿಗಳಿಗೆ ಶಾಸಕರ ನೇಮಕವೆಲ್ಲ ಅಂತಿಮೊಂಡಿದೆ. ಪಕ್ಷದ ಕಾರ್ಯಕರ್ತರ ನೇಮಕದ ಬಗ್ಗೆ ಚರ್ಚೆಯಾಗುತ್ತಿದೆ.

## ಮೊದಲನೆ ಪುಟದಿಂದ...

ಡಿಸಿಎಂ ಡಿಕೆ ಶಿವಕುಮಾರ್ ಜತೆ ಚರ್ಚೆ ನಡೆಸುತ್ತಿದ್ದೇವೆ. ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರು ಪಟ್ಟಿಗೆ ಸಹಿ ಹಾಕಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಹೇಳಿದ್ದರು.

# ಪತ್ರ ಬರೆದ ಖರ್ಗೆ

ಶಾ ಮಧ್ಯಪ್ರವೇಶಿಸಿ ರಾಹುಲ್ ಗಾಂಧಿ ಹಾಗೂ ಯಾತ್ರೆಯಲ್ಲಿ ಭಾಗವಹಿಸುವವರ ಸುರಕ್ಷತೆಯನ್ನು ಖಾತ್ರಿಪಡಿಸುವಂತೆ ಪತ್ರದಲ್ಲಿ ಒತ್ತಾಯಿಸಲಾಗಿದೆ. ದೈಹಿಕ ಹಾನಿಗೆ ಕಾರಣವಾಗುವ ಯಾವುದೇ ಅಹಿತಕರ ಘಟನೆಗಳನ್ನು ತಡೆಯಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮುಖ್ಯಮಂತ್ರಿ ಮತ್ತು ಅಸ್ಸಾಂನ ಪೊಲೀಸ್ ಮಹಾನಿರ್ದೇಶಕರನ್ನು ವಿನಂತಿಸುತ್ತೇನೆ ಎಂದರು. ಭಾರತ್ ಜೋಡೋ ನ್ಯಾಯ ಯಾತ್ರೆಯು ಜನವರಿ 14 ರಂದು ಮಣಿಪುರದ ಇಂಫಾಲ್‌ನಿಂದ ಪ್ರಾರಂಭವಾಯಿತು ಮತ್ತು ಮುಂಬೈನಲ್ಲಿ ಕೊನೆಗೊಳ್ಳುವ ಈ ಯಾತ್ರೆ 6,700 ಕಿಲೋಮೀಟರ್‌ಗಳನ್ನು ಕ್ರಮಿಸಲು ಸಿದ್ಧವಾಗಿದೆ, ಸಮಾಜದ ದುರ್ಬಲ ವರ್ಗಗಳನ್ನು ಒಗ್ಗೂಡಿಸುವುದರೊಂದಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಸಮಸ್ಯೆಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ.

ಕಾರ್ಮಿಕ ಕಾನೂನುಗಳ ನಿರ್ವಹಣೆ ಮತ್ತು ವಿರೋಧ ಪಕ್ಷದ ವ್ಯಕ್ತಿಗಳ ವಿರುದ್ಧ ಕೇಂದ್ರ ತನಿಖಾ ಸಂಸ್ಥೆಗಳ ದುರುಪಯೋಗ ಸೇರಿದಂತೆ ನರೇಂದ್ರ ಮೋದಿ ಸರ್ಕಾರದ ಜನವಿರೋಧಿ ನೀತಿಗಳು ಎಂದು ವಿವರಿಸಲು ಕಾಂಗ್ರೆಸ್ ಯಾತ್ರೆಯನ್ನು ವೇದಿಕೆಯಾಗಿ ಇರಿಸಿದೆ.

# ಇಬ್ಬರ ಬಂಧನ

ಚಿಕ್ಕಮಗಳೂರು ಹೊರ ವಲಯದ ಮತ್ತಾವರ ಬಳಿ ಹುಲಿ ತಲೆ, ನಾಲ್ಕು ಉಗುರು, ಎರಡು ಹಲ್ಲುಗಳನ್ನು ಮಾರಾಟ ಮಾಡಲು ಯತ್ನಿಸುತ್ತಿರುವ ವಿಚಾರ ತಿಳಿದು ಆಆಪಿ ರಮೇಶ್ ಬಾಬು ನೇತೃತ್ವದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ದಾಳಿ ನಡೆಸಿದ್ದಾರೆ. ಈ ವೇಳೆ, ಹುಲಿ ಅಂಗಾಂಗ ಮಾರಾಟ ಮಾಡಲು ಮುಂದಾಗಿದ್ದ ಮೂಡಿಗೆರೆ ತಾಲೂಕಿನ ಕುಂದೂರು ಗ್ರಾಮದ ಸತೀಶ್, ಚಂದ್ರೇಗೌಡ ಎಂಬವರನ್ನು ಬಂಧಿಸಿದ್ದಾರೆ.

ಮೂಡಿಗೆರೆ ಅರಣ್ಯ ಇಲಾಖೆಯ ಕಚೇರಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಆರೋಪಿಗಳಿಂದ ಹುಲಿ ತಲೆ, ಹುಲಿ ಉರುಗರು, ಹಲ್ಲು, ಬೈಕ್ ಸೇರಿದಂತೆ ನಾಲ್ಕು ಮೊಬೈಲ್ ?ಗಳನ್ನ ಅರಣ್ಯ ಇಲಾಖೆಯ ಸಿಬ್ಬಂದಿ ವಶಕ್ಕೆ ಪಡೆದಿದ್ದಾರೆ. ಈ ಹಿಂದೆಯೂ ಹುಲಿ ಅಂಗಾಂಗ ಮಾರಾಟ ಮಾಡುವಾಗ ಇಬ್ಬರು ಆರೋಪಿಗಳು ಸಿಕ್ಕಿ ಬಿದ್ದಿದ್ದರು.

# ಪುತ್ಥಳಿ ಬಳಿ ಸಿಕ್ಕ ಚೀಟಿ

ಹಾರ ಹಾಕಿ ಅಂಬೇಡ್ಕರ್ ಪ್ರತಿಮೆಗೆ ಅವಮಾನ ಮಾಡಿದ್ದರು. ಇದೀಗ ಈ ಸ್ಥಳದಲ್ಲಿ ಸ್ಥಳಿಯರಿಗೆ ಚೀಟಿಯೊಂದು ಸಿಕ್ಕಿದೆ.

ಚೀಟಿಯಲ್ಲಿ ಸ್ಥಳಿಯ 10 ಜನರ ಹೆಸರು ಬರೆಯಲಾಗಿದ್ದು, ''ಇವರು ನನಗೆ ಹಣ ಕೊಡುವುದಾಗಿ ಹೇಳಿದ್ದರು. ಹಣದ ಆಸೆಗಾಗಿ ಈ ಕೃತ್ಯ ಎಸಗಿದ್ದೇವೆ'' ಅಂತ ಬರೆಯಲಾಗಿದೆ. ಆದರೆ ಚೀಟಿ ಬರೆದಾತ ತನ್ನ ಹೆಸರನ್ನು ಗುಟ್ಟು ಬಿಟ್ಟುಕೊಟ್ಟಿಲ್ಲ. ಈ ಮೂಲಕ ತಮ್ಮ ಹಗೆತನಕ್ಕಾಗಿ ಅಂಬೇಡ್ಕರ ಅವರಿಗೆ ಅಪಮಾನ ಮಾಡುವಂತಹ ನೀಚ ಕೃತ್ಯಕ್ಕೆ ಕಿಡಿಗೇಡಿಗಳು ಇಳಿದರಾ ಎಂಬ ಪ್ರಶ್ನೆ ಉದ್ಭವವಾಗಿದೆ.

ಪ್ರಕರಣ ದಾಖಲಿಸಿಕೊಂಡ ಗುಲ್ಬರ್ಗಾ ವಿವಿ ಪೊಲೀಸರು ಚೀಟಿ ರಹಸ್ಯ ಬೆನ್ನು ಹತ್ತಿದ್ದಾರೆ. ಪೊಲೀಸರು ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಈ ರೀತಿ ಚೀಟಿ ಬರೆಯಲು ಕಾರಣವೇನು ಅಂಬೇಡ್ಕರ್ ಅವರ ಪ್ರತಿಮೆ ಅಪಮಾನಕ್ಕೂ ಮತ್ತು ಈ ಚೀಟಿಗೂ ಏನು ಸಂಬಂಧ ಎಂಬುವುದರ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಮಂಗಳವಾರ ಕಲಬುರಗಿಯಲ್ಲಿ ಪ್ರತಿಭಟನೆ

ಅಂಬೇಡ್ಕರ್ ಪ್ರತಿಮೆಗೆ ಅಪಮಾನ ಮಾಡಿದ ವಿಚಾರ ತಿಳಿಯುತ್ತಿದ್ದಂತೆ ಮಂಗಳವಾರ ದಲಿತ ಮುಖಂಡರು ಸಿಡಿದೆದ್ದಿದ್ದು, ಟೈಯರ್ ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದರು. ಅಲ್ಲದೇ ಬಿಜೆಪಿ ವಿಧಾನಪರಿಷತ್ ಸದಸ್ಯ ಮಾಲೀಕತ್ವದ ಪೆಟ್ರೋಲ್ ಬಂಕ್ ನ ಗಾಜನ್ನು ಪುಡಿ ಪುಡಿ ಮಾಡಿದ್ದರು. ಇದರಿಂದ ಕಲಬುರಗಿ ನಗರದಲ್ಲಿ ಉದ್ರಿಕ್ತ ಪರಿಸ್ಥಿತಿ ನಿರ್ಮಾಣವಾಗಿತ್ತು.

ಜಗತ್ ಸರ್ಕಲ್ ಬಳಿ ಗೂಡ್ಸ್ ವಾಹನಕ್ಕೆ ಕಲ್ಲು ತೂರಲಾಗಿತ್ತು. ಬಲವಂತವಾಗಿ ಅಂಗಡಿ ಮುಗ್ಗಟ್ಟುಗಳನ್ನು ಪ್ರತಿಭಟನಾಕಾರರು ಬಂದ್ ಮಾಡಿಸಿದ್ದರು. ಸ್ಟೇಷನ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿತ್ತು.

**ಆರೋಪಿಗಳ ಬಂಧನಕ್ಕೆ ಪಿ ರಾಜೀವ್ ಆಗ್ರಹ:** ಪ್ರತಿಮೆಗೆ ಅಪಮಾನ ಮಾಡಿದ ಕಿಡಿಗೇಡಿಗಳನ್ನು ಬಂಧಿಸಿಬೇಕು ಎಂದು ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್ ಆಗ್ರಹಿಸಿದ್ದರು. ಪ್ರತಿಮೆಗೆ ಅಪಮಾನ ಆಗದಂತೆ ಸರ್ಕಾರ ಮುನ್ನೆಚ್ಚರಿಕೆ ವಹಿಸಲಿ. ಶ್ರೀರಾಮನ ಭಾವಚಿತ್ರ ಹರಿದು ಹಾಕುವ ಪ್ರಕರಣ ಹೆಚ್ಚಾಗುತ್ತಿದೆ. ಕಾಂಗ್ರೆಸ್ ನವರ ಮನಸ್ಥಿತಿ ಎತ್ತ ಸಾಗುತ್ತಿದೆ ಅಂತ ಗೊತ್ತಾಗುತ್ತೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು.

# ಗರ್ಭಿಣಿ!

ತೃತೀಯಲಿಂಗಿಗೆ ಸ್ತನಗಳನ್ನು ತೆಗೆಯುವ ಶಸ್ತ್ರ ಚಿಕಿತ್ಸೆ ನಡೆಯಬೇಕಿತ್ತು ಜತೆಗೆ ಗರ್ಭಾಶಯವನ್ನು ತೆಗೆದುಹಾಕಬೇಕಿತ್ತು. ಮಾರ್ಕೋ ಇದೀಗ ಮಗುವಿನ ಜೈವಿಕ ತಾಯಿಯಾಗಿದ್ದರೂ ಕೂಡ ಕಾನೂನುಬದ್ಧವಾಗಿ ತಂದೆಯಾಗಿರುತ್ತಾರೆ. ಭ್ರೂಣವು ಅಪಾಯದಲ್ಲಿದೆ ತಕ್ಷಣವೇ ಶಸ್ತ್ರಚಿಕಿತ್ಸೆಯನ್ನು ಸ್ಥಗಿತಗೊಳಿಸಬೇಕು ಎಂದು ವೈದ್ಯರು ಸಲಹೆ ನೀಡಿದ್ದಾರೆ.

ಚಿಕಿತ್ಸೆಯನ್ನು ತಕ್ಷಣವೇ ನಿಲ್ಲಿಸಬೇಕು, ಇಲ್ಲದಿದ್ದರೆ ಮಗುವಿಗೆ ಅಪಾಯವಾಗಬಹುದು, ವಿಶೇಷವಾಗಿ ಗರ್ಭಧಾರಣೆಯ ಮೊದಲ ತ್ರೈಮಾಸಿಕದಲ್ಲಿ ಇದು ಮಗುವಿನ ಅಂಗಗಳ ಬೆಳವಣಿಗೆಯ ಪ್ರಮುಖ ಸಮಯವಾಗಿದೆ ಎಂದು ಹೇಳಿದ್ದರು.

ಹಾರ್ಮೋನ್ ಚಿಕಿತ್ಸೆಯು ಮುಟ್ಟಾಗುವುದನ್ನು ತಡೆಯುತ್ತದೆ, ಆದರೆ ಇದು ಗರ್ಭನಿರೋಧಕವಾಗಿ ಕಾರ್ಯನಿರ್ವಹಿಸುವುದಿಲ್ಲ, ಚಿಕಿತ್ಸೆಗೆ ಒಳಪಡುವ ವ್ಯಕ್ತಿ ಅಂಡೋತ್ಪತ್ತಿಯನ್ನು ಮುಂದುವರೆಸಬಹುದು, ಹಾಗೆಯೇ ಗರ್ಭಧಾರಣೆಯಲ್ಲಿ ಅಪಾಯವನ್ನು ಎದುರಿಸಬಹುದು ಎಂದು ಹೇಳಿದ್ದಾರೆ. ಲಿಂಗಪರಿವರ್ತನೆಗೆ ಒಳಗಾಗುವವರು ಚಿಕಿತ್ಸೆಯ ಸಮಯದಲ್ಲಿ ಅನುಮತಿಸುವ ಗರ್ಭನಿರೋಧಕಗಳನ್ನು ಬಳಸಬಹುದು ಎಂದು ವೈದ್ಯರು ಹೇಳಿದ್ದಾರೆ. ತೃತೀಯಲಿಂಗಿ ಪುರುಷನನ್ನು ಸೀ ಹಾರ್ಸ್ ಡ್ಯಾಡ್ ಎಂದು ಕರೆಯಲಾಗುತ್ತದೆ ಅಂದರೆ ಸಮುದ್ರ ಕುದುರೆ ಎಂದರ್ಥ ಇವು ತನ್ನ ಮರಿಗಳನ್ನು ಹೊತ್ತು ತಿರುಗುತ್ತವೆ.

# ಮಹಿಳೆ

ಮಹಾರಾಷ್ಟ್ರದ ಸಾಂಗ್ಲಿಯ ಜತ್ತ ತಾಲೂಕಿನ ಮುಚ್ಚಂಡಿ ಗ್ರಾಮದ ಸಿದ್ದಗೊಂಡ ಸೌದತ್ತಿ ಲಾರಿ ಚಾಲಕನಾಗಿ ಕೆಲಸ ಮಾಡುತ್ತಿದ್ದಾನೆ. ಈತನಿಗೆ ಮದುವೆಯಾಗಿದ್ದು, ಇಬ್ಬರು ಮಕ್ಕಳು ಕೂಡ ಇದ್ದಾರೆ. ಹೀಗಿದ್ದರೂ ರೊಟ್ಟಿ ತರಲೆಂದು ಹೋದ ಸೌದತ್ತಿಗೆ ರೊಟ್ಟಿ ಮಾಡುವ ಸುಜಾತಾಳ ಮೇಲೆ ಪ್ರೇಮಾಂಕುರವಾಗಿದೆ. ಈಕೆಗೂ ಮದುವೆಯಾಗಿ ಒಂದು ಮಗುವಿದೆ.

ರೊಟ್ಟಿ ತರಲು ಹೋಗುತ್ತಿದ್ದಾಗ ಸುಜಾತಾ ಮತ್ತು ಸೌದತ್ತಿ ಮೇಲೆ ಬೆಳೆದ ಸಲುಗೆ ಪ್ರೀತಿಗೆ ತಿರುಗಿದೆ. ಅದರಂತೆ ಸಜಾತ ತನ್ನ ಗಂಡನನ್ನು ಬಿಟ್ಟು ಸೌದತ್ತಿ ಜೊತೆ ಓಡಿ ಬಂದಿದ್ದಳು. ಹೀಗೆ ಓಡಿ ಬಂದ ವಿವಾಹಿತ ಜೋಡಿ ಹಕ್ಕಿ ಕಳೆದ ಆರು ತಿಂಗಳಿನಿಂದ ಬಳ್ಳಾರಿಯಲ್ಲಿ ನೆಲೆಸಿದ್ದರು. ಇತ್ತ, ಪತ್ನಿ ಕಾಣೆಯಾಗಿದ್ದಾಳೆ ಎಂದು ಪತಿ ಮಹೇಶ್ ಮಹಾರಾಷ್ಟ್ರ ಸಾಂಗ್ಲಿ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದಾರೆ.

ಅದರಂತೆ ಮಹಿಳೆಯನ್ನು ಪ್ರಿಯಕರನ ಜೊತೆ ಪತ್ತೆ ಹಚ್ಚಿದ ಸಾಂಗ್ಲಿ ಪೊಲೀಸರು ರಾಜಿ ಪಂಚಾಯ್ತಿ ನಡೆಸಿದ್ದಾರೆ. ಈ ವೇಳೆ ತಾನು ಸಿದ್ದಗೊಂಡ ಸೌದತ್ತಿ ಜೊತೆಗೆ ಹೋಗುತ್ತೇನೆ ಎಂದಿದ್ದಾಳೆ. ಅದರಂತೆ, ಸಾಂಗ್ಲಿ ಪೊಲೀಸ್ ಠಾಣೆಯಲ್ಲಿ ಮುಚ್ಚಳಿಕೆ ಬರೆದು ಸುಜಾತಾಳನ್ನು ಸೌದತ್ತಿ ಬಳ್ಳಾರಿಗೆ ಕರೆದುಕೊಂಡು ಬಂದಿದ್ದಾನೆ.

ಹೀಗೆ ಸೌದತ್ತಿ ಜೊತೆಗಿದ್ದ ಸುಜಾತ ಅಲ್ಲಿಗೆ ಇಲ್ಲಿಗೆ ಎಂದು ಸುತ್ತಾಡಿ, ವಿಮಾನದಲ್ಲೂ ಪ್ರಯಾಣ ಮಾಡಿ ಭರ್ಜರಿ ಹಣ ಖರ್ಚು ಮಾಡಿಸಿದ್ದಾಳೆ. ಕೊನೆಗೆ ತನ್ನ ಗಂಡನಿಗೆ ದೂರವಾಣಿ ಕರೆ ಮಾಡಿ ಮರಳಿ ಗಂಡನ ಜೊತೆ ಹೋಗಿದ್ದಾಳೆ. ಇತ್ತ, ತನ್ನ ಪ್ರೇಯಸಿ ಬೇಕು ಅಂತಾ ಸಿದ್ದಗೊಂಡ ಸೌದತ್ತಿ ಬಳ್ಳಾರಿ ಮಹಿಳಾ ಪೊಲೀಸ್ ಠಾಣೆ ಮೆಟ್ಟಿಲೇರಿದ್ದು, ಪ್ರೇಯಸಿ ಸುಜಾತ ಹುಡುಕಾಟಕ್ಕಾಗಿ ಕಚೇರಿ ಕಚೇರಿ ಅಲೆಯುತ್ತಿದ್ದಾನೆ.

# ಸಹೋದರರು

ಸ್ಟೈಲ್ ಆಗಿ ವಿಭಿನ್ನ ಗೆಟಪ್ ನಲ್ಲಿ ಕಲರ್ ಕಲರ್ ಫೋಟೊ. ಅದರಲ್ಲಿ ಯುವಕ ಯುವತಿ ಫುಲ್ ಮಿಂಚಿಂಗ್. ಬೈಕ್‌ನಲ್ಲಿ ಜಾಲಿ ರೈಡಿಂಗ್. ನೋಡಿದರೆ ಯಾರೂ ಕೂಡ ಮೂಕರು ಅನ್ನುವ ಹಾಗಿಲ್ಲ. ಆದರೆ ಇವರು ಇಬ್ಬರೂ ಮೂಕರು. ಸನ್ನೆ ಮೂಲಕವೇ ಕೈ ಮುಗಿದು ತನ್ನ ಮೂಕ ನಿವೇದನೆ. ಕೈಯಲ್ಲಿ ತನ್ನ ಪತ್ನಿಯ ಫೋಟೊ ಹಿಡಿದು ಮೂಕರೋದನೆ. ಗೆಳೆಯನ ಬಗ್ಗೆ ವಿವರಿಸುತ್ತಿರುವ ಮೂಕ ಸ್ನೇಹಿತ. ಈ ದೃಶ್ಯ ಕಂಡುಬಂದಿದ್ದು ಬಾಗಲಕೋಟೆ ಎಸ್ ಪಿ ಕಚೇರಿ ಆವರಣದಲ್ಲಿ.



ಹೌದು ಪ್ರೀತಿಗೆ ಕಣ್ಣಿಲ್ಲ ಅದಕ್ಕೆ ಭಾಷೆ ಬೇಕಿಲ್ಲ ಗಡಿ ಹಂಗಿಲ್ಲ ಎಲ್ಲ ನಿಜ. ಅದೇ ಪ್ರಕಾರ ಇವರಿಬ್ಬರು ಮಾತು ಬಾರದಿದ್ದರೂ ಇನ್ಸ್ಟಾಗ್ರಾಮ್ ಮೂಲಕ ಪರಿಚಯ, ಪ್ರೀತಿ ಆಗಿ ಮದುವೆ ಆಗಿದ್ದವರು. ಇವರ ಹೆಸರು ಸಿದ್ದಾರ್ಥ್ ಕಾಂಬಳೆ ಹಾಗೂ ರೊದಿಯಾ ಕಂವರ್. ಸಿದ್ದಾರ್ಥ್ ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ನಾಗನೂರು ಗ್ರಾಮದವ. ರೊದಿಯಾ ರಾಜಸ್ಥಾನದ ರಾಜಸಮಂಡ ಜಿಲ್ಲೆ ದಾಸಣಾ ಗ್ರಾಮದವಳು.

ಏಳು ತಿಂಗಳ ಹಿಂದೆ ಇಬ್ಬರು ಇನ್ಸ್ಟಾ ಗ್ರಾಮ್ ಮೂಲಕ ಮೂಕ ಭಾಷೆ ಮೂಲಕವೇ ಪರಿಚಯ ಆಗಿದ್ದರು. ಪರಿಚಯ ಸ್ನೇಹಕ್ಕೆ ತಿರುಗಿ ಪ್ರೀತಿಯಾಗಿತ್ತು. ಕೊನೆಗೆ ರಾಜಸ್ಥಾನಕ್ಕೆ ಹೋಗಿ ಸಿದ್ದಾರ್ಥ ಆಕೆಯನ್ನು ಊರಿಗೆ ಕರೆತಂದು ಮದುವೆಯಾಗಿದ್ದ. ಆದರೆ ಆಕೆಯನ್ನು ಸಹೋದರರು ರಾಜಸ್ಥಾನ ಪೊಲೀಸರ ಜೊತೆ ಬಂದು ಮರಳಿ ರಾಜಸ್ಥಾನಕ್ಕೆ ಕರೆದೊಯ್ದಿದ್ದಾರೆ. ಎಷ್ಟು ಬೇಡಿಕೊಂಡರೂ ಬಿಡದೆ ಕರೆದೊಯ್ದಿದ್ದು, ಇತ್ತ ಸಿದ್ದಾರ್ಥ ನನಗೆ ಆಕೆ ಬೇಕು ಎಂದು ಕೈ ಮುಗಿದು ಕೇಳಿಕೊಳ್ಳುತ್ತಾ ಮೂಕರೋದನೆ ಪಡುತ್ತಿದ್ದಾನೆ.

ಆ ಇಬ್ಬರೂ ಅದಾಗಲೇ ಪ್ರತ್ಯೇಕವಾಗಿ ಮದುವೆಯಾಗಿದ್ದರು ಎಂಬ ಮಾಹಿತಿಯೂ ಇದೆ. ಆದರೆ ಆ ಬಗ್ಗೆ ನಿಖರತೆಯಿಲ್ಲ. ಇಲ್ಲಿ ಸಿದ್ದಾರ್ಥ ಮತ್ತು ರೊದಿಯಾ ಇಬ್ಬರೂ ಇನ್ಸ್ಟಾ ಮೂಲಕ ಪ್ರೀತಿ ಮಾಡಿ, ಅಗಸ್ಟ್ 27, 2023 ರಂದು ಜಮಖಂಡಿ ತಾಲ್ಲೂಕಿನ ನಾಗನೂರು ಗ್ರಾಮದ ಸಿದ್ದಾರ್ಥ್ ಮನೆ ಮುಂದೆ ಮದುವೆ ಆಗಿದೆ. ಆದರೆ ಮದುವೆ ನೊಂದಾವಣಿ ಮಾಡಿಸಿಲ್ಲ. ಶಾಸ್ತ್ರೋಕ್ತವಾಗಿ ಮದುವೆಯಾಗಿದೆ.

ಇನ್ನೊಂದು ಕಡೆ ರೊದಿಯಾ ಕುಟುಂಬಸ್ಥರು ರಾಜಸ್ಥಾನದಲ್ಲಿ ರೊದಿಯಾ ಕಿಡ್ನಾಪ್ ಆಗಿದ್ದಾಳೆ ಎಂದು ದೂರು ನೀಡಿದ್ದರು. ಇದರಿಂದ ನಾಗನೂರಿಗೆ ಬಂದ ರಾಜಸ್ಥಾನ ಪೊಲೀಸರು ಹಾಗೂ ಆಕೆಯ ಸಹೋದರರು ಸೆಪ್ಟೆಂಬರ್ 16, 2023 ರಂದು ರೊದಿಯಾಳನ್ನು ಕರೆದೊಯ್ದಿದ್ದಾರೆ. ಮದುವೆಯಾಗಿ 20 ದಿನದಲ್ಲಿ ಇಬ್ಬರು ದೂರ ಆಗಿದ್ದಾರೆ.

ರೊದಿಯಾ ವಿಡಿಯೊ ಕಾಲ್ ಮಾಡಿ ನನ್ನ ಕರೆದುಕೊಂಡು ಹೋಗು ಇಲ್ಲದಿದ್ರೆ, ಇವರು ನನ್ನ ಸಾಯಿಸ್ತಾರೆ ಎಂದು ಸನ್ನೆ ಮೂಲಕವೇ ಸಿದ್ದಾರ್ಥ ಗೆ ದಿನಾಲು ಹೇಳುತ್ತಿದ್ದಾಳೆ. ಇದರಿಂದ ಸಿದ್ದಾರ್ಥ ಮತ್ತಷ್ಟು ಆತಂಕ್ಕೆ ಈಡಾಗಿದ್ದಾನೆ. ಹೇಗಾದರೂ ಮಾಡಿ ರೊದಿಯಾಳನ್ನು ವಾಪಸ್ ಕರೆ ತನ್ನಿ ಅಂತಿದ್ದಾನೆ. ಇದಕ್ಕಾಗಿ ತಂದೆ ಹಾಗೂ ವಕೀಲ ಎನ್ ಬಿ ಗಸ್ತಿ ಅವರ ಮೂಲಕ ಬಾಗಲಕೋಟೆ ಎಸ್ ಪಿ ಅಮರನಾಥ ರೆಡ್ಡಿ ಅವರ ಮೊರೆ ಹೋಗಿದ್ದಾನೆ. ಸಮಸ್ಯೆ ಆಲಿಸಿದ ಎಸ್ ಪಿ ಅವರು ಇದಕ್ಕೆ ಕಾನೂನಾತ್ಮಕ ರೀತಿಯಲ್ಲಿ ಏನು ಮಾಡಬಹುದು ಎಂದು ಯೋಚಿಸಿ ಕ್ರಮ ಕೈಗೊಳ್ಳೋದಾಗಿ ಭರವಸೆ ನೀಡಿದ್ದಾರೆ.

ಇನ್ಸ್ಟಾಗ್ರಾಮ್‌ನಲ್ಲಿ ಅರಳಿದ ಮೂಕ ಪ್ರೇಮ, ಮದುವೆ ಜೀವನವಾಗಿ ಈಗ ವಿರಹ ವೇದನೆ ಮೂಕರೋದನೆಯಾಗಿ ಬದಲಾಗಿದೆ. ಇಲ್ಲಿ ಇಬ್ಬರೂ ಪ್ರತ್ಯೇಕವಾಗಿ ಮೊದಲೇ ಮದುವೆಯಾದ ಸುದ್ದಿ ಇರುವ ಕಾರಣ ಈ ಮೂಕಪ್ರೇಮ ಪ್ರಕರಣ ಯಾವ ತಿರುವು ಪಡೆದುಕೊಳ್ಳುತ್ತೊ ನೋಡಬೇಕಿದೆ.

# ಮೈಸೂರಿನಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ ಸಿಟ್ಟಿಂಗ್

**ಬೆಂಗಳೂರು:** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ 1993ರ ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮದ ಅಡಿಯಲ್ಲಿ ಸ್ಥಾಪಿತವಾಗಿರುವ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಜನವರಿ 30 ರಿಂದ ಫೆಬ್ರವರಿ 02 ರವರೆಗೆ ಮೈಸೂರು ಜಿಲ್ಲೆಯಲ್ಲಿ ಸಿಟ್ಟಿಂಗ್ಸ್ ನಡೆಸಲು ಉದ್ದೇಶಿಸಿರುತ್ತದೆ. ಈ ಸಂದರ್ಭದಲ್ಲಿ ಸದರಿ ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಆಯಾ ಮೈಸೂರು ಜಿಲ್ಲೆಯಲ್ಲಿ ಇತ್ಯರ್ಥಪಡಿಸಿ, ವಿಲೇ ಮಾಡಲು ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಲಾಗಿದೆ. ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸದರಿ ಜಿಲ್ಲೆಗಳಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮೈಸೂರು ಜಿಲ್ಲೆಯಲ್ಲಿಯೇ ಸಾರ್ವಜನಿಕರಿಂದ ದೂರುಗಳು / ಅಹವಾಲುಗಳನ್ನು ಸಹ ಸ್ವೀಕರಿಸಲು ಉದ್ದೇಶಿಸಲಾಗಿದೆ. ಸಾರ್ವಜನಿಕರು ಮೈಸೂರು ಜಿಲ್ಲೆಯಲ್ಲಿ ನಿಗದಿತ ದಿನಾಂಕಗಳಂದು ಆಯೋಗದ ಮಾನ್ಯ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಸಂಪರ್ಕಿಸಿ, ದೂರುಗಳನ್ನು ಸಲ್ಲಿಸಬಹುದು ಎಂದು ಆಯೋಗದ ಆಯೋಗದ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಣ್ಣ ನೀರಾವರಿ ಸಚಿವರ ಪ್ರವಾಸ

**ಬೆಂಗಳೂರು:** ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು ಅವರು ಜನವರಿ 23 ರಿಂದ 26 ರವರೆಗೆ ಮೈಸೂರು ಹಾಗೂ ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಚಿತ್ರ ಬಿಡಿಸುವ ಸ್ಪರ್ಧೆ

**ಮೈಸೂರು:** ಆಯೋಧ್ಯೆಯಲ್ಲಿ ಶ್ರೀರಾಮ ದೇವಸ್ಥಾನ ಪ್ರತಿಷ್ಠಾಪನೆ ಅಂಗವಾಗಿ ಇಂದು ಹೂಟಗಳ್ಳಿ ಕೆಹೆಚ್‌ಬಿ ಕಾಲೋನಿಯ ಅಸೋಸಿಯೇಷನ್ ಆಫ್ ಅಲ್ಲೈಯನ್ಸ್ ಕ್ಲಬ್ ಇಂಟರ್‌ನ್ಯಾಷನಲ್ಲಿ ಜಿಲ್ಲೆ 255 ಇವರ ಆಶ್ರಯದಲ್ಲಿ ಸಿರಿ ವಿದ್ಯಾಲಯ, ಸುದರ್ಶನ ವಿದ್ಯಾಸಂಸ್ಥೆ ಹಾಗೂ ಗುಡ್‌ವಿಶ್ ಫೌಂಡೇಶನ್ ವಿದ್ಯಾರ್ಥಿಗಳಿಗೆ ಶ್ರೀರಾಮ ದೇವರ ಕಂಠಪಾಠ ಹಾಗೂ ಚಿತ್ರ ಬಿಡಿಸುವ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಸುಮಾರು 600 ಮಕ್ಕಳು ಈ ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಅಲ್ಲೈಯನ್ಸ್ ಇಂಟರ್‌ನ್ಯಾಷನಲ್ ಒಂದನೇ ಉಪರಾಜ್ಯಪಾಲ ಅಲ್ಲೈಯನ್ ಸಿರಿಬಾಲು (ಸಿರಿ ವಿದ್ಯಾಲಯ), ಸಂಪುಟ ಕಾರ್ಯದರ್ಶಿ ಅಲ್ಲೈ ಸಂತೋಷ್ (ಶಾಂತಲಾ ವಿದ್ಯಾಕೇಂದ್ರ), ಅಲ್ಲೈ ಶೋಭಾ ಸಿರಿಬಾಲು, ಅಲ್ಲೈ ಸಿರಿಮಾ ಬಿ.ರಾಜು, ಅಲ್ಲೈ ಶಶಿಕುಮಾರ್, ಅಲ್ಲೈ ಶಕುಂತಲಾ ರವೀಂದ್ರ ಹಾಗೂ ಇನ್ನಿತರ ಅಲ್ಲೈಯನ್ಸ್ ಸ್ನೇಹಿತರು ಪಾಲ್ಗೊಂಡಿದ್ದರು. ವೇದಿಕೆ ಕಾರ್ಯಕ್ರಮದ ನಂತರ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

## ಅರ್ಹ ಸಂಸ್ಥೆಗಳಿಂದ ಟೆಂಡರ್ ಆಹ್ವಾನ

**ರಾಮನಗರ:** ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕು ಕಚೇರಿಯಲ್ಲಿ ಅಭಿಲೇಖಾಲಯ ಡಿಜಲೀಕರಣ ಮಾಡುವ ಕುರಿತು 10 ಡಾಟಾ ಎಂಟ್ರಿ ಆಪರೇಟರ್ ಹಾಗೂ ಸಪ್ಲೈ ಆಫ್ 08 ಡೆಸ್ಕ್‌ಟಾಪ್ ಕಂಪ್ಯೂಟರ್ಸ್ 01 ಓವರ್ ಹೆಡ್ ಸ್ಕ್ಯಾನರ್ ಮತ್ತು 2 ಡುಪ್ಲೆಕ್ಸ್ ಎಡಿಎಫ್ ಸ್ಕ್ಯಾನರ್ ಫಾರ್ ರೆಕಾರ್ಡ್ ರೂಂ ಡಿಜಿಟಲೈಸೇಷನ್ ಪ್ರೊಗ್ರಾಮ್ ಅನ್ನು ಮಾಗಡಿ ತಾಲ್ಲೂಕು ತಹಶೀಲ್ದಾರ್ ಕಚೇರಿ, ರಾಮನಗರ ಜಿಲ್ಲೆಗೆ ಸರಬರಾಜು ಮಾಡಲು ಅರ್ಹ ಸಂಸ್ಥೆಗಳಿಂದ ಪ್ರತ್ಯೇಕ ಇ-ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಟೆಂಡರ್‌ದಾರರು ಇ-ಪ್ರೋಕ್ಯೂರ್‌ಮೆಂಟ್ ಮುಖಾಂತರ ಇದೇ ಫೆ. 2ರ ಸಂಜೆ 4 ಗಂಟೆಯೊಳಗೆ ಭಾಗವಹಿಸಬಹುದು. ಟೆಂಡರ್ ದಾಖಲೆಗಳನ್ನು https://kppp.karnataka.gov.in/ ಪೋರ್ಟಲ್‌ನಲ್ಲಿ ವೀಕ್ಷಿಸಬಹುದಾಗಿದೆ.

## ವಿದ್ಯುತ್ ವ್ಯತ್ಯಯ

**ರಾಮನಗರ:** 66 ಕೆ.ವಿ ಕನಕಪುರ-ಸೋಮನಹಳ್ಳಿ-1 ಮಾರ್ಗದ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಮತ್ತು 66/11 ಕೆವಿ ಛತ್ರ, ಮರಳವಾಡಿ ಮತ್ತು ಗೋದೂರು ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕಾ ನಿರ್ವಹಣಾ ಕಾಮಗಾರಿ ಕೈಗೊಂಡಿರುವ ಕಾರಣ ಇದೇ ಜ. 24ರ ಬುಧವಾರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಸುನಿಕ್ಷಾ ಸೋಲಾರ್ ಪವರ್ ಪ್ಲಾಂಟ್, ಬನವಾಸಿ, ದ್ಯಾವಸಂದ್ರ, ತುಂಗಣಿ, ಕಲ್ಲಹಳ್ಳಿ, ಬೂದಿಗುಪ್ಪೆ, ದೊಡ್ಡಮರಳವಾಡಿ, ಟಿ.ಹೊಸಹಳ್ಳಿ, ಯಲಚವಾಡಿ, ಬನವಾಸಿ, ತೋಕಸಂದ್ರ ಪಂಚಾಯಿತಿ ವಾಪ್ತಿಗೆ ಒಳಪಡುವ ಸುತ್ತಮುತ್ತಲಿನ ಗ್ರಾಮಗಳು ಮತ್ತು ಕಲ್ಲಹಳ್ಳಿ ಕೈಗಾರಿಕಾ ಪ್ರದೇಶಕ್ಕೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಂಗಳೂರು ವಿದ್ಯುತ್ ಕಂಪನಿಯ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ತಿಳಿಸಿದ್ದಾರೆ.

## ವಿಕಲಚೇತನರಿಂದ ಅರ್ಜಿ

**ರಾಮನಗರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2023-24ನೇ ಸಾಲಿನಲ್ಲಿ ದೈಹಿಕ ವಿಕಲಚೇತನರಿಗಾಗಿ ಬ್ಯಾಟರಿಚಾಲಿತ ವೀಲ್‌ಚೇರ್‌ಗಳನ್ನು ಪಡೆಯಲು ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಫೆ. 5 ಕೊನೆಯ ದಿನವಾಗಿದೆ. ಮಾಹಿತಿಗೆ ವಿಕಲಚೇತನರ ಸಹಾಯವಾಣಿ ಕೇಂದ್ರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನಂ. 107, ನೆಲಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ, ಬಿ.ಎಂ. ರಸ್ತೆ, ರಾಮನಗರ ಜಿಲ್ಲೆ, ರಾಮನಗರ ದೂ. ಸಂಖ್ಯೆ: 080-29500205 ಸಂಪರ್ಕಿಸಬಹುದು.

# ಕನ್ನಡ ಹೆಚ್ಚಾಗಿ ಬಳಸಿದಾಗ ಭಾಷಾ ಬೆಳವಣಿಗೆ

**ಮಂಡ್ಯ:** ಕನ್ನಡವನ್ನು ಹೆಚ್ಚಾಗಿ ಬಳಸಿದಾಗ ಕನ್ನಡ ದೊಡ್ಡ ಮಟ್ಟದಲ್ಲಿ ಬೆಳೆಯುತ್ತದೆ. ಕನ್ನಡ ಬೆಳೆದಾಗ ಇಂಗ್ಲಿಷ್ ಪದಗಳಿಗೆ ಪರ್ಯಾಯವಾಗಿ ಕನ್ನಡ ಬೆಳೆದು ಭಾಷಾ ಬೆಳವಣಿಗೆ ಆಗುತ್ತದೆ. ವಿಜ್ಞಾನ ತಂತ್ರಜ್ಞಾನ ಬೆಳೆದಂತೆ ಕನ್ನಡ ಬೆಳೆಯಬೇಕು ಎಂದು ಮೈಸೂರು ವಿವಿ ಸಿಂಡಿಕೇಟ್ ಮಾಜಿ ಸದಸ್ಯ ಈ.ಸಿ.ನಿಂಗರಾಜೇಗೌಡ ಅಭಿಪ್ರಾಯಿಸಿದರು.

ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್ ಇವರ ಸಂಯುಕ್ತಾಶ್ರಯದಲ್ಲಿ ನಗರದ ರೈತ ಸಭಾಂಗಣದಲ್ಲಿ ಭಾನುವಾರ ನಡೆದ 32ನೇ ರಾಜ್ಯ ಮಟ್ಟದ ಕವಿಕಾವ್ಯ ಮೇಳ, ವಿವಿಧ ಪ್ರಶಸ್ತಿ ಪ್ರದಾನ, ಓ ಗುಣವಂತ ಕಿರುಚಿತ್ರ ಬಿಡುಗಡೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ 32 ವರ್ಷಗಳಿಂದ ಡಾ.ಜೀಶಂಪ ಸಾಹಿತ್ಯ ವೇದಿಕೆ ಕವಿಕಾವ್ಯ ಸಮ್ಮೇಳನ ಮಾಡಿಕೊಂಡು ಬರುತ್ತಿದ್ದಾರೆ. ರಾಷ್ಟ್ರಕವಿ ಕುವೆಂಪು ತಮ್ಮ ಶ್ರೇಷ್ಟ ಸಾಹಿತ್ಯದ ಮೂಲಕ ಕನ್ನಡ ಮವನ್ನು ಶ್ರೀಮಂತಗೊಳಿಸಿದ್ದಾರೆ. ಜೊತೆಗೆ ಇಂದಿನ ಯುವ ಸಾಹಿತಿಗಳಿಗೆ ಕುವೆಂಪು ಪ್ರೇರಣೆಯಾಗಿದ್ದಾರೆ ಎಂದು ಶ್ಲಾಘಿಸಿದರು.

ನಾಳೆ ಶ್ರೀ ರಾಮ ಮಂದಿರ ಉದ್ಘಾಟನೆ ಆಗುತ್ತಿದೆ. ಇದೇ ಸಂದರ್ಭದಲ್ಲಿ ರಾಮಾಯಣ ದರ್ಶನಂ ರಚನೆಗಾಗಿ ಜ್ಞಾನಪೀಠ ಕುವೆಂಪು ಜ್ಞಾನ ಪೀಠ ಪ್ರಶಸ್ತಿ ಪಡೆದರು ಎಂದು ಸ್ಮರಿಸಿದರು.

ಹಿರಿಯ ಸಾಹಿತಿ ಹಾಗೂ ಸಮ್ಮೇಳನಾಧ್ಯಕ್ಷ ಡಾ.ಹಲ್ಲೆಗೆರೆ ಶಂಕರ್ ಮಾತನಾಡಿ, ಮಂಡ್ಯ ಜಿಲ್ಲೆ ಸಾಮಾಜಿಕ, ಸಾಂಸ್ಕೃತಿಕ, ಔದ್ಯೋಗಿಕ ಮತ್ತು ರಾಜಕೀಯದ ತವರೂರಾಗಿದೆ. ನಾಡು ನುಡಿ, ಕಲೆ, ಸಂಸ್ಕೃತಿಯ ಪರಂಪರೆಗೆ ಪ್ರಮುಖ ಕೊಂಡಿಯಾಗಿದೆ ಎಂದು ಶ್ಲಾಘಿಸಿದರು. ಮಂಡ್ಯ ಜಿಲ್ಲೆಯ ಕವಿಗಳಾದ ಬಿ.ಎಂ.ಶ್ರೀಕಂಠಯ್ಯ, ಕೆ.ಎಸ್.ಕೃಷ್ಣಮಾಚಾರಿ, ನರಸಿಂಹಸ್ವಾಮಿ, ಜೀಶಂಪ, ರಾಗೌ, ಸುಜನಾ, ಡಾ.ವೆಂಕಟಸುಬ್ಬಯ್ಯ, ಹೆಚ್.ಎಲ್.ನಾಗೇಗೌಡ, ನಾಗತಿಹಳ್ಳಿ ಚಂದ್ರಶೇಖರ್, ಪ್ರೊ ಡಿ. ಲಿಂಗಯ್ಯ, ಅ.ರಾ.ಮಿತ್ರ ಸೇರಿದಂತೆ ಹಲವು ಸಾಹಿತಿಗಳು ನಾಡಿನ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಶ್ರೀಮಂತಗೊಳಿಸಿದ್ದಾರೆ ಎಂದರು.

ಇತ್ತೀಚಿನ ಕವಿಗಳು ಮತ್ತು ಕಾವ್ಯ ರಚನೆಯ ಕಡೆಗೆ ನೋಡುವುದಾದರೆ ಕೆಲವೊಂದು ಅಂಶಗಳು ವಿಶ್ಲೇಷಣೆಗೆ ಒಳಪಡಬೇಕಾಗಿದೆ ಎಂದು ಅಭಿಪ್ರಾಯ ಪಟ್ಟರು.

ಹಳಗನ್ನಡ, ನಡುಗನ್ನಡದ ನಂತರ ಬಂದ ಹೊಸಗನ್ನಡದಲ್ಲಿ ಇತ್ತೀಚೆಗೆ ಕಾವ್ಯ ರಚನೆ ಮಾಡುತ್ತಿರುವ ಕವಿಗಳನ್ನು ಮೂರು ಗುಂಪುಗಳಾಗಿಯೂ ನೋಡಬೇಕಾಗಿದೆ. ಹಳಗನ್ನಡ ಮತ್ತು ನಡುಗನ್ನಡದ ಕಾವ್ಯಗಳು, ಕವಿತೆಗಳು ಅಥವಾ ಕವನಗಳು ಎಂಬ ಭಾಗಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಛಂದಸ್ಸು, ಲಯ, ಗೇಯತೆಗಳಿದ್ದವು, ರಾಗ, ತಾಳಗಳಿಗೆ ಒಗ್ಗುತ್ತಿದ್ದವು, ಸಂಗೀತ, ನೃತ್ಯ ಮತ್ತು ಗಾಯನಕ್ಕೆ ಒತ್ತಾಸೆಯಾಗಿದ್ದು ಕೇಳುಗರಿಗೆ ಇಂಪಾಗಿಯೂ, ಆಪ್ತವಾಗಿಯೂ ಮನೋಜ್ಞವಾಗಿಯೂ ಇರುತ್ತಿದ್ದವು. ಆದರೆ, ಇತ್ತೀಚಿನ ಹೊಸಗನ್ನಡದ ಕವಿತೆಗಳು 20ನೆಯ ಶತಮಾನದ ಪೂರ್ವ ಮತ್ತು ಮಧ್ಯಂತರದವರೆಗೂ ಅಂತಹ ಗೇಯತೆಗೆ ಒಲಿಯುತ್ತಿದ್ದವು. ಆನಂತರ ಬಂದ ಕವಿಗಳಿಗಳಲ್ಲಿ ಬಹುತೇಕರಿಗೆ ಅಂತಹ ಕಾವ್ಯಗುಣಗಳು ಬೇಕಿಲ್ಲವೇನೋ ಅನ್ನುವ ಮಟ್ಟಕ್ಕೆ ರಚನೆಗಳಾಗುತ್ತಿವೆ ಎಂದು ಬೇಸರ ವ್ಯಕ್ತಪಡಿಸಿದರು. ಕವಿಯು ಕವನದ ಮೂಲಕ ಜನಪ್ರಿಯನಾಗಬೇಕೇ ಹೊರತು ವ್ಯಕ್ತಿಯಾಗಿಯಲ್ಲ. ವ್ಯಕ್ತಿ ಯಾರೆಂದು ಅವನ ಕವನಗಳು ಹೇಳಬೇಕು. ಹೇಳಬೇಕಾದರೆ ಅದಕ್ಕೆ ಒಂದಷ್ಟು ಪರಿಶ್ರಮ, ಪ್ರಯತ್ನ, ಶ್ರದ್ಧೆ ಮತ್ತು ಬದ್ಧತೆ ಬೇಕು. ಅದಕ್ಕೆ ಪೂರಕವಾಗಿ ಮಾನಸಿಕ ತುಡಿತ ಮತ್ತು ಮಿಡಿತಗಳಿರಬೇಕು. ಹೃದಯ ವೈಶಾಲ್ಯತೆ ಬೇಕು. ಹಾಗಾದಾಗ ಯಾವುದೇ ವ್ಯಕ್ತಿ ಪೂರ್ಣ ಪ್ರಮಾಣದ ಕವಿಯಾಗಲು ಜನಮಾನಸದಲ್ಲಿ ಉಳಿಯುವ ಕವಿತೆ ರಚಿಸಲು ಸಾಧ್ಯವೆಂಬುದು ಸತ್ಯ ಎಂದು ಹೇಳಿದರು.

ರಾಜ್ಯ ಆರ್.ಟಿ.ಓ. ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಮಾತನಾಡಿ, ಕನ್ನಡವನ್ನೇ ಹೆಚ್ಚು ಬಳಸುವ ಮಂಡ್ಯ ಜಿಲ್ಲೆಯಲ್ಲಿ ಕನ್ನಡ ಬೆಳೆಸುವಂತಹ ಇಂತಹ ಕಾರ್ಯಕ್ರಮ ನಡೆಯಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಾಹಿತಿ ಹಲ್ಲೆಗೆರೆ ಶಂಕರ್ ರಚಿತ ಪರಿಸರ ಪಲ್ಲವಿ ಕವನ ಸಂಕಲನ ಬಿಡುಗಡೆ ಮಾಡಲಾಯಿತು. ನಟ ವಿಷ್ಣುತೇಜಗೆ ರೆಬಲ್ ರೈಸಿಂಗ್ ಸ್ಟಾರ್ ಬಿರುದು ಪ್ರದಾನ ಮಾಡಲಾಯಿತು. ಜೊತೆಗೆ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಅಭಿನಂದಿಸಲಾಯಿತು. ವೇದಿಕೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಡಾ.ಎಚ್.ಎಸ್. ಮುದ್ದೇಗೌಡ, ಆರ್‌ಎಪಿಸಿಎಂಎಸ್ ಅಧ್ಯಕ್ಷ ಯು.ಸಿ.ಶೇಖರ್, ವಕೀಲ ಮೋಹನ್ ಕುಮಾರ್, ನಟರಾದ ವಿಷ್ಣು ತೇಜ, ಚಂದ್ರಚೂಡರಾಜು, ಹಾವೇರಿ ನೇತ್ರಾವತಿ, ಜೀಶಂಪ ಸಾಹಿತ್ಯ ವೇದಿಕೆ ಅಧ್ಯಕ್ಷ ಎಸ್.ಕೃಷ್ಣ ಸ್ವರ್ಣಸಂದ್ರ, ವೇದಿಕೆ ಪದಾಧಿಕಾರಿಗಳಾದ ಮಂಗಲ ಶಿವಣ್ಣ, ರಾಗಿಮುದ್ದನಹಳ್ಳಿ ನಾಗೇಶ್, ರೂಪಾ ಹೊಸಹಳ್ಳಿ, ಅಪೇಕ್ಷ ಉಪಸ್ಥಿತರಿದ್ದರು.

# ರಾಮ ಮಂದಿರ ಪ್ರಾಣ ಪ್ರತಿಷ್ಠಾಪನೆ: ವಿಶೇಷ ಪೂಜೆ ಅನ್ನಸಂತರ್ಪಣೆ

**ಪಿರಿಯಾಪಟ್ಟಣ:** ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರದಲ್ಲಿ ಶ್ರೀರಾಮಲಲ್ಲನ ಪ್ರಾಣ ಪ್ರತಿಷ್ಠಾಪನೆ ವಿಜೃಂಭಣೆಯಿಂದ ನೆರವೇರಿದ ಹಿನ್ನೆಲೆಯಲ್ಲಿ ಪಿರಿಯಾಪಟ್ಟಣದಲ್ಲಿ ವಿವಿಧ ಸಂಘಸಂಸ್ಥೆಗಳ ವತಿಯಿಂದ ವಿಶೇಷ ಪೂಜೆ, ಅನ್ನ ಸಂತರ್ಪಣೆ ಹಾಗೂ ಭಜನ ಕಾರ್ಯಕ್ರಮಗಳು ಜರುಗಿದವು.

ಪಟ್ಟಣದ ಅರಸು ಭವನದ ಆವರಣದಲ್ಲಿ ತಾಲೂಕು ವರ್ತಕರ ಸಂಘ, ಪಟ್ಟಣದ ಬಿ.ಎಂ.ರಸ್ತೆಯಲ್ಲಿ ಶ್ರೀರಾಮ ಭಗೀರಥ ಉಪ್ಪಾರ ಯುವಕರ ಬಳಗ, ನೆಹರು ರಸ್ತೆಯಲ್ಲಿ ವೀರಶೈವ ಲಿಂಗಾಯತ ಸಜ್ಜನರ ಸಂಘ, ಹಿಟ್ನೆಹೆಬ್ಬಾಗಿಲು ಗ್ರಾಮದ ಉಪ್ಪಾರ ಯುವಕರ ಸಂಘ ಸೇರಿದಂತೆ ಅನೇಕ ಸಂಘ ಸಂಸ್ಥೆಗಳು ಅಯೋಧ್ಯೆಯಲ್ಲಿ ಶ್ರೀ ರಾಮನ ಪ್ರಾಣ ಪ್ರತಿಷ್ಠಾಪನೆ ಮಾಡುತ್ತಿದ್ದಂತೆ ವಿಶೇಷ ಪೂಜೆ ನೆರವೇರಿಸಿದರು ಒಟ್ಟಿನಲ್ಲಿ ತಾಲ್ಲೂಕಿನಾದ್ಯಂತ ರಾಮನ ಭಕ್ತರು ನಾನಾ ರೀತಿಯಲ್ಲಿ ತಮ್ಮ ಭಕ್ತಿಯನ್ನು ತೋರ್ಪಡಿಸಿಕೊಳ್ಳುವ ಮೂಲಕ ತಮ್ಮ ಭಕ್ತಿ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ನಾಗೇಶ್, ಮನೋಜ್ ಜೈನ್, ಮಹೇಂದರ್ ಸಿಂಗ್, ರಾಮದೇವ್, ಪಿಂಟು ಜೈನ್, ಅಶೋಕ್ ಜೈನ, ರಮೇಶ್, ಚಂದ್ ಭಕ್ತಾರಾಮ್, ಪಿ.ಎನ್.ಸುಬ್ರಹ್ಮಣ್ಯ, ಸರವಣ ಸಿಂಗ್, ಸಿ ಎಸ್ ಮಹದೇವ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಸಂವಿಧಾನ ಜಾಗೃತಿ ಜಾಥಾ

## 26 ರಿಂದ ಫೆಬ್ರವರಿ 23ರವರೆಗೆ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಸಂಚಾರ



**ಮಂಡ್ಯ:** ಗಣರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ಜನವರಿ 26 ರಿಂದ ಫೆಬ್ರವರಿ 23 ರವರೆಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಸಂವಿಧಾನ ಜಾಗೃತಿ ಜಾಥ ಹಮ್ಮಿಕೊಳ್ಳಲಾಗುತ್ತಿದ್ದು, ಶಾಲಾ-ಕಾಲೇಜುಗಳು ಸೇರಿದಂತೆ ಜಿಲ್ಲೆಯ ಸರ್ಕಾರಿ, ಸರ್ಕಾರೇತರ ಸಂಸ್ಥೆಗಳು ಹಾಗೂ ವಿವಿಧ ಸಂಘ ಸಂಸ್ಥೆಗಳು ಕೈಜೋಡಿಸಿ ಜಾಗೃತಿ ಜಾಥದ ಯಶಸ್ಸಿಗೆ ಸಹಕರಿಸುವಂತೆ ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂವಿಧಾನದ ಮಹತ್ವ ಹಾಗೂ ಮೌಲ್ಯದ ಕುರಿತು ಅರಿವು ಮೂಡಿಸುವುದು ಹಾಗೂ ದೇಶದ ಜನತೆಗೆ ಸಂವಿಧಾನ ನೀಡಿರುವ ಹಕ್ಕುಗಳು ಕುರಿತಂತೆ ರಾಜ್ಯದ ಮಹಿಳೆಯರು, ಯುವ ಜನತೆ, ಸಾರ್ವಜನಿಕರಿಗೆ ಅರಿವು ಮೂಡಿಸಲು ಹಾಗೂ ರಾಷ್ಟ್ರೀಯ ಏಕತೆಯನ್ನು ಎತ್ತಿಹಿಡಿಯುವುದು ಸಂವಿಧಾನ ಜಾಗೃತಿ ಜಾಥದ ಉದ್ದೇಶವಾಗಿದೆ ಎಂದರು.

ಸಂವಿಧಾನದ ಮೌಲ್ಯಗಳು ಮತ್ತು ಆಶಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಆದ್ಯ ಕರ್ತವ್ಯವಾಗಿದೆ. ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರವು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಚರಿಸಲಿದ್ದು, ಜನವರಿ 26ರಂದು ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಗುವುದು ಎಂದರು.

ಜಿಲ್ಲೆಯ 233 ಗ್ರಾಮ ಪಂಚಾಯಿತಿಗಳು ಜಾಥಾವನ್ನು ಬರಮಾಡಿಕೊಳ್ಳಲು ಸಕಲ ಸಿದ್ದತೆ ಮಾಡಿಕೊಂಡಿವೆ. ಸಂವಿಧಾನದ ಪೀಠಿಕೆಯನ್ನು ಎಲ್. ಇ. ಡಿ ಪ್ರದರ್ಶನ ಮಾಡಲಾಗುವುದು. ಗ್ರಾಮ ಪಂಚಾಯಿತಿಗೆ ಯಾವ ದಿನ ಸಂವಿಧಾನ ಜಾಥಾ ಮೆರವಣಿಗೆ ಬರಲಿದೆ ಎಂಬುದನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು. ಅದರಂತೆ ಎಲ್ಲಾ ಸಾರ್ವಜನಿಕರು, ಸಂಘ - ಸಂಸ್ಥೆಗಳು, ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಎಲ್ಲರೂ ಭಾಗವಹಿಸಿ ವಿಜೃಂಭಣೆಯಿಂದ ಸಂವಿಧಾನ ಜಾಗೃತಿ ಜಾಥವನ್ನು ಯಶಸ್ವಿಗೊಳಿಸಬೇಕು ಎಂದರು.

ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಸ್ತುತ ಸಂವಿಧಾನದ ಬಗ್ಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಿ ವಿಜೇತರಾದವರಿಗೆ ಜಾಗೃತಿ ಜಾಥ ತಮ್ಮ ವ್ಯಾಪ್ತಿಗೆ ಬಂದಾಗ ಕಾರ್ಯಕ್ರಮ ಆಯೋಜಿಸಿ ಬಹುಮಾನ ವಿತರಿಸಬೇಕು ಎಂದರು.

ಜಾಗೃತಿ ಜಾಥವು ಫೆಬ್ರವರಿ 25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯಮಟ್ಟದ ಸಂವಿಧಾನ ಜಾಗೃತಿ ಸಮಾವೇಶ ತಲುಪಲಿದೆ. ಆಗಾಗಿ ಜಿಲ್ಲೆಯ ಸಂವಿಧಾನ ಜಾಗೃತಿ ಜಾಥಾ ಯಶಸ್ವಿಗೊಳಿಸಲು ಎಲ್ಲಾ ಇಲಾಖೆಯ ಅಧಿಕಾರಿಗಳು ಶ್ರಮಿಸಬೇಕು ಎಂದರು.

ಸಂವಿಧಾನ ಜಾಗೃತಿ ಜಾಥದಲ್ಲಿ ವಿವಿಧ ಕಲಾತಂಡಗಳ ಮೆರಗು ಇರಲಿ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂಚರಿಸಲಿರುವ ಸಂವಿಧಾನ ಜಾಗೃತಿ ಜಾಥವು ಸ್ಥಳೀಯರ ಮನವಿ ಮೇರೆಗೆ ಪ್ರತಿ ಹಳ್ಳಿಗಳಿಗೂ ಸಂಚರಿಸಲಿ, ಜೊತೆಗೆ ಸ್ತಬ್ಧಚಿತ್ರದಲ್ಲಿ ಸಂವಿಧಾನ ಕುರಿತ ಪುಸ್ತಕಗಳ ಪ್ರದರ್ಶನವಿರಲಿ ಎಂದು ವಿವಿಧ ಸಂಘ ಸಂಸ್ಥೆಗಳ ಮುಖಂಡರು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಪರಿಶೀಲಿಸಿ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ರವರು ಮಾತನಾಡಿ ಸಂವಿಧಾನ ಜಾಗೃತಿ ಜಾಥಾ ತಮ್ಮ ವ್ಯಾಪ್ತಿಗೆ ಬಂದಾಗ ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಪಿ. ಡಿ. ಒ ಗಳು ಸೇರಿ ಹಬ್ಬದ ವಾತಾವರಣ ಸೃಷ್ಟಿಸಿ ಜಾಥಾವನ್ನು ಬರಮಾಡಿಕೊಳ್ಳಿ ಎಂದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಸಿದ್ದಲಿಂಗೇಶ್ ಸೇರಿದಂತೆ ವಿವಿಧ ಸಂಘ ಸಂಸ್ಥೆಯ ಮುಖಂಡರು ಉಪಸ್ಥಿತರಿದ್ದರು.

# “ಅಸ್ಮಿತೆ” ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ

**ಬೆಂಗಳೂರು:** ಕರ್ನಾಟಕ ರಾಜ್ಯ ರಾಷ್ಟ್ರೀಯ ಜೀವನೋಪಾಯ ಅಭಿಯಾನ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಮಹಿಳಾ ಸ್ವ-ಸಹಾಯ ಗುಂಪುಗಳ ಕರಕುಶಲ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ - “ಅಸ್ಮಿತೆ”ಯನ್ನು ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ. ಶಾಲಿನಿ ರಜನೀಶ್ ಅವರು ಉದ್ಘಾಟಿಸಿದರು.

ರಾಜ್ಯಾದ್ಯಂತ ಇರುವ ಮಹಿಳಾ ಸ್ವ - ಸಹಾಯ ಗುಂಪುಗಳು ತಯಾರಿಸಿರುವ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಜನವರಿ 22 ರಿಂದ 24ರ ವರೆಗೆ (3 ದಿನಗಳು) ಬೆಳಿಗ್ಗೆ



10.30 ರಿಂದ ರಾತ್ರಿ 9.30 ಗಂಟೆಯ ವರೆಗೆ ಬೆಂಗಳೂರಿನ ಐ.ಎ.ಎಸ್ ಅಧಿಕಾರಿಗಳ ಅಸೋಸಿಯನ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಪ್ರದರ್ಶನ ಮೇಳದಲ್ಲಿ ಮಹಿಳಾ ಸ್ವ-ಸಹಾಯ ಗುಂಪುಗಳು ತಮ್ಮ ಆರ್ಥಿಕ ಸದೃಡತೆಗಾಗಿ ತಯಾರಿಸಲಾದ ಉತ್ಪನ್ನಗಳ ಪ್ರದರ್ಶನದೊಂದಿಗೆ ಮಾರಾಟವನ್ನು ಸಹ ಮಾಡಲಾಗುವುದು. ಈ ಮೇಳದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 58 ಮಹಿಳಾ ಸ್ವ ಸಹಾಯ ಗುಂಪುಗಳು ಭಾಗವಹಿಸಿವೆ. ಬೀದರ್‌ನ ರಾಜ್ ಬಿದ್ರಿ ಸ್ವ ಸಹಾಯ ಸಂಘದ ಬಿದ್ರಿ ಉತ್ಪನ್ನಗಳು, ಸಮೃದ್ಧಿ ಸಂಜೀವಿನಿ ಸ್ವ-ಸಹಾಯ ಸಂಘದ ಟೆರಕೋಟ ಪ್ಲ್ಯಾಂಟ್, ಚನ್ನಪಟ್ಟಣದ ಶಾರದಾದೇವಿ ಸ್ವ-ಸಹಾಯ ಸಂಘದ ಚನ್ನಪಟ್ಟಣ ಗೊಂಬೆಗಳು, ಮಹಾಲಕ್ಷ್ಮಿ ಸ್ವ-ಸಹಾಯ ಸಂಘದ ಟೆರಕೋಟ ವಸ್ತುಗಳು, ಪಾರ್ವತಿ ಪರಮೇಶ್ವರ ಸ್ವ-ಸಹಾಯ ಸಂಘದ ಇಳಕಲ್ ಸೀರೆಗಳು, ಬನಶಂಕರಿ ಸ್ವ-ಸಹಾಯ ಸಂಘದ ತಿಪಟೂರು ಸೀರಿಗಳು, ಶಾರದಾಂಭ ಸ್ವ-ಸಹಾಯ ಸಂಘದ ಕೊಡೊಯಾಲ ಸೀರೆ, ಲಕ್ಷ್ಮೀ ಸ್ವ-ಸಹಾಯ ಸಂಘದ ಮೊಳಕಾಲ್ಮೂರು ರೇಷ್ಮೆ ಸೀರೆ, ಮುತ್ಯಾಲಮ್ಮ ಸ್ವ-ಸಹಾಯ ಸಂಘದ ದೊಡ್ಡಬಳ್ಳಾಪುರ ಸೀರೆ, ಚೇತನ ಸ್ವ-ಸಹಾಯ ಸಂಘದ ಪರವಲೂಮ್ ಸೀರೆ (ಹ್ಯಾಂಡ್‌ಮೇಡ್ ಕಾಟನ್ ಮತ್ತು ಎಂಬ್ರೆಡರಿ), ಯುನಿವರ್ಸ್ ಸ್ವ-ಸಹಾಯ ಸಂಘದ ಗದ್ವಾಲ ಸೀರೆ, ಶ್ರೀ ಸೌಮ್ಯ ಕೇಶವ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘದ ಕಲ್ಲೂರು ಸೀರೆ, ಶ್ರೀ ಕೋಟೇಶ್ವರ ಸ್ವ ಸಹಾಯ ಸಂಘದ ಶಿಗ್ಲಿ ಸೀರೆ, ರಾಘವೇಂದ್ರಸ್ವಾಮಿ ಸಂಜೀವಿನಿ ಸ್ವ-ಸಹಾಯ ಸಂಘದ ಕುದೂರ್ ಸೀರೆ, ರಾಮಾಬಾಯಿ ಅಂಬೇಡ್ಕರ್ ಸ್ವ-ಸಹಾಯ ಸಂಗದ ಮಕ್ಕಳ ಉಡುಪು, ಮಹಾದೇವಿ ಸಂಜೀವಿನಿ ಸ್ವ-ಸಹಾಯ ಸಂಘದ ಲಂಬಾಣಿ ಉತ್ಪನ್ನಗಳು, ಬಿಸ್ಮಿಲ್ಲಾ ಸ್ವ-ಸಹಾಯ ಸಂಘದ ಕೌದಿ, ಅನ್ನಪೂರ್ಣೇಶ್ವರಿ ಸ್ವ-ಸಹಾಯ ಸಂಘದ ಅರೆಕಾ ತಟ್ಟೆ (ಪ್ಲೇಟ್), ಚೆನ್ನಯಿ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘದ ಬ್ಯಾಗ್ಸ್, ದಾನೇಶ್ವರಿ ಸ್ವ-ಸಹಾಯ ಸಂಘದ ಖಾದಿ ಸೀರೆಗಳು, ಚಾಮುಂಡೇಶ್ವರಿ ಸ್ವ-ಸಹಾಯ ಸಂಘದ ಕಾಟನ್ ಕ್ಲಾತ್ ಉತ್ಪನ್ನಗಳು, ದುರ್ಗ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘದ ಚರಕ, ಶ್ರೀ ಶಾರದ ಮಹಿಳಾ ಸ್ವ ಸಹಾಯ ಸಂಘದ ಜ್ಯೂಟ್ ಬ್ಯಾಗ್ ವಿವಿಧ ಮಹಿಳಾ ಸ್ವ-ಸಹಾಯ ಗುಂಪುಗಳು ಉತ್ಪಾದಿಸಿರುವ ವಿವಿಧ ಉತ್ಪನ್ನಗಳ ಪ್ರದರ್ಶನದ ಜೊತೆಗೆ ಮಾರಾಟವನ್ನು ಸಹ ಮಾಡಲಾಗುವುದು.

# ಶ್ರೀರಾಮ ಆದರ್ಶ ನುಕರಣೀಯ; ಸಿಎಂ




**ಬೆಂಗಳೂರು:** ನಾನು ನಾಸ್ತಿಕನಲ್ಲ-ಆಸ್ತಿಕ. ನಮ್ಮೂರಲ್ಲೂ ರಾಮನ ಗುಡಿ ಕಟ್ಟಿಸಿದ್ದೇನೆ. ಅಧರ್ಮದ-ಅಮಾನವೀಯ ಕೆಲಸ ಮಾಡಿ ನಾಟಕೀಯವಾಗಿ ಪೂಜೆ ಮಾಡಿದರೆ ಆ ಪೂಜೆಯನ್ನು ದೇವರು ಒಪ್ಪಿಕೊಳ್ಳಲ್ಲ. ಸಕಲ ಜೀವಗಳೂ ಸಮಾನತೆ, ಪ್ರೀತಿಯಿಂದ ಬಾಳಬೇಕು ಎನ್ನುವುದು ಆದರ್ಶ ಶ್ರೀರಾಮ ಆಶಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಬಿದರಹಳ್ಳಿ ಹೋಬಳಿಯ, ಹಿರಂಡಹಳ್ಳಿ ಶ್ರೀರಾಮ ಟೆಂಪಲ್ ಟ್ರಸ್ಟ್ ನಿರ್ಮಿಸಿದ್ದ ಸಕುಟುಂಬ ಸಮೇತನಾಗಿರುವ ರಾಮ ಸೀತ ಲಕ್ಷ್ಮಣ ದೇವಾಲಯ ಹಾಗೂ 33 ಅಡಿ ಎತ್ತರದ ಏಕಶಿಲಾ ಆಂಜನೇಯ ಸ್ವಾಮಿ ವಿಗ್ರಹದ ಶಿಲಾ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಬಳಿಕ ಮಹಾ ಕುಂಭಾಭಿಷೇಕದಲ್ಲಿ ಪಾಲ್ಗೊಂಡು ಮಾತನಾಡಿದ ಮುಖ್ಯಮಂತ್ರಿಗಳು, ರಾಜ್ಯದ ಹಳ್ಳಿ ಹಳ್ಳಿಗಳಲ್ಲೂ ರಾಮನ ಗುಡಿಗಳು ಇವೆ. ಪ್ರತಿಯೊಬ್ಬರೂ ಅವರವರ ನಂಬಿಕೆಯಂತೆ ರಾಮನನ್ನು ಪೂಜಿಸುತ್ತಾರೆ ಎಂದರು.

ಯಾವುದೇ ಜಾತಿ-ಧರ್ಮ ಆಧಾರದ ಮೇಲೆ ಆಚರಣೆಗಳನ್ನು ಮಾಡುವುದಿಲ್ಲ. ಶ್ರೀರಾಮ ಸಮಾಜಮುಖಿ ಆಗಿದ್ದರು. ಒಬ್ಬ ಮಡಿವಾಳನ ಮಾತಿಗೂ ಬೆಲೆ ಕೊಟ್ಟಂತಹ ಮಹಾನುಭಾವ ಶ್ರೀರಾಮ. ಪಿತೃವಾಕ್ಯ ಪರಿಪಾಲನೆಗೆ ವನವಾಸಕ್ಕೆ ಹೋದರು. ಶ್ರೀರಾಮ, ಲಕ್ಷ್ಮಣ, ಸೀತೆ, ಆಂಜನೇಯರನ್ನು ಬೇರ್ಪಡಿಸಲು ಸಾಧ್ಯವಿಲ್ಲ. ಇವರೆಲ್ಲಾ ಸಕುಟುಂಬಸ್ಥರು ಎಂದು ವಿವರಿಸಿದರು.

ಕುವೆಂಪು ಅವರ ಸರ್ವ ಜನಾಂಗದ ಶಾಂತಿಯ ತೋಟ ಎನ್ನುವ ಆಶಯ ಶ್ರೀರಾಮನ ಆದರ್ಶ ಮತ್ತು ವ್ಯಕ್ತಿತ್ವದಲ್ಲಿದೆ. ಮನುಷ್ಯ ಮನುಷ್ಯನನ್ನು ದ್ವೇಷಿಸಬಾರದು ಎನ್ನುವುದೇ ರಾಮಾಯಣ, ಮಹಾಭಾರತದ ಸಂದೇಶ ಎಂದು ವಿವರಿಸಿದರು.

ಪರಿಶಿಷ್ಠ ಪಂಗಡ ಸಮುದಾಯದ ವಾಲ್ಮೀಕಿ ಅವರು ರಾಮಾಯಣವನ್ನು ಬರೆದು ವಿಶ್ವಕ್ಕೆ ಕೊಟ್ಟರು. ದೇವರು ನಮ್ಮ ಆತ್ಮ ಮತ್ತು ಶರೀರದಲ್ಲೇ ಇದ್ದಾನೆ ಎಂದು ಬಸವಣ್ಣನವರು ನುಡಿದರು. ದೇಹವೇ ದೇಗುಲ ಎನ್ನುವ ಸಂದೇಶವನ್ನು ಮನುಷ್ಯ ಪ್ರಪಂಚಕ್ಕೆ ನೀಡಿದ್ದಾರೆ ಎಂದು ವಚನಗಳನ್ನು ಉದಾಹರಿಸಿದರು.

ಜೈ ಶ್ರೀರಾಮ್ ಎನ್ನುವುದು ಯಾರದ್ದೋ ಖಾಸಗಿ ಸ್ವತ್ತಲ್ಲ. ಅದು ಪ್ರತಿಯೊಬ್ಬ ಭಕ್ತರ ಸ್ವತ್ತು ಎನ್ನುತ್ತಾ ತಾವೂ ಜೈ ಶ್ರೀರಾಮ್ ಘೋಷಣೆ ಕೂಗಿ ನೆರೆದಿದ್ದ ಸಾರ್ವಜನಿಕರಿಗೂ ಘೋಷಣೆ ಕೂಗಿಸಿದರು. ಸಚಿವರಾದ ಬೈರತಿ ಸುರೇಶ್, ಈಶ್ವರ್ ಖಂಡ್ರೆ, ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಪ್ರೊ.ಎಂ.ವಿ. ರಾಜೀವ್ ಗೌಡ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಶಾಸಕರಾದ ಮಂಜುಳಾ ಅರವಿಂದ ಲಿಂಬಾವಳಿ, ಮಾಜಿ ಸಚಿವರಾದ ಎಚ್.ಎಂ.ರೇವಣ್ಣ, ಅರವಿಂದ ಲಿಂಬಾವಳಿ ವೇದಿಕೆಯಲ್ಲಿ ಉಪಸ್ಥಿತರಿದ್ದರು

# 26ರಿಂದ ಚಿಕ್ಕಬಳ್ಳಾಪುರ ಜಿಲ್ಲಾ ಮಟ್ಟದ ಫಲಪುಷ್ಪ ಪ್ರದರ್ಶನ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ 2023-24ನೇ ಸಾಲಿನ ಜಿಲ್ಲಾ ಮಟ್ಟದ “ಫಲಪುಷ್ಪ ಪ್ರದರ್ಶನ” ಕಾರ್ಯಕ್ರಮವನ್ನು 2024ರ ಜನವರಿ 26 ರಿಂದ 28 ರವರೆಗೆ ಬೆಳಿಗ್ಗೆ 10.00 ರಿಂದ ರಾತ್ರಿ 8.00 ರವರಗೆ ನಗರದ ಸರ್.ಎಂ. ವಿ. ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಮಾನ್ಯ ಉನ್ನತ ಶಿಕ್ಷಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ.ಸುಧಾಕರ್ ರವರು ನೆರವೇರಿಸಲಿದ್ದಾರೆ. ಫಲಪುಷ್ಪ ಪ್ರದರ್ಶನ ಕಾರ್ಯಕ್ರಮವನ್ನು ನೋಡಲು ಎಲ್ಲರಿಗೂ ಉಚಿತ ಪ್ರವೇಶವಿದ್ದು, ಜಿಲ್ಲೆಯ ಎಲ್ಲಾ ರೈತರು, ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಚಿಕ್ಕಬಳ್ಳಾಪುರ ತೋಟಗಾರಿಕೆ ಉಪ ನಿರ್ದೇಶಕಿ ಗಾಯಿತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ದರಾಮಯ್ಯ ಒಳಮೀಸಲಾತಿ ನೀಡುವ ಕುರಿತ ನಿರ್ಣಯ ಚುನಾವಣಾ ಗಿಮಿಕ್

**ಚಾಮರಾಜನಗರ:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಒಳ ಮೀಸಲಾತಿ ನೀಡುವ ಕುರಿತು ಸಂಪುಟದಲ್ಲಿ ತೆಗೆದುಕೊಂಡಿರುವ ನಿರ್ಣಯ ಹಾಗು ಕೇಂದ್ರಕ್ಕೆ ಪ್ರಸ್ತಾವಣೆ ಸಲ್ಲಿಸುವ ವಿಚಾರವು ಚುನಾವಣಾ ಗಿಮಿಕ್ ಆಗಿದೆ ಎಂದು ಮಾಜಿ ಸಚಿವ ಕೋಟೆ ಎಂ. ಶಿವಣ್ಣ ಆರೋಪಿಸಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪ್ರತಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷಕ್ಕೆ ಎಡಗೈ ಸಮುದಾಯದ ಬಗ್ಗೆ ಬದ್ದತೆ ಕಾಳಜಿಇಲ್ಲ, ಒಳಮೀಸಲಾತಿಯನ್ನು ಕಳೆದ5 ವರ್ಷಗಳ ಪೂರ್ಣವಧಿ ಮುಖ್ಯಮಂತ್ರಿಯಾಗಿದ್ದಾಗಲೇ ಮಾಡಲಿಲ್ಲ, ಈಗ ಲೋಕಸಭಾ ಚುನಾವಣೆ ದೃಷ್ಟಿಯಿಂದ ಒಳಮೀಸಲಾತಿಯ ಪ್ರಸ್ತಾಪವನ್ನು ಮಾಡಿ, ಸಮುದಾಯವನ್ನು ದಾರಿ ತಪ್ಪಿಸುವ ತಂತ್ರ ಇದಾಗಿದೆ ಎಂದರು. 2023ರ ವಿಧಾನಸಭಾ ಚುನಾವಣೆ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷ ಸದಾಶಿವ ಆಯೋಗದ ವರದಿ ಜಾರಿ ಮಾಡುವ ಒಳ ಮೀಸಲಾತಿಯ ಪ್ರಸ್ತಾಪವನ್ನು ಮಾಡಿಲ್ಲ. ಸಂವಿಧನದ 341ನೇ ತಿದ್ದುಪಡಿ ಮಾಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ ಎಂಬುವುದು ಕಪಟ ನಾಟಕವಾಗಿದ್ದು, ಎಡಗೈ ಸಮುದಾಯಕ್ಕೆ ನ್ಯಾಯ ಕಲ್ಪಿಸುವ ಕೆಲಸವನ್ನ ಕಾಂಗ್ರೆಸ್ ಪಕ್ಷ ಮಾಡುತ್ತಿಲ್ಲ, ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಸಮುದಾಯ ಸಂಕಷ್ಟವನ್ನು ನೋಡಿ, ಒಳ ಮೀಸಲು ಜಾತಿ ಮಾಡುವ ಭರವಸೆ ನೀಡಿದ್ದು, ಇದನ್ನು ಕಾಂಗ್ರೆಸ್ ಸಹಿಸದೇ ಈ ರೀತಿ ವಿಭಿನ್ನ ಹೇಳಿಕೆಯನ್ನು ನೀಡುತ್ತಿದೆ ಎಂದರು. ಪರಿಶಿಷ್ಟ ಜಾತಿಯ ವರ್ಗೀಕರಣ ಬಗ್ಗೆ ದೆಹಲಿ ಹೈಕೋರ್ಟ್ ನಿವೃತ್ತ ನ್ಯಾಯಾಮೂರ್ತಿ ಉಷಾಮಿಶ್ರಾ ಸಮಿತಿ ಸಂವಿಧಾನದ 341 ತಿದ್ದುಪಡಿ ತರಬೇಕೆಂದು ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗಿದೆ. ಆದರೆ, 2020ರದಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಮೂರ್ತಿಗಳಾದ ಅರುಣ್‌ಮಿಶ್ರ ನ್ಯಾಯಪೀಠ ವರ್ಗೀಕರಣ ವಿಷಯದಲ್ಲಿ 341ನೇಯ ತಿದ್ದುಪಡಿ ಅಗತ್ಯವಿಲ್ಲ ಎಂದು ಹೇಳಿದೆ.ಈಗ ಈ ಐತಿಹಾಸಿಕ ತೀರ್ಪು ಸುಪ್ರೀಂ ಕೋರ್ಟಿನ 7 ಸದಸ್ಯರ ಪೀಠದ ಮುಂದೆ ಇದೆ ಎಂದರು.

2013 ರಿಂದ 2018 ರವರಗೆ ಪೂರ್ಣಾವದಿಯಲ್ಲಿ ಒಳಮೀಸಲಾತಿ ಜಾರಿ ಮಾಡಲಿಲ್ಲ. 2016ರಲ್ಲಿ ಹುಬ್ಬಳ್ಳಿಯಲ್ಲಿ ನಡೆದ ಎಡಗೈ ಸಮಾಜದ 4-5 ಲಕ್ಷ ಜನ ಸೇರಿದ್ದಾಗ ಸದಾಶಿವ ಆಯೋಗದ ವರದಿ ಜಾರಿ ಮಾಡುತ್ತಾರೆಂದು ಎಲ್ಲರು ನಿರೀಕ್ಷಿದದರು. ಆದರೆ, ಸಿದ್ದರಾಮಯ್ಯ ಅದನ್ನು ಹುಸಿಗೊಳಿಸಿದರಿಂದ ಅಂದು ಕಾಂಗ್ರೆಸ್ ಪಕ್ಷದ ಅಧಿಕಾರ ಕಳೆದುಕೊಳ್ಳಬೇಕಾಯಿತು. ಮತ್ತೇ ಸಿದ್ದರಾಮಯ್ಯ ವಿರೋಧ ಪಕ್ಷದ ನಾಯಕರಾಗಿದ್ದಾಗಲೂ ಒಳ ಮೀಸಲಾತಿ ವಿರೋಧಿಗಳು ಪರವಾಗಿ ಧ್ವನಿಯಾಗಿದ್ದು, ನಿಮ್ಮಗಳ ಹಿತ ಕಾಪಾಡಲು ಒಳಮೀಸಲಾತಿ ಜಾರಿಮಾಡಿಲ್ಲ ಎಂದು ಪ್ರಸ್ತಾಪ ಮಾಡಿದ್ದನ್ನು ನಾವೆಲ್ಲರ ಕೇಳಿದ್ದೇವೆ. ಇಂಥ ಸರ್ಕಾರ ಮಾದಿಗರ ಸಮುದಾಯಕ್ಕೆ ಒಳ ಮೀಸಲಾತಿ ಕಲ್ಪಿಸಲು ಸಾಧ್ಯವೆ ಎಂದು ಕೋಟೆ ಎಂ. ಶಿವಣ್ಣ ಖಾರಪ್ರಶ್ನೆ ಮಾಡಿದರು.

ನಂತರ ಬಂದ ಬಸವರಾಜು ಬೊಮ್ಮಾಯಿ ಅವರ ನೇತೃತ್ವದಬಿಜೆಪಿಸರ್ಕಾರಎಸ್ಸಿ,ಎಸ್ಟಿಮೀಸಲಾತಿಯನ್ನು ಹೆಚ್ಚಳ ಮಾಡಿ, ಶೇ. 15 ಅನ್ನು ಶೇ 17 ಕ್ಕೆ ಏರಿಕೆ ಮಾಡಿತ್ತು. ಜನಸಂಖ್ಯೆಗೆ ಅನುಗುಣವಾಗಿವಎಡಗೈ ಸಮಾಜಕ್ಕೆ ಶೇ. 6 ಬಲಗೈ ಸಮುದಾಯಕ್ಕೆ ಶೇ. 5.5 ರಷ್ಟು, ಭೋವಿ, ಲಂಬಾಣಿ, ಕೊರಮ, ಕೊರಚ, ಸಮಾಜಕ್ಕೆ ಶೇ. 4.5ಷ್ಟು ಇತರೇ ಜಾತಿಗಳಿಗೆ ಶೇ. 1 ನ್ನು ವರ್ಗೀಕರಿಸಿ, ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದು ಒಳ ಮೀಸಲಾತಿಯನ್ನು ಜಾರಿ ಮಾಡಿ, ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿತ್ತು, ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ಮೋದಿ ಅವರು ಸಹ ಮಾದಿಗ ಸಮುದಾಯದ ಬಗ್ಗೆ ಉತ್ಸಾಕುರಾಗಿದ್ದಾರೆ. ಪ್ರಧಾನಿ ಅವರು ಒಳಮೀಸಲಾತಿ ಜಾರಿ ಮಾಡುವ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಒಳ ಮೀಸಲಾತಿ ನೀಡುವ ಪ್ರಸ್ತಾಪ ಮಾಡಿರುವುದು ಸಮುದಾಯದ ಕಣ್ಣೀರು ಒರೆಸುವ ಕೆಲಸ, ಹಿಗಾಗಿ ಒಳಮೀಸಲಾತಿ ಜಾರಿ ಮಾಡುವಲ್ಲಿ ಬಿಜೆಪಿಗೆ ಹೆಚ್ಚಿನ ಬದ್ದತೆ ಮತ್ತು ಇಚ್ಛಾಸಕ್ತಿ ಇದೆ ಎಂದು ಕೋಟೆ ಎಂ. ಶಿವಣ್ಣ ತಿಳಿಸಿದರು.

ಸ್ಥಳೀಯರಿಗೆ ಟಿಕೆಟ್ ಕೊಡಿಸಲು ಮನವಿ : ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದಿಂದ ಬಿಜೆಪಿ ಪ್ರಬಲ ಆಕಾಂಕ್ಷಿಯಾಗಿದ್ದೇನೆ. ಪಕ್ಷದಲ್ಲಿ ಸೇವೆ ಹಿರಿತನ ಹಾಗೂ ಎಡಗೈ ಸಮುದಾಯಕ್ಕೆ ಪ್ರಾತಿನಿಧ್ಯ ನೀಡುವ ನಿಟ್ಟಿನಲ್ಲಿ ಅವಕಾಶ ಕಲ್ಪಿಸಿಕೊಡಬೇಕು. ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಎಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯನ್ನಾಗಿದ್ದು, ಎರಡು ಬಾರಿ ಲೋಕಸಭೆಗೆ ಸ್ಪರ್ಧೆ ಮಾಡಿದ್ದೇನೆ. ಹೀಗಾಗಿ ವರಿಷ್ಟು ನನಗೊಂದು ಅವಕಾಶ ಕೊಟ್ಟರೆ ಖಂಡಿತ ಕ್ಷೇತ್ರದ ಹಾಗೂ ರಾಜ್ಯದಲ್ಲಿ ಹೆಚ್ಚು ಬಿಜೆಪಿ ಸ್ಥಾನಗಳನ್ನು ಗೆಲ್ಲಲು ನಮ್ಮ ಕ್ಷೇತ್ರ ಪ್ರಮುಖ ಪಾತ್ರ ವಹಿಸಲಿದೆ. ವರಿಷ್ಟರು ಟಿಕೆಟ್ ನೀಡುತ್ತಾರೆ ಎಂಬ ವಿಶ್ವಾಸವು ಸಹ ನನಗಿದೆ ಎಂದರು. ಮುಖಂಡರಾದ ಬಸವನಪುರ ರಾಜಶೇಖರ್,ಬ್ಯಾಂಕ್ ನಿವೃತ್ತ ಅಧಿಕಾರಿ ಎಸ್. ಬಸವರಾಜು, ಕೆಸ್ತೂರು ಮರಪ್ಪ, ಆರ್. ರಾಜು, ಶಿವಕುಮಾರ್, ಲಿಂಗರಾಜು ಹಾಜರಿದ್ದರು.

# 2000 ಲಾಡು ಉಚಿತ ವಿತರಣೆ

**ಚಾಮರಾಜನಗರ:** ತ್ಯಾಗರಾಜ್ ರಸ್ತೆ ಅಂಗಡಿ ಮಾಲೀಕರು ಅಯೋಧ್ಯೆಯಲ್ಲಿ ಶ್ರೀರಾಮ ಪ್ರತಿಷ್ಠಾನ ಹಿನ್ನೆಲೆ ಸಡಗರ ಸಂಭ್ರಮದಿಂದ ಶ್ರೀ ಚಾಮರಾಜೇಶ್ವರ ಉದ್ಯಾನ ಮುಂಭಾಗದ ಜೈ ಶ್ರೀ ರಾಮ್, ಲಕ್ಷ್ಮಣ ,ಸೀತಾ,ಆಂಜನೇಯ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ. ಆಗಮಿಸಿದ ಎಲ್ಲಾ ಸಾರ್ವಜನಿಕರಿಗೆ ಉಚಿತ ಲಾಡು ವಿತರಣೆ ಮಾಡಿದರು. ತ್ಯಾಗರಾಜ್ ರಸ್ತೆ ಅಂಗಡಿ ಮಾಲೀಕರಾದ ಕೇಶವ, ಸಂಜೀವ್ ಕುಮಾರ್, ಜಗದೀಶ್, ಅಜಿತ್, ಸುರೇಶ್, ರೇಣುಕ ಪ್ರಸಾದ್, ಶಿವಪ್ಪ, ಮಧು ,ನವೀನ, ಭೂಮಿಕ ರಾಜೇಂದ್ರ. ಅಜಯ್, ಹಾಗೂ ವಿಶೇಷವಾಗಿ ಜಿಲ್ಲಾ ಪತ್ರಕರ್ತರ ಅಧ್ಯಕ್ಷ ಜಿ ಬಂಗಾರು. ರಾಮನ ದೇವರಿಗೆ ಪುಷ್ಪಕ್ಷನೆ ಮಾಡಿದರು ಸಂದರ್ಭದಲ್ಲಿ. ಈ ಸಂದರ್ಭದಲ್ಲಿ ಪತ್ರಕರ್ತ ಮಿತ್ರರು. ಸ್ನೇಹಿತರು ಹಿತೈಷಿಗಳು. ತ್ಯಾಗರಾಜ್ ಅಂಗಡಿ ಮಾಲೀಕರು ಹಾಜರಿದ್ದರು.





## ಕೊಡಗಹಳ್ಳಿ ವಿಶೇಷ ಪೂಜೆ

ಮೈಸೂರು ಜಿಲ್ಲೆ ತಿ.ನರಸೀಪುರ ತಾಲ್ಲೂಕು, ಬನ್ನೂರು ಹೋಬಳಿಯಲ್ಲಿರುವ ಇತಿಹಾಸ ಪ್ರಸಿದ್ಧ ಕೊಡಗಹಳ್ಳಿ ಗ್ರಾಮದ ಶ್ರೀ ಕೋದಂಡ ರಾಮಮಂದಿರದಲ್ಲಿ ಅಯೋಧ್ಯೆ ಶ್ರೀರಾಮ ಪ್ರಾಣ ಪ್ರತಿಷ್ಠಾಪನೆ ಪ್ರಯುಕ್ತ ವಿಶೇಷ ಪೂಜೆ ಏರ್ಪಡಿಸಲಾಗಿತ್ತು. ಪ್ರಧಾನ ಅರ್ಚಕರಾದ ಶ್ರೀನಿವಾಸ ದೀಕ್ಷಿತ್ ನೇತೃತ್ವದಲ್ಲಿ ಬೆಳಿಗ್ಗೆಯಿಂದಲೇ ದೇವರಿಗೆ ಅಭಿಷೇಕ, ಅಲಂಕಾರ, ಭಜನೆ, ಮಹಾಮಂಗಳಾರತಿ ಹಾಗೂ ತೀರ್ಥ ಪ್ರಸಾದವನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮದ ಪಟೇಲರಾದ ಕೆ.ಜೆ.ಚಿಕ್ಕಜವರಪ್ಪ, ಶ್ರೀಮತಿ ಸುಮಾ ಶ್ರೀನಿವಾಸ್, ಕುಮಾರಿ ಶ್ರೀಸಿರಿ, ಮುಖಂಡರಾದ ಕೆ.ಜೆ.ನಾಗರಾಜ್, ಸರ್ಕಾರಿ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಬಾಲಸುಬ್ರಹ್ಮಣ್ಯ, ವಿಂಧ್ಯಾ, ರಾಜೇಂದ್ರಪ್ರಸಾದ್, ಸುಬ್ಬಣ್ಣ, ಚೆನ್ನಪ್ಪ, ಹರೀಶ್, ಗಿರೀಶ್ ಹಾಗೂ ಸುತ್ತಮುತ್ತಲಿನ ಗ್ರಾಮದ ಭಕ್ತಾದಿಗಳು ದೇವತಾ ಕಾರ್ಯದಲ್ಲಿ ಭಾಗವಹಿಸಿ ಪುನೀತರಾದರು.

# ಕಲೆ, ಸಂಸ್ಕೃತಿ ಕಾರ್ಯಕ್ರಮಗಳಲ್ಲಿ ಆಸಕ್ತಿ ಇರಲಿ



**ಚಾಮರಾಜನಗರ:** ಕಲೆ, ಸಂಸ್ಕೃತಿ, ಪರಂಪರೆ ಬಿಂಬಿಸುವ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಮಕ್ಕಳು ಆಸಕ್ತಿ ಹೊಂದಬೇಕು ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಸಲಹೆ ಮಾಡಿದರು.

ನಗರದ ಮಲ್ಲಯ್ಯನಪುರದ ಆದರ್ಶ ವಿದ್ಯಾಲಯದಲ್ಲಿಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಏರ್ಪಾಡಾಗಿದ್ದ ಚಿಗುರು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜನಪದ ಕಲೆಗಳ ತವರೂರು ಎನಿಸಿರುವ ಚಾಮರಾಜನಗರ ಜಿಲ್ಲೆ ಕಲಾ ಪರಂಪರೆಗೆ ಪ್ರಸಿದ್ದಿಯಾಗಿದೆ. ಮಲೆ ಮಹದೇಶ್ವರ, ಬಿಳಿಗಿರಿರಂಗನಾಥಸ್ವಾಮಿ ಸೇರಿದಂತೆ ಹಲವು ಪ್ರಸಿದ್ದ ಇತಿಹಾಸ ಹೊಂದಿರುವ ಜಿಲ್ಲೆಯಲ್ಲಿ ಕಲೆಗೆ ಹೆಚ್ಚಿನ ಪ್ರಾಮುಖ್ಯತೆ ಇದೆ. ಇಂತಹ ಜಿಲ್ಲೆಯಲ್ಲಿ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿಯೂ ಹೆಚ್ಚು ತೊಡಗಿಕೊಳ್ಳಬೇಕು ಎಂದು ಸಲಹೆ ಮಾಡಿದರು. ಈ ಹಿಂದೆ ನಾಟಕ ಪ್ರದರ್ಶನ ಗ್ರಾಮಾಂತರ ಭಾಗಗಳಲ್ಲಿ ವ್ಯಾಪಕವಾಗಿ ನಡೆಯುತ್ತಿದ್ದವು. ಕಲಾ ಪ್ರದರ್ಶನದ ಪ್ರಮುಖ ಭಾಗವಾಗಿದ್ದ ನಾಟಕಗಳ ವೀಕ್ಷಣೆ ಹೆಚ್ಚಾಗಿತ್ತು. ಬದಲಾದ ಕಾಲದಲ್ಲಿ ನಾನಾ ಪ್ರಕಾರಗಳ ಕಲೆ ಅಭಿವ್ಯಕ್ತಿಸುವ ಅವಕಾಶಗಳು ಲಭಿಸುತ್ತಿವೆ. ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಪ್ರತಿಭೆ ಅನಾವರಣಕ್ಕೆ ಸಹಕಾರಿಯಾಗಿವೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು. ಶಿಕ್ಷಣಾಧಿಕಾರಿ ಲಕ್ಷ್ಮೀಪತಿ ಅವರು ಮಾತನಾಡಿ ವಿದ್ಯಾಥಿಗಳು ಚಿಕ್ಕ ವಯಸ್ಸಿನಲ್ಲಿಯೇ ಒಳ್ಳೆಯ ಹವ್ಯಾಸ ರೂಢಿಸಿಕೊಳ್ಳಬೇಕು. ಮೊಬೈಲ್ ಅವಲಂಬನೆ ಕಡಿಮೆ ಮಾಡಬೇಕು. ಸಂಗೀತ, ನಾಟಕ, ಇನ್ನಿತರ ಸದಭಿರುಚಿಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಣೆ ಮಾಡಬೇಕು. ವ್ಯಾಸಂಗದ ಜೊತೆಯಲ್ಲಿಯೇ ಕಲೆ ಚಟುವಟಿಕೆಗಳತ್ತಲೂ ಗಮನ ಹರಿಸಬೇಕು ಎಂದು ಸಲಹೆ ಮಾಡಿದರು. ವಿದ್ಯಾರ್ಥಿಗಳು ನೃತ್ಯ ರೂಪಕ, ಸಂಗೀತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶಿವಮ್ಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಗುರುಲಿಂಗಯ್ಯ ಇತರರು ಉಪಸ್ಥಿತರಿದ್ದರು.

## 27ಕ್ಕೆ ವದುವರರ ಸಮಾವೇಶ

**ಮೈಸೂರು:** ಲಾವಣ್ಯ ಮ್ಯಾಟ್ರಿಮೋನಿಯಂ ಹಾಗೂ ಶಾಶ್ವತ ಸೇವಾ ಚಾರಿಟಬಲ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಜ.27ರಂದು ಬೆಳಗ್ಗೆ 10 ರಿಂದ ಸಂಜೆ 4ರವರೆಗೆ ನಗರದ ಗೋವರ್ಧನ್ ಹೋಟೇಲ್‌ನ ಸತ್ಯಭಾಮಾ ಹಾಲ್‌ನಲ್ಲಿ ಉಚಿತ ವಧು ವರರ ಸಮಾವೇಶ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಲೋಕೇಶ್ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಧು ವರಾನ್ವೇಷಣೆ ವೇಳೆಯ ಸಮಸ್ಯೆ ಅರಿತು ನೆರವಾಗಲೆಂದು ಈ ಸಂಸ್ಥೆ ರಚಿಸಿ, ಈಗ ವಧುವರರ ಸಮಾವೇಶ ಆಯೋಜಿಸಲಾಗಿದೆ. ಇದಕ್ಕೆ ಯಾವುದೇ ಜಾತಿ ನಿರ್ಬಂಧವಿಲ್ಲ. ಯಾವುದೇ ಸಮುದಾಯದವರು ಸಹಾ ಪಾಲ್ಗೊಳ್ಳಬಹುದಾಗಿದ್ದು, ಸಂಪೂರ್ಣ ಉಚಿತವಾಗಿದೆ. ಹೆಚ್ಚಿನ ಮಾಹಿತಿಗೆ ದೂ. 91647 43059, 88843 47949 ನ್ನು ಸಂಪರ್ಕಿಸಲು ಕೋರಿದರು. ಸುದ್ದಿಗೋಷ್ಠಿಯಲ್ಲಿ ಲಾವಣ್ಯ ಮಹೇಶ್, ಮಹೇಶ್, ಅಕ್ಷತಾ ಹಾಗೂ ನಾಗಮ್ಮ



## ಸಲಿಂಗ ಕಾಮದಿಂದ ಹೊರ ಬರುವ ಬಗ್ಗೆ ಕಿರುಚಿತ್ರ ಬಿಡುಗಡೆ

**ಮೈಸೂರು:** ಸಲಿಂಗ ಕಾಮದ ದುಷ್ಪರಿಣಾಮ ಹಾಗೂ ಅದರಿಂದ ಹೊರ ಬರುವ ಬಗೆ ಕುರಿತು ತಾವು ನಿರ್ಮಿಸಿರುವ ಡೋಂಟ್ ಟಚ್ ಮಿ? ಶೀರ್ಷಿಕೆಯ ಕಿರು ಚಿತ್ರವನ್ನು



ತಾವು ಯೂಟ್ಯೂಬ್‌ನಲ್ಲಿ ಬಿಡುಗಡೆಗೊಳಿಸಿದ್ದು, ಆಸಕ್ತರು ವೀಕ್ಷಿಸಬೇಕೆಂದು ನಿರ್ದೇಶಕ ಪ್ರಕಾಶ್ ಮೈಸೂರು ಮನವಿ ಮಾಡಿದರು. ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಅನೇಕರು ಲೈಂಗಿಕ ಶೋಷಣೆಗೆ ಒಳಗಾಗುತ್ತಿದ್ದಾರೆ. ಇದಕ್ಕೆ ಅರಿವಿನ ಕೊರತೆ ಅಥವಾ ಕಿರುಕುಳ ಕಾರಣವಾಗಿರಬಹುದಾಗಿದೆ. ಇಂತಹವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಇದು ಅನೇಕ ಆರೋಗ್ಯ ಹಾಗೂ ಇನ್ನಿತರ ಸಮಸ್ಯೆಗಳಿಗೂ ಕಾರಣವಾಗುತ್ತಿದೆ. ಹೀಗಾಗಿ ಅರಿವು ಮೂಡಿಸಿ, ಈ ಸಮಸ್ಯೆಯಿಂದ ಹೊರ ಬರುವ ಮಾರ್ಗೋಪಾಯ ತಿಳಿಸುವ ನಿಟ್ಟಿನಲ್ಲಿ ಈ ಕಿರುಚಿತ್ರ ನಿರ್ಮಿಸಲಾಗಿದೆ. ಹೊಸ ಬೆಳಕು ಯೂಟ್ಯೂಬ್ ಚಾನಲ್‌ನಲ್ಲಿ ಚಿತ್ರ ಲಭ್ಯವಿದೆ ಎಂದರು.



ವಿಜಯಪುರ ಪಟ್ಟಣದ ಸಂತೆ ಮೈದಾನದಲ್ಲಿನ ಶ್ರೀ ವೇಣುಗೋಪಾಲಸ್ವಾಮಿ ದೇವಾಲಯದಲ್ಲಿ ಅಯೋಧ್ಯೆಯಲ್ಲಿನ ಬಾಲರಾಮನ ಬಾಲ ಪ್ರತಿಷ್ಠಾಪನಾ ಕಾರ್ಯಕ್ರಮದ ಅಂಗವಾಗಿ ಪಟ್ಟಣದ ಮುಖ್ಯಬೀದಿಗಳಲ್ಲಿ ಶ್ರೀ ವೇಣುಗೋಪಾಲಸ್ವಾಮಿರವರ ಅಲಂಕೃತ ಉತ್ಸವ ಮೂರ್ತಿಯ ಮೆರವಣಿಗೆ.

## ರ್‍ಯಾಲಿಯ ವಿಶೇಷ ಕೇಂದ್ರ, ತರಬೇತಿ

**ತಿಪಟೂರು:** ನವದೆಹಲಿಯಲ್ಲಿ ಆಯೋಜಿತವಾಗಿರುವ ಅಖಿಲ ಭಾರತ ಗಣರಾಜ್ಯೋತ್ಸವ ಶಿಬಿರ ಮತ್ತು ಪ್ರಧಾನ ಮಂತ್ರಿಗಳವರ ರ್‍ಯಾಲಿಯ ವಿಶೇಷ ಕೇಂದ್ರ, ತರಬೇತಿ ಅಧಿಕಾರಿಯನ್ನಾಗಿ ತಿಪಟೂರು ಶ್ರೀ ಗುರುಕುಲಾನಂದಾಶ್ರಮದ 6/4ನೇ ಕರ್ನಾಟಕ ಬೆಟಾಲಿಯನ್ ಎನ್.ಸಿ.ಸಿ ಅಧಿಕಾರಿ ಕ್ಯಾಪ್ಟನ್ ಬಿ.ಎಂ. ಹರಿಪ್ರಸಾದ್‌ರವರನ್ನು ಕರ್ನಾಟಕ ಮತ್ತು ಗೋವಾ ನಿರ್ದೇಶನಾಲಯದ ಡೆಪ್ಯೂಟಿ ಡೈರೆಕ್ಟರ್ ಜನರಲ್ ಏರ್ ಕಮೋಡರ್ ಭೂಪೇಂದ್ರ ಸಿಂಗ್ ಕನ್ವರ್ ರವರು ನಿಯುಕ್ತಿಗೊಳಿಸಿದ್ದಾರೆ. ಗ್ರೂಪ್ ಕಮಾಂಡರ್ ಕರ್ನಲ್ ಬಸಂತ್ ಸಿಂಗ್ ಚಿತ್ರದಲ್ಲಿದ್ದಾರೆ.



# ಜಿಲ್ಲಾ ಕಾಂಗ್ರೆಸ್ ಪ್ರತಿಭಟನೆ

**ಚಾಮರಾಜನಗರ:** ಅಸ್ಸಾಂ ಮೂಲಕ ಸಾಗುತ್ತಿದ್ದ ಭಾರತ್ ಜೋಡೋ ನ್ಯಾಯ್ ಯಾತ್ರೆಯಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಯುವ ನಾಯಕರಾದ ರಾಹುಲ್‌ಗಾಂಧಿ ಅವರ ಮೇಲೆ ಹಲ್ಲೆಗೆ ಯತ್ನಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ದ ಕಾನೂನು ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀಚಾಮರಾಜೇಶ್ವರ ದೇವಾಲಯದ ಮುಂಭಾಗದಲ್ಲಿ ಮಾಜಿ ಸಚಿವ ಹಾಗೂ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಮಾನವ ಸರಪಳಿ ರಚಿಸಿ, ರಾಹುಲ್‌ಗಾಂಧಿ ಅವರ ಮೇಲೆ ಹಲ್ಲೆಗೆ ಯತ್ನಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ದ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಮಾಜಿ ಸಚಿವ ಹಾಗೂ ಹಾಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಅಸ್ಸಾಂ ಮೂಲಕ ಸಾಗುತ್ತಿದ್ದ ಭಾರತ್ ಜೋಡೋ ನ್ಯಾಯ್ ಯಾತ್ರೆಯಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಯುವ ನಾಯಕರಾದ ರಾಹುಲ್ ಗಾಂಧಿ ಅವರ ಮೇಲೆ ಹಲ್ಲೆಗೆ ಬಿಜೆಪಿ ಕಾರ್ಯಕರ್ತರ ಯತ್ನಿಸಿರುವುದು ಖಂಡನೀಯವಾಗಿಗೆ . ಹಲ್ಲಗೆ ಯತ್ನಿಸಿದ ಬಿಜೆಪಿ ಕಾರ್ಯಕರ್ತರನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಅವರ ಆದೇಶದ ಮೇರೆಗೆ ರಾಜ್ಯಾದ್ಯಂತ ಪ್ರತಿಭಟನೆ ನಡೆಯುತ್ತಿದ್ದು ಅದರಂತಯೇ ಜಿಲ್ಲೆಯಲ್ಲಿ ಪಕ್ಷದ ವತಿಯಿಂದ ಪ್ರತಿಭಟನೆ ನಡೆಸಲಾಗುತ್ತಿದೆ. ನಮ್ಮ ಪಕ್ಷದ ರಾಷ್ಟ್ರದ ಯುವ ನಾಯಕರಾದ ರಾಹುಲ್ ಗಾಂಧಿ ಅವರು ಭಾರತ್ ಜೋಡೋ ನ್ಯಾಯ್ ಯಾತ್ರೆಯನ್ನು ಯಶ್ವಸಿಯಾಗಿ ನಡೆಸುತ್ತಿರುವುದನ್ನು ಸಹಿಸದೇ ಬಿಜೆಪಿಯವರು ಗೂಂಡಾಗಳನ್ನು ಬಿಟ್ಟು ಹಲ್ಲೆ ಮಾಡುವ ಪ್ರಯತ್ನ ಮಾಡಿದ್ದಾರೆ. ಇದು ನಿಜಕ್ಕೂ ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ ಎಂದರು.

ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಮಹಮ್ಮದ್ ಅಸ್ಗರ್ ಮುನ್ನ, ಅರಕಲವಾಡಿ ಗುರುಸ್ವಾಮಿ, ಹೆಚ್ ವಿ. ಚಂದ್ರು, ತೋಟೋಶ್, ಜಿಲ್ಲಾ ಉಪಾಧ್ಯಕ್ಷರಾದ ಬಿ.ಕೆ. ರವಿಕುಮಾರ್, ಜಿಲ್ಲಾ ಮಹಿಳಾ ಅಧ್ಯಕ್ಷೆ ಲತಾರಾಜಶೇಖರಜತ್ತಿ, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್. ಮಹದೇವ್, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರಾದ ಸದಾಶಿವಮರ?ತಿ, ರಮೇಶ್, ಕೊಪ್ಪಾಳಿ ಮಹದೇವನಾಯಕ, ಮುಖಂಡರಾದ ಡಿ.ಎನ್. ನಟರಾಜ್, ಸೋಮಣ್ಣ, ನಗರಸಭಾ ಸದಸ್ಯರಾದ ಚಿನ್ನಮ್ಮ, ಆರ್.ಪಿ.ನಂಜುಂಡಸ್ವಾಮಿ, ಸೈಯದ್ ರಫೀ ಇತರರು ಇದ್ದರು.



# ಅರ್ಜಿಗಳ ವಿಲೇವಾರಿ ಮಾಡಿ

## ಜನತಾ ದರ್ಶನದಲ್ಲಿ ಸಲ್ಲಿಕೆ | ಜಿಲ್ಲಾಧಿಕಾರಿ ಶಿಲ್ಪಾನಾಗ್ ಸೂಚನೆ

**ಚಾಮರಾಜನಗರ:** ಜನತಾ ದರ್ಶನದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಲಾಗುವ ದೂರು ಅರ್ಜಿಗಳ ತ್ವರಿತ ವಿಲೇವಾರಿಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿನ್ನೆ (ಜ.22) ನಡೆದ ಏಕೀಕೃತ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶ (ಐಪಿಜಿಆರ್‌ಎಸ್) ವ್ಯವಸ್ಥೆಯ ಸಾರ್ವಜನಿಕ ದೂರುಗಳ ಪರಿಹಾರ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜನತಾ ದರ್ಶನ ಪೋರ್ಟಲ್, ಜಿಲ್ಲಾಮಟ್ಟದ ಜನತಾ ದರ್ಶನ ಹಾಗೂ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶ (ಐಪಿಜಿಆರ್‌ಎಸ್) ವ್ಯವಸ್ಥೆಯಡಿ ಆನ್‌ಲೈನ್‌ನಲ್ಲಿ ಮೊಬೈಲ್ ಆಪ್ ಹಾಗೂ ಪೋರ್ಟಲ್ ಮೂಲಕ ಸ್ವೀಕೃತಗೊಳ್ಳುವ ಅರ್ಜಿಗಳನ್ನು ಕಾಲಮಿತಿಯಲ್ಲಿ ಪರಿಹರಿಸಲು ಮುಂದಾಗಬೇಕು. ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಸಾರ್ವಜನಿಕರಿಗೆ ಆಗಬೇಕಾಗಿರುವ ಕೆಲಸ ಕಾರ್ಯಗಳಲ್ಲಿ ವಿಳಂಬಕ್ಕೆ ಅಸ್ಪದವಾಗದಂತೆ ಅಧಿಕಾರಿಗಳು ಗಮನ ಹರಿಸಬೇಕು ಎಂದರು.

ಸಾರ್ವಜನಿಕರ ಕುಂದುಕೊರತೆಗಳನ್ನು ಪರಿಹರಿಸಲು ಜಿಲ್ಲಾ ಹಾಗೂ ತಾಲೂಕುಮಟ್ಟದಲ್ಲಿ ಜನತಾ ದರ್ಶನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ನಾಗರಿಕರಿಂದ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. ಜಿಲ್ಲಾಮಟ್ಟದ ಜನತಾ ದರ್ಶನದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿದ ಮನವಿಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಜಿಲ್ಲಾ ಉಸ್ತುವಾರಿ ಸಚಿವರು ನಿರ್ದೇಶನ ನೀಡಿದ್ದಾರೆ. ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಜನರ ಸಮಸ್ಯೆಗಳ ಪರಿಹಾರಕ್ಕೆ ನಿಗದಿತ ಕಾಲಮಿತಿಯಲ್ಲಿ ಸೂಕ್ತ ಕ್ರಮವಹಿಸಬೇಕು. ಮುಂದಿನ ಒಂದು ವಾರದೊಳಗೆ ದಾಖಲಾಗಿರುವ ಎಲ್ಲಾ ದೂರುಗಳ ಶೀಘ್ರ ಪರಿಹಾರಕ್ಕೆ ಕಾರ್ಯಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿಯವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಮನೆ, ನಿವೇಶನ, ಇತರೆ ಸೌಲಭ್ಯಗಳಿಗೆ ಸಾರ್ವಜನಿಕರು ಸಲ್ಲಿಸುವ ಅರ್ಜಿಗಳನ್ನು ನೇರವಾಗಿ ಸಂಬಂಧಪಟ್ಟ ಗ್ರಾಮ ಪಂಚಾಯತ್‌ಗೆ ವರ್ಗಾಯಿಸುವುದು ಸೂಕ್ತ ಪರಿಹಾರವಲ್ಲ. ಪತ್ರ ವ್ಯವಹಾರದ ಮೂಲಕ ಗ್ರಾಮ ಪಂಚಾಯತ್‌ಗೆ ವಿವರಣೆ ನೀಡಿ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಗೃಹಲಕ್ಷ್ಮೀ ಯೋಜನೆ ನೊಂದಣಿಗೆ ಸಂಬಂಧಿಸಿದಂತೆ ಸಾರ್ವಜನಿಕರ ಆಧಾರ್ ಸೀಡಿಂಗ್ ಹಾಗೂ ಬ್ಯಾಂಕ್ ಖಾತೆಗಳಿಗೆ ಲಿಂಕ್ ಮಾಡುವ ಕಾರ್ಯವನ್ನು ಅದಷ್ಟು ಬೇಗನೇ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ವಾಣಿಜ್ಯ ತೆರಿಗೆ, ಕೈಗಾರಿಕೆ, ಪಶುಸಂಗೋಪನೆ, ಆಹಾರ ಮತ್ತು ನಾಗರಿಕ ಸರಬರಾಜು, ಸಾರಿಗೆ, ನಗರಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಮಾಜ ಕಲ್ಯಾಣ, ಕಾರ್ಮಿಕ ಇಲಾಖೆ ಸೇರಿದಂತೆ ಇನ್ನಿತರ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ದಾಖಲಾಗಿರುವ ದೂರುಗಳನ್ನು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸಭೆಯಲ್ಲಿ ಸಮಗ್ರವಾಗಿ ಪರಿಶೀಲಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶ ವ್ಯವಸ್ಥೆಯ ಸಮಾಲೋಚಕರಾದ ಮಧುಕೇಶ್, ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಿ.ಪುಟ್ಟಸ್ವಾಮಯ್ಯರವರ ಕುರುಕ್ಷೇತ್ರ-ಒಂದು ಅವಲೋಕನ ಉಪನ್ಯಾಸ ಕಾರ್ಯಕ್ರಮ



**ಹಾಸನ:** ಮನೆ ಮನೆ ಕವಿಗೋಷ್ಠಿ ಸಾಹಿತ್ಯ ಸಂಘಟನೆಯ 314ನೇ ತಿಂಗಳ ಸಾಹಿತ್ಯಕಾರ್ಯಕ್ರಮವು ಶ್ರೀ ಹೆಚ್.ಜಿ.ಗಂಗಾಧರ್, ನಟ. ಗಾಯಕರು, ಸಂಸ್ಥಾಪಕ ಅಧ್ಯಕ್ಷರುಶ್ರೀ ಶಾರದ ಕಲಾಸಂಘ, ಹಾಸನ ಇವರ ಪ್ರಾಯೋಜಕತ್ವದಲ್ಲಿ ಹಾಸನಾಂಬ ಥಿಯಾಸಾಫಿಕಲ್ ಸೊಸೈಟಿ, ವಾಣಿವಿಲಾಸ ರಸ್ತೆ, ಪ್ರಾಚ್ಯವಸ್ತು ಸಂಗ್ರಹಾಲಯಕಟ್ಟಡ ಪಕ್ಕ ಇಲ್ಲಿ ದಿನಾಂಕ 4-2-2024ರಂದು ಭಾನುವಾರ ಸಂಜೆ 3.00 ಗಂಟೆಗೆ ಸಾಹಿತ್ಯಉಪನ್ಯಾಸ, ಕವಿಗೋಷ್ಠಿ, ರಂಗಗೀತೆಗಾಯನಏರ್ಪಡಿಸಲಾಗಿದೆ. ಪ್ರಸಿದ್ಧ ನಾಟಕಕಾರರರು ಬಿ.ಪುಟ್ಟಸ್ವಾಮಯ್ಯ ವಿರಚಿತಕುರುಕ್ಷೇತ್ರ ನಾಟಕಒಂದು ಅವಲೋಕನ ವಿಷಯವಾಗಿ ನಿವೃತ್ತ ಲೆಕ್ಕಪರಿಶೋಧನಾಧಿಕಾರಿಗಳು, ನಟರು ನಾಟಕಕಾರರು, ಡಾ. ಎಸ್.ಎಸ್. ಪುಟ್ಟೇಗೌಡರು. ಎಂ.ಎ., ಶಂಭುನಾಥಪುರ, ಮೈಸೂರುಇವರಿಂದಉಪನ್ಯಾಸ, ಆಗಮಿತ ಕವಿಗಳಿಂದ ಕವಿಗೋಷ್ಠಿ, ರಂಗಕಲಾವಿದರಿಂದರಂಗಗೀತೆಗಾಯಕಗಾಯಕಿಯರಿಂದ ಬಾವಗೀತೆಜನಪದ ಗೀತೆಗಳ ಗಾಯನಸಮ್ಮಿಳಿತ ಕಾರ್ಯಕ್ರಮಕ್ಕೆ ಕವಿಗಳು, ಗಾಯಕರು, ಪೌರಾಣಿಕರಂಗನಟರು ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಲು ಮನೆ ಮನೆ ಕವಿಗೋಷ್ಠಿ ಸಂಚಾಲಕರಾದ ಸಾಹಿತಿಗೊರೂರು ಅನಂತರಾಜು ಕೋರಿದ್ದಾರೆ.

# ರಾಮನ ಗುಣ ಅಳವಡಿಸಿಕೊಳ್ಳಬೇಕು

**ಹುಳಿಯಾರು:** ರಾಮನ ಆದರ್ಶ, ಸೀತೆಯ ತಾಳ್ಮೆ, ಭರತನ ನಂಬಿಕೆ, ಹನುಮಂತನ ಭಕ್ತಿ ಹೀಗೆ ಉತ್ತಮ ಅಂಶಗಳನ್ನು ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮಾಜಿ ಶಾಸಕ ಕೆ.ಎಸ್.ಕಿರಣ್‌ಕುಮಾರ್ ಹೇಳಿದರು.

ಅಯೋಧ್ಯೆಯಲ್ಲಿ ಶ್ರೀರಾಮ ಮೂರ್ತಿ ಪ್ರತಿಷ್ಠಾಪನೆ ನಡೆಯುವ ಹಿನ್ನೆಲೆಯಲ್ಲಿ ಹುಳಿಯಾರಿನ ವಿದ್ಯಾವಾರಿಧಿ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಆಯೋಜಿಸಿದ್ದ ಸಂಭ್ರಮಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಮನನ್ನು ಪೂಜಿಸುವ ಜೊತೆಗೆ ರಾಮನ ಗುಣಗಳಾದ ಧೈರ್ಯ, ತಾಳ್ಮೆ, ಸದ್ಗುಣ, ತ್ಯಾಗ, ಮತ್ತು ನಿಸ್ವಾರ್ಥತೆ ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು. ಅನೇಕ ತೊಂದರೆಗಳು ಮತ್ತು ಕಷ್ಟಗಳು ಬಂದರೂ ಸಹ ಒಗ್ಗಟ್ಟಿನಿಂದ ಎದುರಿಸಿ ರಾಮಲಕ್ಷ್ಮಣರ ಆದರ್ಶ ನಮ್ಮದಾಗಬೇಕು ಎಂದರು. ಶಾಲೆಯ ಕಾರ್ಯದರ್ಶಿ ಕವಿತಾಕಿರಣ್, ಆಡಳಿತಾಧಿಕಾರಿ, ಅಮಿತ್, ಪ್ರಾಚಾರ್ಯ ದಿಲೀಪ್ ಹಾಗೂ ಶಿಕ್ಷಕರು ಮತ್ತು ಮಕ್ಕಳು ಉಪಸ್ಥಿತರಿದ್ದರು.



ವಿದ್ಯಾವಾರಿಧಿ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಅಯೋಧ್ಯೆಯಲ್ಲಿ ಶ್ರೀರಾಮ ಮೂರ್ತಿ ಪ್ರತಿಷ್ಠಾಪನೆ ನಡೆಯುವ ಹಿನ್ನೆಲೆಯಲ್ಲಿ ಸಂಭ್ರಮಾಚರಣೆ ಮಾಡಲಾಯಿತು.

# ರಸ್ತೆ ಕಾಮಗಾರಿ ಪರಿಶೀಲನೆ ಮಾಡಿದ ಶಾಸಕ, ಜಿಲ್ಲಾಧಿಕಾರಿ

**ಚಾಮರಾಜನಗರ:** ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಇಂದು ನಗರದ ಬಿ. ರಾಚಯ್ಯ ಜೋಡಿರಸ್ತೆ ಅಗಲೀಕರಣ ಹಾಗೂ ನ್ಯಾಯಾಲಯ ರಸ್ತೆಯಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದರು.



ಪಟ್ಟಣದ ರಸ್ತೆಗಳ ಅಭಿವೃದ್ಧಿ ಸಂಬಂಧ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ದಾಖಲಾದ ಹಿನ್ನಲೆಯಲ್ಲಿ ಇಂದು ಬೆಳಿಗ್ಗೆಯೇ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಿಂದ ಆರಂಭವಾದ ಸ್ಥಳ ಪರಿಶೀಲನೆ ಕಾರ್ಯದಲ್ಲಿ ಶಾಸಕರು ಹಾಗೂ ಜಿಲ್ಲಾಧಿಕಾರಿಯವರು ರಸ್ತೆಯುದ್ದಕ್ಕೂ ಸಂಚರಿಸಿ ರಸ್ತೆ ಅಗಲೀಕರಣಕ್ಕೆ ಎದುರಾಗಿರುವ ಸಮಸ್ಯೆಗಳನ್ನು ಖುದ್ದು ವೀಕ್ಷಿಸಿದರು.

ನಗರದ ಕರಿನಂಜನಪುರ ರಸ್ತೆಯ ಎರಡು ಬದಿಗಳಲ್ಲಿ ಒತ್ತುವರಿಯಾಗಿರುವ ಭಾಗಗಳ ಬಗ್ಗೆ ಸ್ಥಳದಲ್ಲಿದ್ದ ನಗರಸಭೆ ಅಧಿಕಾರಿಗಳಿಂದ ಮಾಹಿತಿ ಪಡೆದು ಒತ್ತುವರಿಯಾಗಿರುವ ರಸ್ತೆಯ ವಿಸ್ತೀರ್ಣದ ಅಳತೆಯನ್ನು ಪರಿಶೀಲಿಸಿದರು.

ಕರಿನಂಜನಪುರ ರಸ್ತೆಯಲ್ಲಿ ನಡೆಯುತ್ತಿರುವ ಕಾಂಕ್ರೀಟ್ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಜನರ ಸಂಚಾರಕ್ಕೆ ಮುಕ್ತ ಅವಕಾಶ ಮಾಡಿಕೊಡಬೇಕು. ಗುಣಮಟ್ಟದ ಕಾಮಗಾರಿ ಆಗಬೇಕು. ಮನೆ ಕಟ್ಟಲು ಲೈಸೆನ್ಸ್ ನೀಡುವ ಸಂದರ್ಭದಲ್ಲಿ ಯಾವುದೇ ಸರ್ಕಾರಿ ಜಾಗ ಒತ್ತುವರಿಯಾಗದಂತೆ ಜವಾಬ್ದಾರಿ ವಹಿಸುವಂತೆ ಶಾಸಕರು ನಗರಸಭೆ ಅಧಿಕಾರಿಗಳಿಗೆ ಸೂಚಿಸಿದರು.

ಬಳಿಕ ನಗರದ ಬಿ. ರಾಚಯ್ಯ ಜೋಡಿರಸ್ತೆಯಲ್ಲಿ ಕಟ್ಟಿಕೊಂಡಿರುವ ಚರಂಡಿಗಳಿಂದ ಆಗುತ್ತಿರುವ ಸಮಸ್ಯೆಗಳನ್ನು ಪರಿಶೀಲಿಸಿದರು. ಜೋಡಿರಸ್ತೆಯ ಕಾಮಗಾರಿ ಕುರಿತು ನಗರಸಭೆ ಅಧಿಕಾರಿಗಳಿಂದ ಮಾಹಿತಿ ಪಡೆದ ಶಾಸಕರು ಪರಿಹಾರ ಸಂಬಂಧ ಅಗತ್ಯ ಪ್ರಸ್ತಾವನೆ ತಯಾರಿಸಿ ಸಲ್ಲಿಸುವಂತೆ ಶಾಸಕರಾದ ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ರಸ್ತೆ ಒತ್ತುವರಿ ತೆರವುಗೊಳಿಸಲು ಅಧಿಕಾರಿಗಳು ಯಾವುದೇ ಒತ್ತಡಕ್ಕೂ ಒಳಗಾಗಬಾರದು. ರಸ್ತೆ ಅಗಲೀಕರಣದಿಂದ ಆಸ್ತಿ ಕಳೆದುಕೊಂಡಿರುವವರ ಪಟ್ಟಿ ಮಾಡಿ ಪರಿಹಾರ ವಿತರಣೆ ಕಾರ್ಯವನ್ನು ಆದ್ಯತೆ ಮೇರೆಗೆ ಮಾಡಿಕೊಡಲಾಗುವುದು ಎಂದರು.

ನಗರಸಭಾ ಸದಸ್ಯರಾದ ಆರ್.ಪಿ. ನಂಜುಂಡಸ್ವಾಮಿ, ಎಂ.ಆರ್. ರಾಜಪ್ಪ, ಮಹೇಶ್, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ನಟರಾಜು, ಪರಿಸರ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಗಿರಿಜಮ್ಮ, ಕಂದಾಯ ನಿರೀಕ್ಷಕರಾದ ಶರವಣ, ಹಿರಿಯ ಆರೋಗ್ಯ ನಿರೀಕ್ಷರಾದ ಮಂಜುನಾಥ್, ನಾರಾಯಣ್, ನಗರಾಭಿವೃದ್ಧಿ ಕೋಶದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಮಚಂದ್ರ, ಸಮುದಾಯ ಸಂಘಟನಾಧಿಕಾರಿ ವೆಂಕಟನಾಯಕ್, ಇತರರು ಇದ್ದರು.

# ಶ್ರೀರಾಮನ ಮೂರ್ತಿಗಳ ಉತ್ಸವ



**ವಿಜಯಪುರ:** ಪಟ್ಟಣದ ಶ್ರೀ ಅಭಯ ಆಂಜನೇಯ ದೇವಾಲಯದ ಬಳಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆ ಹಿನ್ನಲೇ ಮಂಗಳವಾರದಂದು ಶ್ರೀರಾಮನ ಭಾವಚಿತ್ರಕ್ಕೆ ವಿಶೇಷ ಪೂಜೆಗಳೊಂದಿಗೆ ಉತ್ಸವ ಕಾರ್ಯಗಳು ನಡೆದವು. ಈ ವೇಳೆ ಮಾತನಾಡಿದ ಭಕ್ತ ಗಿರೀಶ್ ಅವರು ವಿಶ್ವದ ಕೋಟ್ಯಂತರ ಭಾರತೀಯರ ಐದುನೂರು ವರ್ಷಗಳ ಕನಸು ನನಸಾಗಿದೆ. ಇಡೀ ವಿಶ್ವವೇ ಎಲ್ಲಾ ಕಡೆಯು ಶ್ರೀರಾಮನ ಜಪದಲ್ಲಿ ಮುಳುಗಿರುವುದು ಸಂತಸವಾಗಿದೆ. ಅನೇಕ ಜನರ ತ್ಯಾಗ, ಬಲಿದಾನ, ಶ್ರಮದ ಫಲವಾಗಿ ಪ್ರಭು ಶ್ರೀರಾಮ ಚಂದ್ರ ಮತ್ತೆ ಬಂದಿದ್ದಾನೆ. ದೇಶದಲ್ಲಿ ಸಮಯಕ್ಕೆ ಸರಿಯಾಗಿ ಮಳೆ, ಬೆಳೆಯಾಗುವಂತೆ ಭಂಗವಂತನು ಕರುಣಿಸಲಿ ಎಂದರು.

ಮುಖಂಡ ಮುನೀಂದ್ರ, ಮಾತನಾಡಿ, ಶ್ರೀ ರಾಮನ ಪೂಜೆ ಮಾಡುವ ಮೂಲಕ ಆತನ ಗುಣಗಳನ್ನು ನಾವೆಲ್ಲರೂ ಅನುಕರಣೆ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ಪುರಸಭಾ ಮಾಜಿ ನಾಮಿನಿ ಸದಸ್ಯ ಕನಕರಾಜ್, ನಾರಾಯಣಸ್ವಾಮಿ, ದಿನೇಶ್, ಶೇಖರ್ , ನಟರಾಜ್, ಮಂಜುನಾಥ್, ನಾಗರಾಜ, ಮುನಿಕೃಷಪ್ಪ, ರಾಜು, ಮಂಜುನಾಥ, ಪ್ರಶಾಂತ್ ಹಾಗೂ ಭಕ್ತವೃಂದ ಹಾಜರಿದ್ದರು.

# ರಾಷ್ಟ್ರ ಮಟ್ಟಕ್ಕೇರಿದ ಜಿಲ್ಲಾ ಬಾಲ ವಿಜ್ಞಾನಿ ಪ್ರಕೃತಿ ಪ್ರಿಯ ಸೃಜನ

**ಹುಳಿಯಾರು:** ಜಿಲ್ಲಾ ಬಾಲ ವಿಜ್ಞಾನಿ ಪ್ರಶಸ್ತಿಗೆ ಆಯ್ಕೆಯಾಗಿದ್ದ ಹುಳಿಯಾರು ಹೋಬಳಿಯ ಬೋರನಕಣಿವೆ ಸರ್ಕಾರಿ ಪ್ರೌಢಶಾಲೆಯ ಪ್ರಕೃತಿ ಪ್ರಿಯ ಸೃಜನ ಗುಲ್ಬರ್ಗ ಜಿಲ್ಲೆಯ ಸೇಡಂನಲ್ಲಿ ಸೋಮವಾರ ನಡೆದ ರಾಜ್ಯ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಭಾಗವಹಿಸಿ, ಅಲ್ಲಿ ಸಂಶೋಧನಾ ಪ್ರಬಂಧ ಮಂಡನೆ ಮಾಡಿ, ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜನ ಸಾಮಾನ್ಯರ ಆರೋಗ್ಯವನ್ನು ಸುಧಾರಿಸಲು ವಿಶ್ವ ಸಂಸ್ಥೆ 2023 ನೇ ವರ್ಷವನ್ನು ಅಂತಾರಾಷ್ಟ್ರೀಯ ಸಿರಿಧಾನ್ಯ ವರ್ಷ ಎಂದು ಘೋಷಿಸಿದೆ. ಸಿರಿಧಾನ್ಯಗಳಿಂದ ಅನೇಕ ಕಾಯಿಲೆಗಳನ್ನು



ನಿಯಂತ್ರಿಸಬಹುದು ಎಂದು ಆಹಾರ ತಜ್ಞರು ಹೇಳುತ್ತಾರೆ. ಈ ಹಿನ್ನಲೆಯಲ್ಲಿ 31 ನೇ ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶಕ್ಕೆ ಪ್ರಕೃತಿ ಪ್ರಿಯ ಸೃಜನ ತಮ್ಮ ತಂಡದೊಂದಿಗೆ ಅಧ್ಯಯನ ಕೈಗೊಂಡರು. ಬೋರವಕಣಿವೆ ಸರ್ಕಾರಿ ಪ್ರೌಢಶಾಲಾ ವ್ಯಾಪ್ತಿಯ ಪ್ರತಿ ಹಳ್ಳಿಯಲ್ಲೂ ಬಿ.ಪಿ, ಶುಗರ್, ಮಂಡಿ ನೋವು ಮುಂತಾದ ಕಾಯಿಲೆಗಳಿಂದ ಬಳಲುತ್ತಿದ್ದಾರೆ. ಹಳ್ಳಿ ಜನರ ಆರೋಗ್ಯ ಸಮಸ್ಯೆಯನ್ನು ಬಗೆಹರಿಸಲು ಯೋಜನೆಯನ್ನು ಕೈಗೆತ್ತಿಕೊಂಡು ಮುಖ್ಯಶಿಕ್ಷಕರಾದ ಟಿ.ಎನ್.ರಮೇಶ್ ಮಾರ್ಗದರ್ಶನದಲ್ಲಿ ಅಧ್ಯಯನ ಮಾಡಿದರು. ಸಿರಿಧಾನ್ಯ ಸಂಸ್ಕರಣಾ ವಿಧಾನವನ್ನು ಮನೆಯಲ್ಲಿ ಮಿಕ್ಸಿ ಸಹಾಯದಿಂದ ಮಾಡಿಕೊಳ್ಳುವುದನ್ನು ಕಂಡು ಹಿಡಿದು ಮಹಿಳೆಯರಿಗೆ ತೋರಿಸಿದ್ದಾರೆ. ಅಲ್ಲದೆ ರೈತರಿಗೆ ಸಿರಿಧಾನ್ಯ ಕೃಷಿ ಬಗ್ಗೆ ಮಾಹಿತಿ ನೀಡಿದ್ದಾರೆ. ತುಮಕೂರಿನಲ್ಲಿ ರಾಜ್ಯ ವಿಜ್ಞಾನ ಪರಿಷತ್ತಿನ ತುಮಕೂರು ಜಿಲ್ಲಾ ಸಮಿತಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಸಂಶೋಧನಾ ಪ್ರಬಂಧವನ್ನು ಯಶಸ್ವಿಯಾಗಿ ಮಂಡಿಸಿ ಜಿಲ್ಲಾ ಬಾಲವಿಜ್ಞಾನಿಯಾಗಿ ಆಯ್ಕೆಯಾಗಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದರು. ಈಗ ಗುಲ್ಬರ್ಗ ಜಿಲ್ಲೆಯ ಸೇಡಂ ನಲ್ಲಿ ನಡೆದ ರಾಜ್ಯ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಭಾಗವಹಿಸಿ ಇದೇ ಪ್ರಬಂಧ ಮಂಡಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಬಿಇಓ ಕಾಂತರಾಜು, ತಾಲ್ಲೂಕು ವಿಜ್ಞಾನ ಕೇಂದ್ರದ ಅಧ್ಯಕ್ಷೆ ಎನ್ ಇಂದಿರಮ್ಮ, ಸುವರ್ಣ ವಿದ್ಯಾ ಚೇತನದ ಅಧ್ಯಕ್ಷ ರಾಮಕೃಷ್ಣಪ್ಪ, ಶಿಕ್ಷಕರು ವಿದ್ಯಾರ್ಥಿಯನ್ನು ಅಭಿನಂದಿಸಿದ್ದಾರೆ.

# ಡೇರಿ ನಿರ್ದೇಶಕರ ಚುನಾವಣೆ



**ವಿಜಯಪುರ:** ಹೋಬಳಿಯ ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎ.ರಂಗನಾಥಪುರ ಗ್ರಾಮದ ಡೇರಿ ಅಧ್ಯಕ್ಷ, ಉಪಾಧ್ಯಕ್ಷರ ಸ್ಥಾನಗಳಿಗೆ ಮುಂದಿನ 5 ವರ್ಷಗಳ ಅವಧಿಗೆ ಚುನಾವಣೆ ನಡೆಯಿತು. 12 ಮಂದಿ ನಿರ್ದೇಶಕರು ಚುನಾವಣೆಯಲ್ಲಿ ಮತ ಚಲಾಯಿಸಿದರು.

ನರಸಿಂಹಮೂರ್ತಿ.ಕೆ. 08 ಮತಗಳು ಪಡೆದು ಅಧ್ಯಕ್ಷರಾಗಿ ಚುನಾಯಿತರಾಗಿದ್ದಾರೆ.ಪ್ರತಿಸ್ಪರ್ಧಿ ವೆಂಕಟೇಶ್.ಎಂ.04 ಮತಗಳು ಪಡೆದುಕೊಂಡಿದ್ದಾರೆ. ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಮರಿಯಮ್ಮ 08 ಮತಗಳು ಪಡೆದು ಚುನಾಯಿತರಾಗಿದ್ದಾರೆ. ಪ್ರತಿಸ್ಪರ್ಧಿ ಮುನಿರಾಜು ಅವರು 04 ಮತಗಳು ಪಡೆದುಕೊಂಡಿದ್ದಾರೆ ಎಂದು ಚುನಾವಣಾಧಿಕಾರಿ ಚೇತನಾ ಘೋಷಣೆ ಮಾಡಿದರು. ನೂತನ ಅಧ್ಯಕ್ಷ ನರಸಿಂಹಮೂರ್ತಿ. ಕೆ. ಮಾತನಾಡಿ, ಹಾಲು ಉತ್ಪಾದಕರು ಗುಣಮಟ್ಟದ ಹಾಲು ಉತ್ಪಾದನೆ ಮಾಡುವ ಮೂಲಕ ಡೇರಿ ಅಭಿವೃದ್ಧಿಗೆ ಸಹಕರಿಸಬೇಕು. ಒಕ್ಕೂಟದಿಂದ ಸಿಗುವಂತಹ ಎಲ್ಲಾ ಸೌಲತ್ತುಗಳನ್ನು ಪಕ್ಷಾತೀತವಾಗಿ ಸಹಕಾರಿ ತತ್ವದಡಿಯಲ್ಲಿ ಒದಗಿಸಿಕೊಡಲಾಗುತ್ತದೆ ಎಂದರು. ನಿರ್ದೇಶಕರಾದ ಮುರಳೀಧರ, ಲೋಕೇಶ್, ಮೂರ್ತಿ, ಲಕ್ಷ್ಮಮ್ಮ, ಗೋವಿಂದರೆಡ್ಡಿ, ನವೀನ್ ಕುಮಾರ್, ವೆಂಕಟೇಶ್.ಎನ್. ಸಂತೋಷ್. ಮುಖಂಡರಾದ ಕೆ.ರವಿಕುಮಾರ್, ಚನ್ನಪ್ಪ, ಮುನಿಶಾಮಪ್ಪ, ವಿ.ವೆಂಕಟೇಶಪ್ಪ, ಮುನಿಕೃಷ್ಣಪ್ಪ, ಕೃಷ್ಣಪ್ಪ, ಕೆ.ವಿ.ಕೃಷ್ಣಪ್ಪ, ಎಸ್.ವಿಜಯಕುಮಾರ್, ಆರ್.ಮಂಜುನಾಥ್, ಮುಖ್ಯಕಾರ್ಯನಿರ್ವಾಹಕ ವಿಜಯಕುಮಾರ್.ಎ.ಹಾಜರಿದ್ದರು.

# ಸಂಜೆ ಟಿಪ್ಸ್




## ನಮ್ಮ ಸ್ವಚ್ಛ ಕನ್ನಮಂಗಲ

ಜಾಗತಿಕ ತಂತ್ರಜ್ಞಾನ ಬ್ರಾಂಡ್ ಶಓಮಿ ಇಂಡಿಯಾ ಕನ್ನಮಂಗಲ ಗ್ರಾಮ ಪಂಚಾಯಿತಿಯಲ್ಲಿ ಸಮಗ್ರವಾದ ತ್ಯಾಜ್ಯ ನಿರ್ವಹಣಾ ಉಪಕ್ರಮಕ್ಕೆ ಸ್ಟೋನ್ ಸೂಪ್ ಟ್ರಸ್ಟ್ ಜೊತೆಯಲ್ಲಿ ಸಹಯೋಗ ಪ್ರಕಟಿಸಿದೆ. ಈ ಯೋಜನೆಯ ಉದ್ದೇಶ ಮೂಲದಲ್ಲಿಯೇ ತ್ಯಾಜ್ಯ ಕಡಿಮೆ ಮಾಡುವುದು ಮತ್ತು ಅದನ್ನು ಸ್ಥಳೀಯವಾಗಿ ಮತ್ತು ಜವಾಬ್ದಾರಿಯಿಂದ ನಿರ್ವಹಿಸುವುದು. ಇದು ಗ್ರಾಮ ಪಂಚಾಯಿತಿಯ ಒಳಗಡೆ ಸಮುದಾಯಗಳಿಂದಲೇ ತ್ಯಾಜ್ಯ ನಿರ್ವಹಣೆ ಸಮಸ್ಯೆಯನ್ನು ನಿರ್ವಹಿಸುವಂತೆ ಮಾಡುತ್ತದೆ. ಪರಿಣಾಮಕಾರಿ ಮೂಲದಲ್ಲಿ ವಿಂಗಡಣೆ ಮತ್ತು ಸುಸ್ಥಿರ ತ್ಯಾಜ್ಯ ಸಂಸ್ಕರಣೆ ರೂಢಿಗಳನ್ನು ಅಳವಡಿಸಿಕೊಳ್ಳಲು ಹೆಚ್ಚು ಒತ್ತು ನೀಡಲಾಗುತ್ತದೆ. ಕನ್ನಮಂಗಲ ಗ್ರಾಮ ಪಂಚಾಯಿತಿಯು ತಮ್ಮ ತ್ಯಾಜ್ಯದ ಬಗ್ಗೆ ಜವಾಬ್ದಾರಿ ತೆಗೆದುಕೊಳ್ಳುವ ಮೂಲಕ ಹಾಗೂ ವೃತ್ತಾಕಾರದ ಅರ್ಥವ್ಯವಸ್ಥೆಯ ತತ್ವಗಳನ್ನು ನಿರೂಪಿಸಿ ಇತರರಿಗೆ ಮಾದರಿಯಾಗುವ ಗುರಿ ಹೊಂದಿದೆ. 'ನಮ್ಮ ಸ್ವಚ್ಛ ಕನ್ನಮಂಗಲ' ಅಭಿಯಾನದ ಭಾಗವಾಗಿ ಸ್ಟೋನ್ ಸೂಪ್ ಟ್ರಸ್ಟ್ ಕನ್ನಮಂಗಲ ಗ್ರಾಮ ಪಂಚಾಯಿತಿ, ಸಿಟಿಜನ್ ಗ್ರೂಪ್ ಫೋರ್ಸ್ ಜಿ.ಡಬ್ಲ್ಯು ಮತ್ತು ಶಾಸಕರ ಮಹದೇವಪುರ ಟಾಸ್ಕ್ ಫೋರ್ಸ್ ಜೊತೆಯಲ್ಲಿ ಕೆಲಸ ಮಾಡುತ್ತದೆ. ಗ್ರಾಪಂನಲ್ಲಿ 6 ವಸತಿ ಪ್ರದೇಶಗಳು, 14 ಗೇಟೆಡ್ ಸಮುದಾಯಗಳು ಮತ್ತು 80+ ವಾಣಿಜ್ಯ ಕಟ್ಟಡಗಳಿವೆ. ಅವು ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ, ಸಂಗ್ರಹ ಮತ್ತು ಹಸಿ ತ್ಯಾಜ್ಯ ಹಾಗೂ ಒಣತ್ಯಾಜ್ಯದ ವಿಂಗಡಣೆ ಮಾಡುವ ಯೋಜನೆಯ ಅನುಷ್ಠಾನದ ಉಸ್ತುವಾರಿ ವಹಿಸುತ್ತವೆ. ಮಹಿಳಾ ಸ್ವ-ಸಹಾಯ ಗುಂಪು, ಭಾರತಾಂಬೆ ಸಂಜೀವನಿ ಗ್ರಾಮ ಪಂಚಾಯಿತಿ ಸಂಘಕ್ಕೆಅರಿವನ್ನು ಮೂಡಿಸಲು ಮತ್ತು ದೀರ್ಘಾವಧಿ ಸುಸ್ಥಿರತೆಯನ್ನು ಕಾಪಾಡುವಂತೆ ಕಾರ್ಯಾಚರಣೆ ಮಾಡಲು ತರಬೇತಿ ನೀಡಲಾಗುತ್ತದೆ.

## ಶಾವಿಗೆ ದೋಸೆ

### ಪಾಕ ಶಾಲೆ



### ಮಾಡುವ ವಿಧಾನ

ಮೊದಲು ಅರ್ಧ ಕಪ್ ಶಾವಿಗೆಯನ್ನು ಗೋಲ್ಡನ್ ಬ್ರೌನ್ ಆಗುವವರೆಗೆ ಹುರಿಯಿರಿ. ಸಂಪೂರ್ಣವಾಗಿ ತಣ್ಣಗಾದ ನಂತರ ದೊಡ್ಡ ಬಟ್ಟಲಿಗೆ ವರ್ಗಾಯಿಸಿ. ಅದಕ್ಕೆ ಒಂದು ಕಪ್ ಅಕ್ಕಿ ಹಿಟ್ಟು, ಕಾಲು ಕಪ್ ರವಾ, ಒಂದು ಟೀಸ್ಪೂನ್ ಜೀರಿಗೆ, ಒಂದು ಟೀಸ್ಪೂನ್ ಉಪ್ಪು ಸೇರಿಸಿ. ನೀರು ಸುರಿಯಿರಿ ಮತ್ತು ಚೆನ್ನಾಗಿ ಮಿಶ್ರಣ ಮಾಡಿ. ನಂತರ ಹತ್ತು ನಿಮಿಷ ಮುಚ್ಚಿ ಮತ್ತು ವಿಶ್ರಾಂತಿಗೆ ಇಡಿ. ಈಗ ಎರಡು ಚಮಚ ಸಣ್ಣದಾಗಿ ಕೊಚ್ಚಿದ ಕೊತ್ತಂಬರಿ ಸೊಪ್ಪು, ಎರಡು ಸಣ್ಣದಾಗಿ ಕೊಚ್ಚಿದ ಮೆಣಸಿನಕಾಯಿ, ಒಂದು ಇಂಚಿನ ತುರಿದ ಶುಂಠಿ ಸೇರಿಸಿ ಚೆನ್ನಾಗಿ ಬೆರೆಸಿ. ಹಿಟ್ಟು ನೀರು ಇರುವಂತೆ ನೋಡಿ. ನೀರನ್ನು ಸೇರಿಸುವ ಮೂಲಕ ನೀವು ಸ್ಥಿರತೆ ಸರಿ ಹೊಂದಿಸಿ. ಗ್ಯಾಸ್ ಒಲೆ ಮೇಲೆ ಪ್ಯಾನ್ ಇಡಿ. ತವಾ ಬಿಸಿ ಆದ್ಮೇಲೆ ದೋಸೆಗೆ ಹಿಟ್ಟನ್ನು ಸುರಿದು ದುಂಡನೆಯ ಆಕಾರಕ್ಕೆ ತನ್ನಿ. ನಂತರ ಎರಡೂ ಬದಿಯನ್ನು ಕ್ರಿಸ್ಪಿಯಾಗಿ ಬೇಯಿಸಿ. ಟೀಸ್ಪೂನ್ ಎಣ್ಣೆಯನ್ನು ಹರಡಿ ಮತ್ತು 2 ನಿಮಿಷ ದೋಸೆ ಗರಿಗರಿಯಾಗುವವರೆಗೆ ಬೇಯಿಸಿ. ನಂತರ ಗರಿಗರಿಯಾದ ಶಾವಿಗೆ ದೋಸೆಯನ್ನು ನಿಮ್ಮಿಷ್ಟದ ಚಟ್ನಿ ಜೊತೆ ಸೇವಿಸಿ.

### ಬೇಕಾಗಿರುವ ಪದಾರ್ಥ

ಒಂದು ಕಪ್ ಅಕ್ಕಿ ಹಿಟ್ಟು, ಕಾಲು ಕಪ್ ರವಾ, ಒಂದು ಟೀಸ್ಪೂನ್ ಜೀರಿಗೆ, ಒಂದು ಟೀಸ್ಪೂನ್ ಉಪ್ಪು, ಐದು ಕಪ್ ನೀರು, ಸಣ್ಣದಾಗಿ ಕೊಚ್ಚಿದ ಅರ್ಧ ಕಪ್ ಈರುಳ್ಳಿ, ಅರ್ಧ ಕಪ್ ತುರಿದ ಕ್ಯಾರೆಟ್, ಕೆಲವು ಸಣ್ಣದಾಗಿ ಕೊಚ್ಚಿದ ಕರಿಬೇವು, ಅರ್ಧ ಕಪ್ ಶಾವಿಗೆ, ಎರಡು ಚಮಚ ಸಣ್ಣದಾಗಿ ಕೊಚ್ಚಿದ ಕೊತ್ತಂಬರಿ ಸೊಪ್ಪು , ಎರಡು ಸಣ್ಣದಾಗಿ ಕೊಚ್ಚಿದ ಮೆಣಸಿನಕಾಯಿ, ಒಂದು ಇಂಚಿನ ತುರಿದ ಶುಂಠಿ, ಎಣ್ಣೆ ಹುರಿಯಲು ಬೇಕು.

## ಜೂ.14 ರಂದು ಬಿಡುಗಡೆಯಾಗಲಿದೆ ಎಮರ್ಜೆನ್ಸಿ



'ತುರ್ತುಪರಿಸ್ಥಿತಿ'ಯ ಐತಿಹಾಸಿಕ ರಾಜಕೀಯ ಕಥೆಯಾಧರಿಸಿದ ಎಮರ್ಜೆನ್ಸಿ ಸಿನಿಮಾ ಮೂಲಕ ರಾಷ್ಟ್ರಪ್ರಶಸ್ತಿ ನಟಿ ಕಂಗನಾ ರಣಾವತ್ ಮತ್ತೆ ತೆರೆ ಮೇಲೆ ಬರಲಿದ್ದಾರೆ.

ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಪಾತ್ರದಲ್ಲಿ ಕಂಗನಾ ಕಾಣಿಸಿಕೊಂಡಿದ್ದು, ಈ ಐತಿಹಾಸಿಕ ರಾಜಕೀಯ ಕಥೆ 'ತುರ್ತು ಪರಿಸ್ಥಿತಿ' ಬೆಳ್ಳಿಪರದೆ ಮೇಲೆ ಈ ವರ್ಷ ಜೂನ್ 14 ರಂದು ಬರಲಿದೆ.

ಝೀ ಸ್ಟುಡಿಯೋಸ್ ಮತ್ತು ಮಣಿಕರ್ಣಿಕಾ ಫಿಲ್ಮ್ಸ್ ನಿರ್ಮಿಸಿದ ಈ ಮೆಗಾ ಬಜೆಟ್ ಚಲನಚಿತ್ರವು ಭಾರತೀಯ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಒಂದು ಪ್ರಮುಖ ಕ್ಷಣದ ವಿವಾದಾತ್ಮಕ ನಿರೂಪಣೆಯನ್ನು ಬಿಚ್ಚಿಡಲು ಸಿದ್ಧವಾಗಿದೆ. 'ತೇಜಸ್' ಸೋಲಿನ ಬಳಿಕ 'ಎಮರ್ಜೆನ್ಸಿ' ಮೂಲಕ ತೆರೆ ಮೇಲೆ ಕಾಣಿಸಿಕೊಳ್ಳಲಿರುವ ಕಂಗನಾ ತಮ್ಮ ಇನ್ ಸ್ಟಾಗ್ರಾಂ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಭಾರತದ ಕರಾಳ ದಿನದ ಹಿಂದಿನ ಕಥೆಯನ್ನು ಅನ್ಲಾಕ್ ಮಾಡಿ. 14ನೇ ಜೂನ್ 2024 ರಂದು ತುರ್ತು ಪರಿಸ್ಥಿತಿ ಬಿಡುಗಡೆಯಾಗಲಿದೆ. ಪ್ರಧಾನಿ ಇಂದಿರಾಗಾಂಧಿ ಅವರು ಗುಡುಗಿದ ಇತಿಹಾಸವು ಚಿತ್ರಮಂದಿರಗಳಲ್ಲಿ ಜೀವಂತವಾಗಲಿದೆ. 14ನೇ ಜೂನ್ 2024 ರಂದು ಚಿತ್ರಮಂದಿರಗಳಲ್ಲಿ ತುರ್ತು ಪರಿಸ್ಥಿತಿ.'' ಎಂದು ಬರೆದಿದ್ದಾರೆ. ಚಿತ್ರಕ್ಕಾಗಿ ನಿರ್ದೇಶಕಿ ಮತ್ತು ನಿರ್ಮಾಪಕಿ ಜವಾಬ್ದಾರಿ ಹೊತ್ತಿರುವ ಕಂಗನಾ ರಣಾವತ್, ದಿವಂಗತ ಪ್ರಧಾನಮಂತ್ರಿ ಇಂದಿರಾಗಾಂಧಿಯವರ ಪಾತ್ರದಲ್ಲಿ ಕಾಣಿಸಿಕೊಂಡಿರುವ ಸಿನಿಮಾ ಪೋಸ್ಟರ್ ಹಂಚಿಕೊಂಡು ಬಿಡುಗಡೆ ದಿನಾಂಕ ಘೋಷಿಸಿದ್ದಾರೆ. ಸಿನಿಮಾ ಬಗ್ಗೆ ಮಾತನಾಡಿರುವ ಕಂಗನಾ ರಣಾವತ್ ''ತುರ್ತು ಪರಿಸ್ಥಿತಿಯು ನನ್ನ ಅತ್ಯಂತ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ ಮತ್ತು ಮಣಿಕರ್ಣಿಕಾ ನಂತರ ನನ್ನ ಎರಡನೇ ನಿರ್ದೇಶನದ ಪ್ರಯತ್ನವಾಗಿದೆ. ಈ ಚಿತ್ರಕ್ಕಾಗಿ ನಾವು ಅತ್ಯುತ್ತಮ ಭಾರತೀಯ ಮತ್ತು ಅಂತರರಾಷ್ಟ್ರೀಯ ಪ್ರತಿಭೆಗಳನ್ನು ಒಟ್ಟುಗೂಡಿಸಿದ್ದೇವೆ ಎಂದಿದ್ದಾರೆ. ಕಂಗನಾ ರಣಾವತ್ ಹೊರತಾಗಿ 'ತುರ್ತು ಪರಿಸ್ಥಿತಿ' ಚಿತ್ರದಲ್ಲಿ ಅನುಪಮ್ ಖೇರ್, ಮಹಿಮಾ ಚೌಧರಿ, ಮಿಲಿಂದ್ ಸೋಮನ್, ಶ್ರೇಯಸ್ ತಲ್ಪಾಡೆ, ವಿಶಾಕ್ ನಾಯರ್ ಮತ್ತು ದಿವಂಗತ ಸತೀಶ್ ಕೌಶಿಕ್ ಗಮನಾರ್ಹ ಪಾತ್ರಗಳಲ್ಲಿದ್ದಾರೆ। ಚಿತ್ರಕ್ಕೆ ಸಂಚಿತ್ ಬಲ್ಹಾರಾ ಸಂಗೀತ ಸಂಯೋಜಿಸಿದ್ದು, ರಿತೇಶ್ ಶಾ ಚಿತ್ರಕಥೆ ಮತ್ತು ಸಂಭಾಷಣೆ ಬರೆದಿದ್ದಾರೆ.






## ಬಿಪಿ ಸಮಸ್ಯೆಗೆ ಮನೆ ಮದ್ದು

### ಹೆಲ್ತ್ ಟಿಪ್ಸ್



ಕಡಿಮೆ ರಕ್ತದೊತ್ತಡ ಇತ್ತೀಚೆಗೆ ಹಲವರಲ್ಲಿ ಕಂಡು ಬರುತ್ತಿರುವ ಗಂಭೀರ ಸಮಸ್ಯೆಯಾಗಿದೆ. ಸಮಯಕ್ಕೆ ಸರಿಯಾಗಿ ಇದಕ್ಕೆ ಪರಿಹಾರ ದೊರೆಯದೇ ಇದ್ದಲ್ಲಿ ಇದು ಹೃದಯ, ಕಿಡ್ನಿ, ಮೆದುಳಿಗೂ ಹಾನಿಮಾಡುತ್ತದೆ.

ಉಪ್ಪಿನ ನೀರು ಕುಡಿಯುವುದರಿಂದ ಕಡಿಮೆ ರಕ್ತದೊತ್ತಡದ ಸಮಸ್ಯೆ ನಿವಾರಣೆಯಾಗುತ್ತದೆ.

ಉಪ್ಪಿನಲ್ಲಿನ ಸೋಡಿಯಂ ಅಂಶ ರಕ್ತದೊತ್ತಡವನ್ನು ಹೆಚ್ಚಿಸುತ್ತದೆ. ನೀರಿನಲ್ಲಿ ಅತಿಯಾದ ಉಪ್ಪಿನಂಶ ಇದ್ದರೆ ಅದೂ ಒಳ್ಳೆಯದಲ್ಲ. ಹಾಗಾಗಿ ಉಪ್ಪನ್ನು ಮಿತವಾಗಿ ಬಳಸುವುದು ಒಳ್ಳೆಯದು.

ಕಡಿಮೆ ರಕ್ತದೊತ್ತಡ ಇರುವವರಿಗೆ ಕಾಫಿ ಒಳ್ಳೆಯ ಪ್ರಭಾವ ಬೀರುತ್ತದೆ. ರಕ್ತದೊತ್ತಡ ಕಡಿಮೆಯಾದಾಗ ಸ್ಟ್ರಾಂಗ್ ಕಾಫಿ ಕುಡಿದಲ್ಲಿ ತಕ್ಷಣ ಪ್ರಭಾವ ಬೀರುತ್ತದೆ. ಇದರ ಹೊರತಾಗಿ ಚಾಕೋಲೇಟ್, ಕೋಲಾ ಮತ್ತು ಕೆಫೀನ್ ಯುಕ್ತ ಖಾದ್ಯ ಪದಾರ್ಥಗಳ ಸೇವನೆಯಿಂದಲೂ ರಕ್ತದೊತ್ತಡ ಸಾಮಾನ್ಯವಾಗುತ್ತದೆ.

ರಾತ್ರಿಯಿಡಿ ನೀರಿನಲ್ಲಿ ನೆನಸಿಟ್ಟ ಕಾಬೂಲ್ ದ್ರಾಕ್ಷಿಯನ್ನು ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವಿಸಬೇಕು. ಇದು ರಕ್ತದೊತ್ತಡವನ್ನು ಹೆಚ್ಚಿಸುತ್ತದೆ.

ತುಳಸಿ ರಕ್ತದೊತ್ತಡವನ್ನು ಸಾಮಾನ್ಯ ಸ್ಥಿತಿಯಲ್ಲಿಡಲು ಸಹಾಯ ಮಾಡುತ್ತದೆ. ಇದರಲ್ಲಿರುವ ವಿಟಮಿನ್ ಸಿ, ಪೊಟಾಶಿಯಮ್, ಮೆಗ್ನೀಶಿಯಮ್ ಮುಂತಾದ ಸತ್ವಗಳು ಮೆದುಳು ಮತ್ತು ದೇಹವನ್ನು ಸುಃಸ್ಥಿತಿಯಲ್ಲಿಡುತ್ತವೆ.

ನೀರಿಗೆ ನಿಂಬುರಸ ಬೆರೆಸಿ ಸೇವಿಸುವುದರಿಂದ ರಕ್ತದೊತ್ತಡ ಹೆಚ್ಚುತ್ತದೆ ಮತ್ತು ಇದನ್ನು ಕುಡಿಯುವುದರಿಂದ ಜೀರ್ಣಕ್ರಿಯೆ ಚೆನ್ನಾಗಿ ನಡೆಯುತ್ತದೆ.

## ಉಗುರಿನ ಆರೋಗ್ಯಕ್ಕೆ ಟಿಪ್ಸ್

### ಬ್ಯೂಟಿ ಟಿಪ್ಸ್



ನಾವು ಸುಂದರವಾಗಿ ಕಾಣಲು ದಿನವೂ ಹಲವು ಕಸರತ್ತುಗಳನ್ನು ಮಾಡುತ್ತೇವೆ. ಆದರೆ ಸುಂದರವಾಗಿ ಕಾಣಲು ಕೇವಲ ಮುಖ ಮಾತ್ರವಲ್ಲ, ದೇಹದ ಪ್ರತಿಯೊಂದು ಅಂಗವೂ ಆಕರ್ಷಕವಾಗಿರಬೇಕು. ಅದರಲ್ಲಿಯೂ ಉಗುರಿನ ಸ್ವಚ್ಛತೆ ಹಾಗೂ ಸುಂದರತೆ ಅತಿ ಮುಖ್ಯ. ಸುಂದರ ಉಗುರು ಆರೋಗ್ಯಕರ ಶರೀರದ ಸಂಕೇತ. ಹಾಗಾಗಿ ನಿಮ್ಮ ಉಗುರನ್ನು ಸುಂದರವಾಗಿಸಿಕೊಳ್ಳುವ ಟಿಪ್ಸ್ ಇಲ್ಲಿದೆ. ಅತಿಯಾದ ಹಾಗೂ ಉದ್ದನೆಯ ಉಗುರು ಬಿಡುವುದರಿಂದ ಸ್ವಚ್ಛಗೊಳಿಸುವುದು ಕಷ್ಟ ಹಾಗೂ ದೇಹದ ಬೆಳವಣಿಗೆಯನ್ನೂ ಕುಂಠಿತಗೊಳಿಸುತ್ತದೆ. ಹಾಗಾಗಿ ಉಗುರು ಹೆಚ್ಚು ಬೆಳೆಯದಂತೆ ನೋಡಿಕೊಳ್ಳಿ. ನೈಲ್ ಪಾಲಿಶ್ ತೆಗೆದ ಬಳಿಕ ತಪ್ಪದೆ ಕೈ ಮತ್ತು ಉಗುರಿಗೆ ಮಾಯಿಶ್ಚರೈಸರ್ ಕ್ರೀಮ್ ಲೇಪಿಸಿ ನಿಮ್ಮ ಕೈಗಳನ್ನು ಸ್ವಚ್ಛವಾಗಿ ತೊಳೆಯಿರಿ. ಉಗುರುಗಳಿಗೆ ಬಳಸುವ ಪಾಲೀಶ್ 3 ರಿಂದ 5 ಕ್ಕಿಂತ ಹೆಚ್ಚು ಬಾರಿ ಲೇಪಿಸಿದರೆ ಅಸಹ್ಯವೆನಿಸುತ್ತದೆ. ಹಾಗಾಗಿ ಆ ಬಗೆಗೆ ಹೆಚ್ಚಿನ ಲಕ್ಷ್ಯ ಇರಲಿ. ಒಂದು ಸರಳ ಪ್ಯಾಕ್ ಹಾಕುವುದರ ಮುಖೇನ ಚರ್ಮದಲ್ಲಿ ಅಡಗಿರುವ ಸತ್ತ ಕಣಗಳು ಹೊರ ಬಂದು ಚರ್ಮವು ಮೃದುವಾಗುವಂತೆ ನೋಡಿಕೊಳ್ಳಿ. ಅಲ್ಲದೇ ಪೆಡಿಕ್ಯೂರ್, ಮ್ಯಾನಿಕ್ಯೂರ್ ಸೆಟ್ ಮನೆಯಲ್ಲಿ ತಂದಿಟ್ಟುಕೊಂಡು ಅದನ್ನೇ ಸಾಧ್ಯವಾದಷ್ಟು ಬಳಸಿ. ನೀವು ಬಳಸುವ ಉಪಕರಣಗಳು ಸದಾ ಸ್ವಚ್ಛವಾಗಿರುವಂತೆ ಗಮನ ಹರಿಸಿ. ಅಲ್ಲದೆ ಕೊಳೆಯಿಂದ ದೂರವಿರಿ ಮಾತ್ರವಲ್ಲ, ಎಣ್ಣೆ, ಜಿಡ್ಡಿನ ಪದಾರ್ಥವನ್ನು ಬಳಸಿದ ಬಳಿಕ ಕೈಗಳನ್ನು ಸೋಪಿನಿಂದ ಸ್ವಚ್ಛವಾಗಿ ತೊಳೆದುಕೊಳ್ಳಿ. ಇದರಿಂದ ನಿಮ್ಮ ಕೈಗಳು ಹಾಗೂ ಉಗುರುಗಳು ಸುಂದರವಾಗಿಯೂ ಆಕರ್ಷಕವಾಗಿಯೂ ಇರುತ್ತದೆ.

## ಅಟ್ಟಕ್ಕಳರಿ ಕಲಾ ಉತ್ಸವ



11ನೇ ಆವೃತ್ತಿಯಲ್ಲಿ, ಅಟ್ಟಕ್ಕಲರಿ ಇಂಡಿಯಾ ದ್ವೈವಾರ್ಷಿಕವು (౧౫ః) ಎರಡು ದಶಕಗಳಿಂದ ದಕ್ಷಿಣ ಏಷ್ಯಾದ ಅತ್ಯಂತ ಪ್ರಮುಖ ಮತ್ತು ಅತಿದೊಡ್ಡ ಅಂತರಾಷ್ಟ್ರೀಯ ಸಮಕಾಲೀನ ನೃತ್ಯ ಮತ್ತು ಚಲನೆಯ ಕಲಾ ಉತ್ಸವವಾಗಿ ಸತತವಾಗಿ ಶ್ರಮಿಸುತ್ತಿದೆ. ಜಾಗತಿಕ ಪ್ರದರ್ಶನ ಕಲೆಗಳ ಡೊಮೇನ್ನಿಂದ ಇತ್ತೀಚಿನ ಒಳನೋಟಗಳು ಮತ್ತು ಪರಿಣತಿಯನ್ನು ಒಳಗೊಂಡಿರುವ ಕಾರ್ಯಾಗಾರಗಳು ಮತ್ತು ಮಾಸ್ಟರ್ಕ್ಲಾಸ್ಗಳ ಜೊತೆಗೆ ಬಹು ಪ್ರಕಾರಗಳು ಮತ್ತು ಥೀಮ್ಗಳನ್ನು ವ್ಯಾಪಿಸಿರುವ ಪ್ರದರ್ಶನಗಳ ಒಂದು ಶ್ರೇಣಿಯನ್ನು ನೀಡಲಾಗುವುದು. ಹೊಸ ಕಲಾತ್ಮಕ ನಿರ್ಮಾಣಗಳನ್ನು ಬೆಳೆಸಲು, ಆಲೋಚನೆಗಳ ವಿನಿಮಯವನ್ನು ಉತ್ತೇಜಿಸುವ ಉತ್ತೇಜಕ ಸಂಭಾಷಣೆಗಳು ಮತ್ತು ಹೊಸ ದೃಷ್ಟಿಕೋನಗಳನ್ನು ಪ್ರಚೋದಿಸುವ ಆಕರ್ಷಕ ಸ್ಥಾಪನೆಗಳನ್ನು ಬೆಳೆಸಲು ಈ ಹಬ್ಬವು ನಿವಾಸಗಳಿಗೆ ಅನುಕೂಲವಾಗುತ್ತದೆ. ಇದು ಜನವರಿ 21 ರಿಂದ ಮಾರ್ಚ್ 22 ವರೆಗೂ ನಡೆಯಲಿದೆ.

ಭಾರತದಲ್ಲಿ ಸಾಧಾರಣ ಚಲನ ಕಲೆಗಳ ಉಳಿವುದನ್ನು ಒಪ್ಪುತ್ತಾ, ಈ ಹಬ್ಬವು ಸೃಷ್ಟಿಸಲು ಯತ್ನಿಸುತ್ತದೆ ಅನ್ವಯಿಸಲು ಅವಕಾಶಗಳನ್ನು ಬೆಳೆಸಿ, ಅಂತರರಾಷ್ಟ್ರೀಯ ಸಹಯೋಗಗಳನ್ನು ದೃಢೀಕರಿಸಲು ಉದ್ದೀಪಿಸುತ್ತದೆ, ಹೊಸದು ಆಲೋಚನಾತ್ಮಕ ಮೂಲ ಕೃತಿಗಳನ್ನು ಪ್ರಸ್ತುತಪಡಿಸಲು. ಇದು ಸ್ಥಳ-ಪ್ರತಿಸ್ಥಾನ ಪ್ರದರ್ಶನಗಳು, ನೆವಿಡಿಗಳು, ಮಾಸ್ಟರ್ ಕ್ಲಾಸುಗಳು, ಕಾರ್ಯಾಗಾರಗಳು, ಚರ್ಚೆಗಳು, ಮತ್ತು ಭಾರತ, ಸ್ವಿಟ್ಜರ್ಲ್ಯಾಂಡ್, ಕೊರಿಯಾ, ಕೆನಡಾ, ನಾರ್ವೇ, ಇಟಲಿ, ಯುಕೆ, ಆಸ್ಟ್ರಿಯಾ, ಸ್ಪೇನ್, ಜರ್ಮನಿ, ಜಪಾನ್, ಆಸ್ಟ್ರೇಲಿಯಾ, ಮತ್ತು ಹಲವಾರು ಇತರ ದೇಶಗಳಿಂದ ಬರುವ ಕಲಾವಿದರ ಸಹಾಯದಿಂದ ಸಹಕರಿಸುವ ಹೊರತು ಯಾರಿಗೂ ಅದ್ಭುತ ಅನುಭವಗಳನ್ನು ಸೂಚಿಸಲು ಉದ್ದೀಪಿಸುತ್ತದೆ. ಅರ್ಥಾತ್, ಈ ಹಬ್ಬವು ಪ್ರತಿ ಭಾಗಗೊಳಿಸುವವರಿಗೆ ಏನಾದರೂ ಅನುಕೂಲವನ್ನು ಮಾತ್ರ ನಿರೀಕ್ಷಿಸುತ್ತದೆ.

ಕಲಾವಿದರು, ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಮತ್ತು ಒತ್ತಾಯ ಸಂಸ್ಥೆಗಳ ನಡುವಣ ಸಹಯೋಗ ಮತ್ತು ಭಾಗಿತವನ್ನು ಹತ್ತಿರದ ಸಂಘಟನೆಯಂತೆ ಪುನರ್ರಚಿತಗೊಳಿಸಲಾಗಿದೆ ಅಟ್ಟಕ್ಕಲರಿ ಇಂಡಿಯಾ ಬೈಎನಿಯಲ್. ಹಬ್ಬದ ಕಾರ್ಯಕ್ರಮಗಳು ಜನವರಿ ಮತ್ತು ಮಾರ್ಚ್ 2024 ವರೆಗೂ ವಿಸ್ತರಿಸಿದ್ದು, ವಿಶ್ವವಿದ್ಯಾನಿಲಯಗಳೊಂದಿಗೆ, ಶಿಕ್ಷಣ ಸಂಸ್ಥೆಗಳೊಂದಿಗೆ ಮತ್ತು ಸಾಂಸ್ಕೃತಿಕ ಸಂಸ್ಥೆಗಳೊಂದಿಗೆ ಭಾಗವಹಿಸಿದ ಹಿಂದಿನ ಚಟುವಟಿಕೆಗಳನ್ನು ಹಾಗೂ ಈಗೆಲ್ಲಾ ಪ್ರಾರಂಭವಾಗಿದೆಯೆಂದು ಪೂರ್ವ-ಹಬ್ಬ ಕಾರ್ಯಕ್ರಮಗಳನ್ನು ಸಹಾಯಮಾಡುತ್ತಿದೆ. ಅದರ ಶಕ್ತಿಶಾಲಿ ಕಲಾತ್ಮಕ ಮತ್ತು ತಾಂತ್ರಿಕ ಸಾಧನೆಗಳನ್ನು ಬಳಸಿ, ಹಬ್ಬದ ಕಾರ್ಯಕ್ರಮಗಳು ಅನೇಕ ಕಡೆ ಮತ್ತು ಆನ್ಲೈನ್ ಮಾಧ್ಯಮಗಳನ್ನು ಹೊಂದಿದ್ದು, ಸಾರ್ವಜನಿಕವಾಗಿ ಅನುಕೂಲವನ್ನು ಹೊಂದಿದೆ. ಹಾಗೂ ಇನ್ನೂ ಹೆಚ್ಚಿನ ಮಾಹಿತಿಗಾಗಿ ಅಟ್ಟಕ್ಕಲರಿ ಇಂಡಿಯಾ ಬೈಎನಿಯಲ್ ಹಿಂದಿನ ಆವೃತ್ತಿಗಳ ಬಗ್ಗೆ ದಯವಿಟ್ಟು ನೋಡಿ: http://attakkalaribiennial.org/.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ದೃಷ್ಟಿ ದೋಷ, ನಂಬಿಕೆ ದ್ರೋಹ, ಸ್ವಯಂಕೃತ ಅಪರಾಧ, ಪರರಿಗೆ ಸಹಾನುಭೂತಿ ತೋರುವಿರಿ.

**ವೃಷಭ:** ಪ್ರಭಾವಿ ಜನರ ಭೇಟಿ, ರೋಗಭಾದೆ, ಆಪ್ತರನ್ನ ದ್ವೇಷಿಸುವಿರಿ, ಸಣ್ಣ ಪುಟ್ಟ ಕಲಹ, ಒತ್ತಡ ಜಾಸ್ತಿ.

**ಮಿಥುನ:** ಗುರಿ ಸಾಧಿಸಲು ಶ್ರಮಪಡುವಿರಿ, ಹಿರಿಯರ ಸಲಹೆ ಒಳಿತು, ಮಹಿಳೆಯರಿಗೆ ಹೆಚ್ಚು ಶ್ರಮ.

**ಕಟಕ:** ಕುಟುಂಬದಲ್ಲಿ ಪ್ರೀತಿ, ಸರ್ಕಾರಿ ಅಧಿಕಾರಿಗಳಿಗೆ ಬಡ್ತಿ, ಮನಶಾಂತಿ, ಆಹಾರ ವ್ಯತ್ಯಾಸ.

**ಸಿಂಹ:** ಕ್ರಯ ವಿಕ್ರಯಗಳಿಂದ ಲಾಭ, ಶತ್ರು ನಾಶ, ಯತ್ನ ಕಾರ್ಯಗಳಲ್ಲಿ ವಿಳಂಬ, ವಸ್ತ್ರ ವ್ಯಾಪಾರಿಗಳಿಗೆ ಲಾಭ.

**ಕನ್ಯಾ:** ಮನಸ್ಸಿನ ಹತೋಟಿ ಕಳೆದುಕೊಳ್ಳುವಿರಿ, ದಂಡ ಕಟ್ಟುವಿರಿ, ಮನಕ್ಲೇಶ, ಅವಕಾಶಗಳು ಕೈತಪ್ಪುವುದು.

**ತುಲಾ:** ಮೋಸದ ಕುತಂತ್ರಕ್ಕೆ ಬೀಳುವಿಕೆ, ಮಾನಹಾನಿ, ದುಗುಡ, ನಿರುದ್ಯೋಗಿಗಳಿಗೆ ಉದ್ಯೋಗ.

**ವೃಶ್ಚಿಕ:** ಕೈಗೊಂಡ ಕೆಲಸಗಳಲ್ಲಿ ಜಯ, ಅತಿಯಾದ ಆತ್ಮವಿಶ್ವಾಸ ಒಳ್ಳೆಯದಲ್ಲ, ಪತಿ ಪತ್ನಿಯರಲ್ಲಿ ಸಾಮರಸ್ಯ.

**ಧನಸ್ಸು:** ಸ್ವಂತ ಉದ್ಯಮಿಗಳಿಗೆ ಲಾಭ, ಸುಖ ಭೋಜನ, ವಸ್ತ್ರ ಖರೀದಿ, ಸ್ನೇಹಿತರು ಸಕಾಲದಲ್ಲಿ ನೆರವು ನೀಡುವರು.

**ಮಕರ:** ಬೇಡದ ವಿಷಯಗಳಿಂದ ದೂರವಿರಿ, ಷೇರು ವ್ಯವಹಾರಗಳಲ್ಲಿ ಲಾಭ, ಶರೀರದಲ್ಲಿ ತಳಮಳ, ವೈದ್ಯರ ಭೇಟಿ.

**ಕುಂಭ:** ದುಡುಕು ಸ್ವಭಾವ, ವಾಹನದಿಂದ ತೊಂದರೆ, ಹಿತ ಶತ್ರು ಬಾಧೆ, ಅತಿಯಾದ ಕೋಪ, ಪುಣ್ಯಕ್ಷೇತ್ರ ದರ್ಶನ.

**ಮೀನ:** ಹೇಳಿಕೆ ಮಾತನ್ನು ಕೇಳಬೇಡಿ, ಭೂ ಲಾಭ, ವೃತ್ತಿ ಜೀವನದಲ್ಲಿ ಬದಲಾವಣೆ, ಅಧಿಕ ಖರ್ಚು.

## ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ




ಭಾರತದಲ್ಲಿ ಜನವರಿ 24 ಅನ್ನು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನಾಗಿ ಆಚರಣೆ ಮಾಡಲಾಗುತ್ತದೆ. ಹೆಣ್ಣು ಮಕ್ಕಳ ದಿನದ ಕುರಿತು ಜಾಗೃತಿ ಮೂಡಿಸುವುದರ ಜೊತೆಗೆ ಹೆಣ್ಣು ಮಕ್ಕಳ ಹಕ್ಕುಗಳು, ಹೆಣ್ಣು ಮಕ್ಕಳ ಶಿಕ್ಷಣ ಮತ್ತು ಹೆಣ್ಣು ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚು ಒತ್ತು ನೀಡಲಾಗುತ್ತದೆ. ಕಳೆದ 2008ರಲ್ಲಿ ಮೊದಲ ಬಾರಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಸಚಿವಾಲಯವು ಜನವರಿ 24 ಅನ್ನು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನಾಗಿ ಆಚರಿಸಲು ನಿರ್ಧರಿಸಿತು.

ಹೆಣ್ಣು ಶಿಶುಹತ್ಯೆ, ಲಿಂಗ ಅಸಮಾನತೆ ಮತ್ತು ದೈಹಿಕ ದೌರ್ಜನ್ಯದಂತಹ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಗುರಿಯನ್ನು ಹೊಂದಲಾಗಿದೆ. ಹೆಣ್ಣು ಮಕ್ಕಳು ಎದುರಿಸುತ್ತಿರುವ ಸಮಸ್ಯೆಗಳನ್ನು ಎತ್ತಿ ತೋರಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವು ಹೆಣ್ಣುಮಕ್ಕಳಿಗೆ ಅವರ ಹಕ್ಕುಗಳು, ಶಿಕ್ಷಣ, ಆರೋಗ್ಯ ಮತ್ತು ಪೋಷಣೆಯ ಪ್ರಾಮುಖ್ಯತೆಯ ಬಗ್ಗೆ ಅರಿವು ಮೂಡಿಸಲಾಗುತ್ತದೆ. ಕಳೆದ 2008ರಲ್ಲಿ ಮೊದಲ ಬಾರಿಗೆ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಪ್ರಾರಂಭಿಸಿತು. ಸಮಾಜದಲ್ಲಿ ಹೆಣ್ಣು ಮಕ್ಕಳು ಎದುರಿಸುತ್ತಿರುವ ಲಿಂಗ ಆಧಾರಿತ ತಾರತಮ್ಯದ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ಇದರ ಮಧ್ಯೆ, ಹೆಣ್ಣು ಮಕ್ಕಳ ಸ್ಥಿತಿಯನ್ನು ಸುಧಾರಿಸುವ ಸಲುವಾಗಿ ಕೇಂದ್ರ ಸರ್ಕಾರವು ಬೇಟಿ ಬಚಾವೋ ಬೇಟಿ ಪಢಾವೋ, ಹೆಣ್ಣು ಮಕ್ಕಳಿಗೆ ಉಚಿತ ಅಥವಾ ಅನುದಾನಿತ ಶಿಕ್ಷಣ, ಕಾಲೇಜುಗಳು ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ವಿದ್ಯಾರ್ಥಿನಿಯರಿಗೆ ವಿಶೇಷ ಮೀಸಲಾತಿ ನೀಡುವಂತಹ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

ಹೆಣ್ಣು ಮಕ್ಕಳ ಹಕ್ಕುಗಳ ಬಗ್ಗೆ ಸಾರ್ವಜನಿಕ ಜಾಗೃತಿಯನ್ನು ಉತ್ತೇಜಿಸುವಲ್ಲಿ ರಾಷ್ಟ್ರೀಯ ಬಾಲ ಹೆಣ್ಣು ದಿನವು ಭಾರಿ ಮಹತ್ವವನ್ನು ಹೊಂದಿದೆ. ಹುಡುಗಿಯರು ತಮ್ಮ ಕುಟುಂಬಗಳು, ಸಮುದಾಯಗಳು ಮತ್ತು ರಾಷ್ಟ್ರಗಳಲ್ಲಿ ಮೌಲ್ಯಯುತ ವ್ಯಕ್ತಿಗಳಾಗಿ ಹೊರಹೊಮ್ಮಲು ಸಹಾಯ ಮಾಡಲು ಈ ದಿನಾಂಕವನ್ನು ಗುರುತಿಸಲಾಗಿದೆ. ಈ ದಿನವು ಹೆಣ್ಣುಮಕ್ಕಳ ಹಕ್ಕುಗಳು, ಗೌರವ ಮತ್ತು ಮೌಲ್ಯವನ್ನು ರಾಷ್ಟ್ರದಾದ್ಯಂತ ಎತ್ತಿಹಿಡಿಯುತ್ತದೆ ಎಂದು ಖಾತರಿಪಡಿಸುತ್ತದೆ. ಇದನ್ನು ಕಡಿಮೆ ಮಾಡಲು ಮತ್ತು ಸಮಾಜದಲ್ಲಿ ಮಹಿಳೆಯರ ಜೀವನವನ್ನು ಹೆಚ್ಚಿಸಲು ಭಾರತ ಸರ್ಕಾರ ಅನೇಕ ಕ್ರಮಗಳನ್ನು ಕೈಗೊಂಡಿದೆ. ಹೆಣ್ಣು ಮಕ್ಕಳ ಅಭ್ಯುದಯಕ್ಕಾಗಿ ಭಾರತ ಸರ್ಕಾರವು ಅನೇಕ ಉಪಕ್ರಮಗಳು ಮತ್ತು ಅಭಿಯಾನಗಳನ್ನು ಜಾರಿಗೆ ತಂದಿದೆ.

ಸಂಜೆ ಮುಗಿಲು
ಬುಧವಾರ
24.1.2024




# ರಾಹುಲ್ ಗಾಂಧಿ ವಿರುದ್ಧ ಮತ್ತೊಂದು FIR

ಅಸ್ಸಾಂ: ಹಿಂಸಾಚಾರ, ಪ್ರಚೋದನೆ, ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ ಮತ್ತು ಪೊಲೀಸ್ ಸಿಬ್ಬಂದಿಯ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ್, ಕನ್ಹಯ್ಯ ಕುಮಾರ್ ಮತ್ತು ಇತರರ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ. ಕಾಂಗ್ರೆಸ್ ಸದಸ್ಯರು ಇಂದು ಹಿಂಸಾಚಾರ, ಪ್ರಚೋದನೆ, ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ ಮತ್ತು ಪೊಲೀಸ್ ಸಿಬ್ಬಂದಿಯ ಮೇಲೆ ಹಲ್ಲೆ ನಡೆಸಿದ ಕೃತ್ಯಗಳಿಗೆ ಸಂಬಂಧಿಸಿದಂತೆ, ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ್, ಕನ್ಹಯ್ಯ ಕುಮಾರ್ ಮತ್ತು ಇತರ ವ್ಯಕ್ತಿಗಳ ವಿರುದ್ಧ ಸೆಕ್ಷನ್ 120 (ಬಿ) 143/147/188/283/353/332/333/427 ಐಪಿಸಿ ಆರ್ / ಡಬ್ಲ್ಯು ಸೆಕ್ಷನ್ 3 ರ ಅಡಿಯಲ್ಲಿ ಎಫ್ಐಆರ್ ದಾಖಲಿಸಲಾಗಿದೆ ಎಂದು ಬಿಸ್ವಾ ಪೋಸ್ಟ್ ಮಾಡಿದ್ದಾರೆ.

# ಬಿಹಾರದ ಮಾಜಿ ಸಿಎಂ ಕರ್ಪೂರಿ ಠಾಕೂರ್‌ಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ!



**ದೆಹಲಿ:** ಹಿಂದುಳಿದ ವರ್ಗಗಳ ಹೋರಾಟಕ್ಕಾಗಿ ಹೆಸರುವಾಸಿಯಾಗಿರುವ ಬಿಹಾರದ ಮಾಜಿ ಸಿಎಂ ಕರ್ಪೂರಿ ಠಾಕೂರ್ಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ಲಭಿಸಿದೆ. ಕರ್ಪೂರಿ ಎರಡು ಬಾರಿ ಬಿಹಾರದ ಉಪಮುಖ್ಯಮಂತ್ರಿ, ಎರಡು ಬಾರಿ ಮುಖ್ಯಮಂತ್ರಿ ಮತ್ತು ದಶಕಗಳ ಕಾಲ ವಿರೋಧ ಪಕ್ಷದ ಶಾಸಕ ಮತ್ತು ನಾಯಕರಾಗಿದ್ದರು. 1952 ರಲ್ಲಿ ಮೊದಲ ವಿಧಾನಸಭೆಯಲ್ಲಿ ಚುನಾವಣೆಯಲ್ಲಿ ಗೆದ್ದ ನಂತರ ಅವರು ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಸೋತಿಲ್ಲ. ಕರ್ಪೂರಿ ಠಾಕೂರ್ ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಲು ರಾಷ್ಟ್ರಪತಿಗಳು ಸಂತಸ ವ್ಯಕ್ತಪಡಿಸಿದ್ದಾರೆ ಎಂದು ರಾಷ್ಟ್ರಪತಿ ಭವನದ ಪ್ರಕಟಣೆಯು ಠಾಕೂರ್ ಅವರ 100 ನೇ ಜನ್ಮ ವಾರ್ಷಿಕೋತ್ಸವದ ಒಂದು ದಿನ ಮೊದಲು ಹೇಳಿದೆ. ಕರ್ಪೂರಿ ಠಾಕೂರ್ ಡಿಸೆಂಬರ್ 1970 ಮತ್ತು ಜೂನ್ 1971 ರ ನಡುವೆ ಹಾಗೂ ಡಿಸೆಂಬರ್ 1977 –ಏಪ್ರಿಲ್ 1979 ರವರೆಗೆ ಬಿಹಾರದ ಮುಖ್ಯಮಂತ್ರಿಯಾಗಿದ್ದರು. ಠಾಕೂರ್ ಅವರ ಪುತ್ರ, ರಾಮ್ ನಾಥ್ ಠಾಕೂರ್ ನಿತೀಶ್ ಕುಮಾರ್ ನೇತೃತ್ವದ ಜೆಡಿಯುನಿಂದ ರಾಜ್ಯಸಭಾ ಸಂಸದರಾಗಿದ್ದಾರೆ. ಮುಖ್ಯಮಂತ್ರಿಯಾಗಿ, ಠಾಕೂರ್ ಅವರು ಮುಂಗೇರಿ ಲಾಲ್ ಆಯೋಗದ ವರದಿಯನ್ನು ಜಾರಿಗೆ ತರಲು ನಿರ್ಧರಿಸಿದರು, ಅದು ಹಿಂದುಳಿದ ಜಾತಿಗಳಿಗೆ ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿಯನ್ನು ಸ್ಥಾಪಿಸಲು ಶಿಫಾರಸು ಮಾಡಿತು.

# ಶ್ರೀಲಂಕಾದಲ್ಲಿ 6 ಭಾರತೀಯ ಮೀನುಗಾರರ ಬಂಧನ



**ಕೊಲಂಬೋ:** ಶ್ರೀಲಂಕಾದ ಜಲಗಡಿಯನ್ನು ಪ್ರವೇಶಿಸಿದ ಆರೋಪದಲ್ಲಿ ಅಲ್ಲಿನ ನೌಕಾಪಡೆ ಆರು ಭಾರತೀಯ ಮೀನುಗಾರರನ್ನು ಬಂಧಿಸಿದೆ. ಈ ಬಗ್ಗೆ ಮಂಗಳವಾರ ಶ್ರೀಲಂಕಾದ ನೌಕಾಪಡೆ ಹೊರಡಿಸಿದ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ಡೆಲ್ಫ್ ದ್ವೀಪದಲ್ಲಿ ಎರಡು ದೋಣಿಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಲಾಗಿದೆ. ಬಂಧಿತರನ್ನು ಕಂಕಾಸುಂತುರೈ ಬಂದರಿಗೆ ಕರೆದೊಯ್ಯಲಾಗಿದ್ದು, ಮುಂದಿನ ಕ್ರಮಕ್ಕೆ ಮೈಲಾಡಿ ಮೀನುಗಾರಿಕಾ ಇನ್ಸ್ಪೆಕ್ಟರ್ ಗೆ ಹಸ್ತಾಂತರಿಸಲಾಗಿದೆ. ಕಳೆದವಾರವೂ ಇಂತಹ ಪ್ರಕರಣ ನಡೆದಿದ್ದು, 18 ಭಾರತೀಯ ಮೀನುಗಾರರನ್ನು ಬಂಧಿಸಿ ಎರಡು ದೋಣಿಗಳನ್ನು ವಶಪಡಿಸಿಕೊಳ್ಳಲಾಗಿತ್ತು. ತಮಿಳುನಾಡು ಹಾಗು ಶ್ರೀಲಂಕಾವನ್ನು ಬೇರ್ಪಡಿಸುವ ಪಾಕ್ ಜಲಸಂಧಿ ಮೀನುಗಳು ಹೇರಳವಾಗಿ ದೊರೆಯುವ ಸ್ಥಳವಾಗಿದ್ದು, ಅಲ್ಲಿ ಹಲವಾರು ಬಾರಿ ಭಾರತೀಯ ಮೀನುಗಾರರ ಮೇಲೆ ಗುಂಡಿನ ದಾಳಿ ನಡೆಸಿ ದೋಣಿಗಳನ್ನು ವಶಕ್ಕೆ ತೆಗೆದುಕೊಂಡ ಘಟನೆ ನಡೆದಿವೆ.

# ಚೀನಾ 'ಸಂಶೋಧನಾ ಹಡಗಿಗೆ' ಮಾಲ್ಡೀವ್ಸ್ ಅನುಮತಿ!

**ಚೀನಾ:** ಚೀನಾದ 'ಸಂಶೋಧನಾ ಹಡಗು' ಕ್ಸಿಯಾನ್ ಯಾಂಗ್ ಹಾಂಗ್ 03 ಮುಂದಿನ ತಿಂಗಳ ಆರಂಭದಲ್ಲಿ ಮಾಲ್ಡೀವ್ಸ್ ರಾಜಧಾನಿ ಮಾಲೆಯಲ್ಲಿ ಇಳಿಯಲಿದೆ ಎಂದು ಮಾಲ್ಡೀವ್ಸ್ ಸರ್ಕಾರ ದೃಢಪಡಿಸಿದೆ. ಮಾಲ್ಡೀವ್ಸ್ ಯಾವಾಗಲೂ ಸ್ನೇಹಪರ ದೇಶಗಳ ಹಡಗುಗಳಿಗೆ ಸ್ವಾಗತಾರ್ಹ ತಾಣವಾಗಿದೆ, ಮತ್ತು ಶಾಂತಿಯುತ ಉದ್ದೇಶಗಳಿಗಾಗಿ ಬಂದರು ಕರೆಗಳನ್ನು ಮಾಡುವ ನಾಗರಿಕ ಮತ್ತು ಮಿಲಿಟರಿ ಹಡಗುಗಳಿಗೆ ಆತಿಥ್ಯ ವಹಿಸುತ್ತಿದೆ ಮಾಲ್ಡೀವ್ಸ್ನ ಮೂವರು ಸಚಿವರು ಪ್ರಧಾನಿ ಮೋದಿ ಬಗ್ಗೆ ವಿಮರ್ಶಾತ್ಮಕ ಹೇಳಿಕೆಗಳ ಬಗ್ಗೆ ಮಾಲೆ ಮತ್ತು ದೆಹಲಿ ನಡುವೆ ಉದ್ವಿಗ್ನ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಮಾಲ್ಡೀವ್ಸ್ ಚೀನಾದ ಹಡಗನ್ನು ನಿಲ್ಲಿಸಲು ಅನುಮತಿ ನೀಡಿದೆ.



# ಅತ್ತಿಗೆ ಮೇಲೆ ಗ್ಯಾಂಗ್‌ರೇಪ್ ಮಾಡಿ ಕೊಲೆಗೈದ ಐವರು ಮೈದುನರು



**ಲಕ್ನೋ:** ತನ್ನ 5 ಜನ ಸಹೋದರರಿಗೆ ಹಣ ನೀಡಿ ಪತ್ನಿಯನ್ನೇ ಪತಿ ಕೊಲೆ ಮಾಡಿಸಿರುವ ಘಟನೆ ಫತೇಪುರ್‌ನಲ್ಲಿ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಉತ್ತರ ಪ್ರದೇಶ ಪೊಲೀಸರು ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.

ಆರೋಪಿಗಳನ್ನು ರೋಹಿತ್ ಲೋಧಿ, ರಾಮಚಂದ್ರ, ಆಲಿಯಾಸ್ ಪುಟ್ಟು, ಶಿವಂ ಅಲಿಯಾಸ್ ಪಂಚಮ್, ಸೋನು ಲೋಧಿ ಎಂದು ಗುರುತಿಸಲಾಗಿದೆ. ಐದನೇ ಆರೋಪಿಯಾದ ನೊಂಕು ಲೋಧಿ ಪರಾರಿಯಾಗಿದ್ದಾನೆ. ಸಂತ್ರಸ್ತೆಯ ಗಂಡ ದುಬೈನಲ್ಲಿದ್ದಾನೆ ಎಂದು ತಿಳಿದು ಬಂದಿದೆ.

**ಏನಿದು ಪ್ರಕರಣ?:** ತವರು ಮನೆಗೆ ಹೋಗಿದ್ದ ಅತ್ತಿಗೆಯನ್ನು ಜಾತ್ರೆಗೆ ಕರೆದುಕೊಂಡು ಹೋಗುತ್ತೇವೆ ಎಂದು ಹೇಳಿ ಆಕೆಯನ್ನು ನಂಬಿಸಿ ಮೈದುನರು ಕರೆದುಕೊಂಡು ಹೋಗಿದ್ದಾರೆ. ಈ ವೇಳೆ ಆಕೆಯ ಮೇಲೆ ಐದು ಜನ ಸಾಮೂಹಿಕ ಅತ್ಯಾಚಾರವೆಸಗಿದ್ದಾರೆ. ನಂತರ ಆಕೆಯ ಗುರುತನ್ನು ಮರೆಮಾಚಲು ಮುಖಕ್ಕೆ ಇಟ್ಟಿಗೆಗಳಿಂದ ಹೊಡೆದು ಹಲ್ಲೆ ಮಾಡಿದ್ದಾರೆ.

ಹಲ್ಲೆ ಮಾಡಿದ ನಂತರ ಸಂತ್ರಸ್ತೆಯ ಮೃತದೇಹವನ್ನು ಬೆತ್ತಲೆಯಾಗಿಯೇ ಫತೇಪುರ್‌ನಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡವೊಂದರ ನೀರಿನ ಟ್ಯಾಂಕ್‌ನಲ್ಲಿ ಬಿಸಾಡಿ ಹೋಗಿದ್ದರು. ಗ್ರಾಮಸ್ಥರು ಮೃತದೇಹವನ್ನು ಕಂಡು ಈ ಕುರಿತು ಪೊಲೀಸರಿಗೆ ಮಾಹಿತಿ ತಿಳಿಸಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಸಂತ್ರಸ್ತೆಯ ಮೃತದೇಹವನ್ನು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಜೊತೆಗೆ ಸ್ಥಳದಲ್ಲಿ ಆರೋಪಿಗಳು ಕುಡಿದು ಬಿಸಾಡಿದ ಮದ್ಯದ ಬಾಟಲಿ ಮತ್ತು ತಿನಿಸುಗಳು ದೊರಕಿವೆ.

ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಆರೋಪಿಗಳು ಕೊಲೆ ಬಗ್ಗೆ ಬಾಯಿಬಿಟ್ಟಿದ್ದು, ಸಂತ್ರಸ್ತೆಯ ಪತಿಯೇ ಇದಕ್ಕೆ ಸಾಥ್ ನೀಡಿರುವುದಾಗಿ ಬೆಳಕಿಗೆ ಬಂದಿದೆ. ತವರು ಮನೆಗೆ ಹೋಗಿದ್ದ ಪತ್ನಿಯನ್ನು ಕೊಲೆ ಮಾಡಿದರೆ ಹಣ ನೀಡುವುದಾಗಿ ಸಂತ್ರಸ್ತೆಯ ಪತಿ, ಅವನ ಐದು ಮಂದಿ ಸಹೋದರಿಗೆ ಹಣದ ಆಸೆ ತೋರಿಸಿದ್ದ. ಹಣದ ಮೋಹಕ್ಕೆ ಒಳಗಾದ ಸಹೋದರರು ಅತ್ತಿಗೆಯನ್ನೇ ಕೊಲೆ ಮಾಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಸಂತ್ರಸ್ತೆಯ ಪತಿ ದುಬೈನಲ್ಲಿದ್ದಾನೆ. ಐದನೇ ಆರೋಪಿಗಾಗಿ ಹುಡುಕಾಟ ನಡೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮರಣೋತ್ತರ ಪರೀಕ್ಷೆಯಲ್ಲಿ ಆಕೆಯ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿದ್ದು, ತಲೆಗೆ ಪೆಟ್ಟು ಬಿದ್ದ ಕಾರಣ ತೀವ್ರ ರಕ್ತಸ್ರಾವದಿಂದ ಮೃತಪಟ್ಟಿದ್ದಾಳೆ ಎಂದು ವೈದ್ಯರು ದೃಢೀಕರಿಸಿದ್ದಾರೆ.

**ದುಬೈನಲ್ಲಿರೋ ಮಹಿಳೆಯ ಪತಿಯೇ ಮಾಸ್ಟರ್ ಮೈಂಡ್**

# ಬಾಲರಾಮನಿಗೆ ಚಾಮರ ಸೇವೆ ಪೇಜಾವರ ಶ್ರೀಗಳಿಂದಲೇ ಪೂಜೆ

**ಅಯೋಧ್ಯೆ:** ಅಯೋಧ್ಯೆಯ ನೂತನ ಮಂದಿರದಲ್ಲಿ ಶ್ರೀರಾಮನ ವಿಧ್ಯುಕ್ತ ಪ್ರತಿಷ್ಠಾಪನೆಯ ನಂತರ ಪೇಜಾವರ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮಿಗಳ ನೇತೃತ್ವದಲ್ಲಿ ಇಂದಿನಿಂದ 48 ದಿನಗಳ ಮಂಡಲೋತ್ಸವ ಆರಂಭಗೊಂಡಿದೆ. ಪೇಜಾವರ ಶ್ರೀಗಳು ಮಂಗಳವಾರವೂ ವಿವಿಧ ಮಂತ್ರಗಳಿಂದ ಪ್ರತಿಮೆಗೆ ತತ್ವನ್ಯಾಸಾದಿಗಳನ್ನು ನೆರವೇರಿಸಿ ಕಲಶಪೂಜೆ, ಚಾಮರಸೇವೆ, ಮಹಾಮಂಗಳಾರತಿಗಳನ್ನು ನೆರವೇರಿಸಿ ಪೂಜೆ ಸಲ್ಲಿಸಿದರು. ಇದಕ್ಕೂ ಮೊದಲು ಪಿಲೂರ್ಣಪ್ರಜ್ಞ ವಿದ್ಯಾಪೀಠದ ಪ್ರಾಚಾರ್ಯ ವಿದ್ವಾನ್ ಸತ್ಯನಾರಾಯಣಾಚಾರ್ಯ, ವಿಷ್ಣುಮೂರ್ತಿ ಆಚಾರ್ಯ , ಶಶಾಂಖ ಭಟ್ ಲಕ್ಷ್ಮೀನಾರಾಯಣ ಭಟ್ ಮೊದಲಸದವರ ನೇತೃತ್ವದಲ್ಲಿ ವಿವಿಧ ಹೋಮಹವನಾದಿಗಳು ಕಲಶಾರಾಧನೆ ಇತ್ಯಾದಿಗಳು ನೆರವೇರಿದವು.

**ಬಾಲರಾಮನಿಗೆ 16 ನಮೂನೆಗಳಪೂಜೆ:** ಬಾಲರಾಮನಿಗೆ ಒಟ್ಟು 16 ನಮೂನೆಗಳ ಪೂಜೆ ನಡೆಯಬೇಕು. ಇದರಲ್ಲಿ ಗೌರವಾರ್ಥವಾಗಿ ಪೇಜಾವರ ಮಠದ ಶ್ರೀಗಳು, ಅಯೋಧ್ಯೆಯ ಬಾಲರಾಮನಿಗೆ ಚಾಮರಸೇವೆ ಸಲ್ಲಿಸಿದರು. 48 ದಿನಗಳ ಕಾಲ ಪೇಜಾವರ ಶ್ರೀಗಳೇ ಅಯೋಧ್ಯೆಯ ಬಾಲರಾಮನಿಗೆ ಪ್ರತಿನಿತ್ಯ ಪೂಜೆ ಸಲ್ಲಿಸಲಿದ್ದಾರೆ. 2ನೇ ದಿನ ಪೇಜಾವರ ಶ್ರೀಗಳು ಬಾಲ ರಾಮನಿಗೆ ಪೂಜೆ ಸಲ್ಲಿಸಿದ ವಿಡಿಯೋ ಲಭ್ಯವಾಗಿವೆ.



# ಹಾಂಕಾಂಗ್ ಹಿಂದಿಕ್ಕಿದೆ ಭಾರತದ ಷೇರುಪೇಟೆ

**ನವದೆಹಲಿ:** ಭಾರತದ ಷೇರುಮಾರುಕಟ್ಟೆ ಉಚ್ಛ್ರಾಯ ಸ್ಥಿತಿಯಲ್ಲಿದೆ. ಸತತವಾಗಿ ಏರುತ್ತಲೇ ಇದೆ. ಭಾರತದ್ದು ದಕ್ಷಿಣ ಏಷ್ಯಾದ ಅತಿದೊಡ್ಡ ಷೇರು ಮಾರುಕಟ್ಟೆ ಎನ್ನುವುದು ಮಾತ್ರವಲ್ಲ, ಏಷ್ಯಾದ ದೈತ್ಯ ಮಾರುಕಟ್ಟೆಗಳಲ್ಲಿ ಒಂದೆನಿಸಿದೆ.

ಇದೀಗ ಹಾಂಕಾಂಗ್ನ ಷೇರುಪೇಟೆಯನ್ನು ಭಾರತ ಹಿಂದಿಕ್ಕಿದೆ.

ನಿನ್ನೆ ಮಂಗಳವಾರ ಭಾರತದ ಬಿಎಸ್ಇ ಮತ್ತು ಎನ್ಎಸ್ಇನಲ್ಲಿ ಲಿಸ್ಟ್ ಆಗಿರುವ ಷೇರುಗಳ ಒಟ್ಟು ಮೌಲ್ಯ 4.33 ಟ್ರಿಲಿಯನ್ ಡಾಲರ್ ತಲುಪಿತು. ಅದೇ ವೇಳೆ, ಹಾಂಕಾಂಗ್ನ ಷೇರು ವಿನಿಯಮ ಕೇಂದ್ರಗಳಲ್ಲಿ ಲಿಸ್ಟ್ ಆಗಿರುವ ಷೇರುಗಳ ಒಟ್ಟು ಮೌಲ್ಯ 4.29 ಟ್ರಿಲಿಯನ್ ಡಾಲರ್ ಇತ್ತು. ಇತಿಹಾಸದಲ್ಲಿ ಮೊದಲ ಬಾರಿಗೆ ಭಾರತದ ಷೇರುಸಂಪತ್ತು ಹಾಂಕಾಂಗ್ನದ್ದನ್ನು ಮೀರಿಸಿದೆ ಎಂದು ವರದಿ ಮಾಡಿದೆ.

ವಿಶ್ವದ ಅತಿದೊಡ್ಡ ಷೇರುಮಾರುಕಟ್ಟೆಗಳ ಪಟ್ಟಿಯಲ್ಲಿ ಭಾರತ ಐದನೇ ಸ್ಥಾನದಿಂದ ನಾಲ್ಕನೇ ಸ್ಥಾನಕ್ಕೆ ಏರಿದೆ. ಹಾಂಕಾಂಗ್ ಐದನೇ ಸ್ಥಾನಕ್ಕೆ ಇಳಿದಿದೆ. ಕಳೆದ ನಾಲ್ಕು ವರ್ಷಗಳಿಂದ ಭಾರತದ ಸ್ಟಾಕ್ ಮಾರ್ಕೆಟ್ ಅದ್ಭುತವಾಗಿ ಬೆಳೆದು, ಮೂಗಿನ ಮೇಲೆ ಬೆರಳಿಡುವಂತೆ ಮಾಡಿದೆ. ಕಳೆದ ತಿಂಗಳು ಡಿಸೆಂಬರ್ 5ರಂದು ಭಾರತದ ಷೇರು ಮಾರುಕಟ್ಟೆಯ ಒಟ್ಟೂ ಷೇರುಸಂಪತ್ತು 4 ಟ್ರಿಲಿಯನ್ ಡಾಲರ್ ಮೈಲಿಗಲ್ಲನ್ನು ಮೊದಲ ಬಾರಿಗೆ ಮುಟ್ಟಿತ್ತು.



# ಗಾಜಾದಲ್ಲಿ ಭೀಕರ ದಾಳಿ : ಸೈನಿಕರ ಸಾವು

**ಇಸ್ರೇಲ್:** ಮುತ್ತಿಗೆ ಹಾಕಿದ ಪ್ಯಾಲೇಸ್ಟಿನಿಯನ್ ಎನ್ಕ್ಲೇವ್ನಲ್ಲಿ ಉಲ್ಬಣಗೊಳ್ಳುತ್ತಿರುವ ಯುದ್ಧವನ್ನು ಪ್ರಚೋದಿಸಿದ ಅಕ್ಟೋಬರ್ 7 ರ ದಾಳಿಯ ನಂತರ ಹಮಾಸ್ ಉಗ್ರಗಾಮಿ ಗುಂಪು ಮಿಲಿಟರಿಯ ಮೇಲೆ ನಡೆಸಿದ ಅತ್ಯಂತ ಭೀಕರ ಏಕ ದಾಳಿಯಲ್ಲಿ ಗಾಜಾದಲ್ಲಿ ಕನಿಷ್ಠ 21 ಇಸ್ರೇಲಿ ಸೈನಿಕರು ಕೊಲ್ಲಲ್ಪಟ್ಟರು. ಇದು ಸತ್ತ ಇಸ್ರೇಲಿ ಪಡೆಗಳ ಒಟ್ಟು ಸಂಖ್ಯೆಯನ್ನು 208 ಕ್ಕೆ ಏರಿದೆ. ಈ ಘೋರ ಘಟನೆಯಿಂದ ಇಸ್ರೇಲ್ಗೆ ಪ್ರಮುಖ ಹಿನ್ನಡೆಯಾಗಿದೆ ಮತ್ತು ತಕ್ಷಣದ ಕದನ ವಿರಾಮಕ್ಕಾಗಿ ಒತ್ತಡ ಹೆಚ್ಚಾಗಬಹುದು. ಅಸೋಸಿಯೇಟೆಡ್ ಪ್ರೆಸ್ ಪ್ರಕಾರ, ಇಸ್ರೇಲ್ ಡಿಫೆನ್ಸ್ ಫೋರ್ಸ್ (ಐಡಿಎಫ್) ಮೀಸಲು ಸಿಬ್ಬಂದಿ ಸೋಮವಾರ ಮಧ್ಯ ಗಾಜಾದಲ್ಲಿ ಎರಡು ಕಟ್ಟಡಗಳನ್ನು ಕೆಡವಲು ಸ್ಫೋಟಕಗಳನ್ನು ಸಿದ್ಧಪಡಿಸುತ್ತಿದ್ದರು, ಉಗ್ರಗಾಮಿಯೊಬ್ಬರು ಹತ್ತಿರದ ಟ್ಯಾಂಕ್ಗೆ ರಾಕೆಟ್ ಚಾಲಿತ ಗ್ರೆನೇಡ್ ಅನ್ನು ಹಾರಿಸಿದರು. ಸ್ಫೋಟವು ಸ್ಫೋಟಕಗಳನ್ನು ಪ್ರಚೋದಿಸಿತು, ಇದರಿಂದಾಗಿ ಎರಡು ಅಂತಸ್ತಿನ ಕಟ್ಟಡಗಳು ಒಳಗೆ ಸೈನಿಕರ ಮೇಲೆ ಕುಸಿದವು.



# ಗೂಗಲ್‌ನಿಂದ 15 ಸಾವಿರ ಉದ್ಯೋಗ ಕಡಿತ

**ದೆಹಲಿ:** ಗೂಗಲ್ ಕಂಪನಿ ತನ್ನ ಉದ್ಯೋಗಿಗಳಿಗೆ ಶಾಕ್ ಮೇಲೆ ಶಾಕ್ ನೀಡ್ತಿದ್ದು ಸಾಮೂಹಿಕ ಉದ್ಯೋಗ ಕಡಿತದಿಂದ ರೊಚ್ಚಿಗೆದ್ದ ಸಿಬ್ಬಂದಿ ಪ್ರತಿಭಟನೆಗಿಳಿದಿದ್ದಾರೆ.

ಕಂಪನಿಯು ಇತ್ತೀಚಿಗೆ ವಜಾ ಮಾಡಿದ ಕ್ರಮಕ್ಕೆ ಪ್ರತಿಕ್ರಿಯೆಯಾಗಿ ಗೂಗಲ್ ಉದ್ಯೋಗಿಗಳು ಪ್ರತಿಭಟನೆಗೆ ಸಜ್ಜಾಗಿದ್ದಾರೆ.

ಸುಮಾರು 15,000 ಸಿಬ್ಬಂದಿ ಪ್ರತಿಭಟನೆಯಲ್ಲಿ ತೊಡಗಿದ್ದರು ಎಂದು ವರದಿಯಾಗಿದೆ.

ಆಲ್ಫಾಬೆಟ್ ವರ್ಕರ್ಸ್ ಯೂನಿಯನ್ ಜನವರಿ 18 ರಂದು ಅಮೇರಿಕದಾದ್ಯಂತ ಐದು ಗೂಗಲ್ ಕ್ಯಾಂಪಸ್ಗಳಲ್ಲಿ ಪ್ರತಿಭಟನೆ ಸಂಘಟಿಸಿತ್ತು. ಕ್ಯಾಲಿಫೋರ್ನಿಯಾದ ಮೌಂಟೇನ್ ವ್ಯೂನಿಂದ ನ್ಯೂಯಾರ್ಕ್ವರೆಗೆ ಪ್ರತಿಭಟನೆ ವಿಸ್ತರಿಸಿತು.

ಈಗಾಗಲೇ ಗೂಗಲ್ ಸಿಇಒ ಸುಂದರ್ ಪಿಚೈ ಅವರು 2024 ರಲ್ಲಿ ಇನ್ನೂ ಹೆಚ್ಚಿನ ಸಿಬ್ಬಂದಿ ವಜಾ ಪ್ರಕ್ರಿಯೆ ನಡೆಯಲಿದೆ ಎಂದಿದ್ದರು. ದೊಡ್ಡ ಆದ್ಯತೆಗಳಲ್ಲಿ ಹೂಡಿಕೆ ಮಾಡಲು ಕಠಿಣ ಆಯ್ಕೆಗಳನ್ನು ಮಾಡಬೇಕು ಎಂದು ಹೇಳಿದ್ದರು. ಗೂಗಲ್ ನ ಹಲವಾರು ವಿಭಾಗಗಳಲ್ಲಿ 1,000 ಕ್ಕೂ ಹೆಚ್ಚು ಉದ್ಯೋಗಿಗಳು ತಮ್ಮ ಉದ್ಯೋಗವನ್ನು ಕಳೆದುಕೊಂಡಿದ್ದಾರೆ ಎಂದು ವರದಿಯಾಗಿದೆ. ಮತ್ತೊಂದೆಡೆ ಕಳೆದ ವರ್ಷದಲ್ಲಿ ಸುಮಾರು 15,000 ಸಹೋದ್ಯೋಗಿಗಳು ಕೆಲಸ ಕಳೆದುಕೊಂಡಿದ್ದಾರೆ ಎಂದು ಆಲ್ಫಾಬೆಟ್ ವರ್ಕರ್ಸ್ ಯೂನಿಯನ್ ಬಹಿರಂಗಪಡಿಸಿದೆ.

ಯೂನಿಯನ್ ಬಹಿರಂಗಪಡಿಸಿದ ಈ ವಿಷಯವು ನೌಕರರಲ್ಲಿ ಅಸಮಾಧಾನವನ್ನು ತೀವ್ರಗೊಳಿಸಿದ್ದು ಪ್ರತಿಭಟನೆಗಳನ್ನು ಸಂಘಟಿಸಲು ಪ್ರೇರೇಪಿಸಿದೆ.




# ಹೊಸ ಉದ್ಯಮಕ್ಕೆ ಕಾಲಿಟ್ಟ ಸನ್ನಿ ಲಿಯೋನ್

**ದೆಹಲಿ:** ಮಾಜಿ ನೀಲಿ ಸಿನಿಮಾಗಳ ತಾರೆ ಸನ್ನಿ ಲಿಯೋನ್ ಈಗಾಗಲೇ ಅನೇಕ ಉದ್ಯಮಗಳಲ್ಲಿ ತೊಡಗಿಕೊಂಡಿದ್ದಾರೆ. ಪಾರ್ನ್ ಪ್ರಪಂಚದಿಂದ ದೂರವಾದ ನಂತರ ಅವರು ತಮ್ಮದೇ ಆದ ಸಾಕಷ್ಟು ಬ್ರ್ಯಾಂಡ್ ಗಳನ್ನು ಹೊಂದಿದ್ದಾರೆ. ಇದೀಗ ಮತ್ತೊಂದು ಹೊಸ ಉದ್ಯಮಕ್ಕೆ ಕಾಲಿಟ್ಟಿದ್ದು, ಆ ಕುರಿತು ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ.

ರೆಸ್ಟೋರೆಂಟ್ ಶುರು ಮಾಡಬೇಕು ಎನ್ನುವುದು ಸನ್ನಿ ಆಸೆಯಿತ್ತಂತೆ. ಅದನ್ನು ಈಗ ಈಡೇರಸಿಕೊಂಡಿದ್ದಾರೆ. ಪತಿಯ ಜೊತೆಗೂಡಿ ದೆಹಲಿಯ ನೋಯ್ಡಾದಲ್ಲಿ ರೆಸ್ಟೊರೆಂಟ್ ಶುರು ಮಾಡಿದ್ದು, ಅದಕ್ಕೆ ಚಿಕಲೋಕ ಎಂದು ಹೆಸರಿಟ್ಟಿದ್ದಾರೆ.

ರೆಸ್ಟೋರೆಂಟ್ ವಿಡಿಯೋವನ್ನು ಸನ್ನಿ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದು, ಟಿವಿ ಕಲಾವಿದರು, ಸಿನಿಮಾ ಜಗತ್ತಿನಲ್ಲಿ ಇರೋರು, ಒಂದೇ ಕೆಲಸಕ್ಕೆ ಸೀಮಿತವಾಗಬೇಡಿ ಎಂದು ಸಲಹೆಯನ್ನೂ ನೀಡಿದ್ದಾರೆ. ನಮ್ಮನ್ನು ನಾವು ವಿಸ್ತರಿಸಿಕೊಳ್ಳುತ್ತಾ ಹೋಗಬೇಕು ಎಂದು ಸನ್ನಿ ಹೇಳಿದ್ದಾರೆ.

ಕೇವಲ ಉದ್ಯಮದಲ್ಲಿ ಮಾತ್ರ ಸನ್ನಿ ಲಿಯೋನ್ ತೊಡಗಿಕೊಂಡಿಲ್ಲ. ಸಾಮಾಜಿಕ ಕಾರ್ಯಗಳಿಗಾಗಿಯೇ ಟ್ರಸ್ಟ್ ಅನ್ನು ಅವರು ಶುರು ಮಾಡಿದ್ದಾರೆ. ಅದರ ಮೂಲಕ ಸಾಕಷ್ಟು ಸಮಾಜಮುಖಿ ಕೆಲಸಗಳನ್ನು ಅವರು ಮಾಡಿದ್ದಾರೆ.





# ಮಿಜೋರಾಂನಲ್ಲಿ ಮಗುಚಿಬಿದ್ದ ವಿಮಾನ

**ಮಿಜೋರಾಂ:** ಮಯನ್ಮಾರ್ ಮಿಲಿಟರಿ ಪಡೆಗೆ ಸೇರಿದ ವಿಮಾನವೊಂದು ಟೇಕಾಫ್ ವೇಳೆಯಲ್ಲಿ ಆಯತಪ್ಪಿ ಮಗುಚಿಬಿದ್ದಿರುವ ಘಟನೆ ಮಿಜೋರಾಂನಲ್ಲಿ ಮಂಗಳವಾರ ಬೆಳಗ್ಗೆ ನಡೆದಿದೆ. ಮಯನ್ಮಾರ್ ಸೇನೆಯ ಯೋಧರನ್ನು ಕರೆದೊಯ್ಯಲು ಈ ವಿಮಾನವನ್ನು ಬಳಸಲಾಗುತ್ತಿತ್ತು.

ಒಟ್ಟು 14 ಮಂದಿ ಪ್ರಯಾಣಿಸುತ್ತಿದ್ದ ಈ ವಿಮಾನದಲ್ಲಿ ನಾಲ್ವರು ತೀವ್ರವಾಗಿ ಗಾಯಗೊಂಡಿದ್ದು, ಅವರ ಸ್ಥಿತಿ ಗಂಭಿರವಾಗಿದೆ.

ಲೆಂಗ್ಪೋಯ್ ರನ್ ವೇನಲ್ಲಿ ಈ ಘಟನೆ ನಡೆದಿದ್ದು, ವಿಮಾನ ಇಳಿಸಲು ಮತ್ತು ಟೇಕಾಫ್ ಮಾಡಲು ಕಷ್ಟವಾಗಿರುವ ಟೇಬಲ್ ಟಾಪ್ ರನ್ ವೇಗಳಲ್ಲಿ ಇದೂ ಸಹ ಒಂದಾಗಿದೆ. ಸ್ಥಳೀಯ ರಕ್ಷಣಾ ಪಡೆಗಳು ಅಪಘಾತ ನಡೆದ ಸ್ಥಳಕ್ಕೆ ಧಾವಿಸಿದ್ದು, ರಕ್ಷಣಾ ಕಾರ್ಯದಲ್ಲಿ ನಿರತವಾಗಿದೆ.

# ಅಂತರರಾಷ್ಟ್ರೀಯ ವಿದ್ಯಾರ್ಥಿಗಳಿಗೆ ಪ್ರವೇಶದ ಮಿತಿಯನ್ನು ಪ್ರಕಟಿಸಿದ ಕೆನಡಾ

**ಕೆನಡಾ:** ಕೆನಡಾ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ದೇಶಕ್ಕೆ ತೆರಳುವುದನ್ನು ನಿರ್ಬಂಧಿಸುವ ತನ್ನ ಯೋಜನೆಯನ್ನು ಪ್ರಕಟಿಸಿದೆ. ವಲಸೆ, ನಿರಾಶ್ರಿತರು ಮತ್ತು ಪೌರತ್ವ ಕೆನಡಾ ಪ್ರಕಾರ, 2024 ರ ಮಿತಿಯು ಸರಿಸುಮಾರು 360,000 ಅನುಮೋದಿತ ಅಧ್ಯಯನ ಪರವಾನಗಿಗಳಿಗೆ ಕಾರಣವಾಗುತ್ತದೆ, 2023 ರಿಂದ 35% ಇಳಿಕೆ ಆಗಲಿದೆ.

ಜನಸಂಖ್ಯೆಯ ಆಧಾರದ ಮೇಲೆ ಕ್ಯಾಪ್ಗಳನ್ನು ತೂಕ ಮಾಡಲಾಗುವುದು ಮತ್ತು ಅಂತರರಾಷ್ಟ್ರೀಯ ವಿದ್ಯಾರ್ಥಿ ಜನಸಂಖ್ಯೆಯು ಹೆಚ್ಚು ಸಮರ್ಥನೀಯವಲ್ಲದ ಬೆಳವಣಿಗೆಯನ್ನು ಕಂಡ ಪ್ರಾಂತ್ಯಗಳಲ್ಲಿ ಗಮನಾರ್ಹ ಇಳಿಕೆಗೆ ಕಾರಣವಾಗುತ್ತದೆ ಎಂದು ಇಲಾಖೆ ಹೇಳುತ್ತದೆ.

ಕ್ಯಾಪ್ಗಳು ಪ್ರಸ್ತುತ ಸ್ಟಡಿ ಪರ್ಮಿಟ್ ಹೊಂದಿರುವವರು ಅಥವಾ ಸ್ಟಡಿ ಪರ್ಮಿಟ್ ನವೀಕರಣಗಳ ಮೇಲೆ ಪರಿಣಾಮ ಬೀರುವುದಿಲ್ಲ ಮತ್ತು ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿಗಳನ್ನು ಒಳಗೊಂಡಿರುವುದಿಲ್ಲ.

IRCC ಪ್ರಕಾರ, ಐಆರ್ಸಿಸಿಗೆ ಸಲ್ಲಿಸಿದ ಪ್ರತಿ ಅಧ್ಯಯನ ಪರವಾನಗಿ ಅರ್ಜಿಗೆ ಪ್ರಾಂತ್ಯ ಅಥವಾ ಪ್ರಾಂತ್ಯದಿಂದ (ಪಿಟಿ) ದೃಢೀಕರಣ ಪತ್ರದ ಅಗತ್ಯವಿರುತ್ತದೆ.

ಕ್ಯಾಪ್ ಅನ್ನು 2025 ರಲ್ಲಿ ಮರು ಮೌಲ್ಯಮಾಪನ ಮಾಡಲಾಗುತ್ತದೆ.

IRCC ಪೋಸ್ಟ್ ಗ್ರಾಜುಯೇಷನ್ ವರ್ಕ್ ಪರ್ಮಿಟ್ ಅರ್ಹತಾ ಮಾನದಂಡಗಳಿಗೆ ಬದಲಾವಣೆಗಳನ್ನು ಘೋಷಿಸಿದೆ.

ಸೆಪ್ಟೆಂಬರ್ 2024 ರಿಂದ, ಪಠ್ಯಕ್ರಮದ ಪರವಾನಗಿ ವ್ಯವಸ್ಥೆಯ ಭಾಗವಾಗಿರುವ ಅಧ್ಯಯನ ಕಾರ್ಯಕ್ರಮವನ್ನು ಪ್ರಾರಂಭಿಸುವ ಅಂತರರಾಷ್ಟ್ರೀಯ ವಿದ್ಯಾರ್ಥಿಗಳು ಇನ್ನು ಮುಂದೆ PGWP ಗೆ ಅರ್ಹರಾಗಿರುವುದಿಲ್ಲ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ತ.ರಾ.ಸು 'ಹಂಸಗೀತೆ'ಗೆ ಹೆಜ್ಜೆ ಹಾಕಲಿದ್ದಾರೆ ನಟಿ ಭಾವನಾ



ಚಂದ್ರಮುಖಿ ಪ್ರಾಣಸಖಿ ಸೇರಿದಂತೆ ಅನೇಕ ಚಿತ್ರಗಳ ಮೂಲಕ ಕನ್ನಡಿಗರ ಮನಗೆದ್ದಿರುವ ನಟಿ ಭಾವನಾ ರಾಮಣ್ಣ ಅತ್ಯುತ್ತಮ ನೃತ್ಯಗಾರ್ತಿಯೂ ಹೌದು. ಕನ್ನಡದ ಜನಪ್ರಿಯ ಕಾದಂಬರಿಕಾರ ತ.ರಾ.ಸುಬ್ಬರಾಯರ 'ಹಂಸಗೀತೆ' ಕಾದಂಬರಿಯನ್ನು ಜಿ.ವಿ.ಅಯ್ಯರ್ ಅವರು ಚಲನಚಿತ್ರವಾಗಿಸಿದ್ದರು. ಈಗ ನಟಿ ಭಾವನ ಹಂಸಗೀತೆಯನ್ನು ನೃತ್ಯ ರೂಪಕವಾಗಿ ತರುತ್ತಿದ್ದಾರೆ. ಈ ಕುರಿತು ಹೆಚ್ಚಿನ ಮಾಹಿತಿ ನೀಡಲು ಭಾವನ ರಾಮಣ್ಣ ತಮ್ಮ ಮನೆಯಲ್ಲೇ ಪತ್ರಿಕಾಗೋಷ್ಟಿ ಆಯೋಜಿಸಿದ್ದರು.ನಟಿ ಭಾವನಾ, ಅವರ ಸಹೋದರ ಅರವಿಂದ್ ರಾಮಣ್ಣ, ಸಹೋದರಿ ಶ್ಯಾಲಿನಿ ರಾಮಣ್ಣ ಹಾಗೂ ಬರಹಗಾರ ವಿಕ್ರಂ ಹತ್ವಾರ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ತಾವು ಚಿತ್ರರಂಗಕ್ಕೆ ಬರಲು ಕಾರಣರಾದವರನ್ನು ನೆನೆದು ಭಾವುಕರಾಗಿ ಮಾತು ಆರಂಭಿಸಿದ ಭಾವನ, ಹಿಂದೆ ತಮ್ಮ ಹೋಮ್ ಟೌನ್ ಬ್ಯಾನರ್ ನಲ್ಲಿ ನಿರುತ್ತರ ಚಿತ್ರವನ್ನು ನಿರ್ಮಿಸಿದ್ದನ್ನು ನೆನಪಿಸಿಕೊಂಡರು. ಮುಂದೆ ಕೂಡ ಚಿತ್ರ ನಿರ್ಮಿಸುವ ಆಸೆ ಇದೆ ಎಂದರು. ಹೂವು ಫೌಂಡೇಶನ್ ಮೂಲಕ ಅನೇಕ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿರುವದಾಗಿಯೂ ಭಾವನ ಹೇಳಿದರು. ನಂತರ ಹಂಸಗೀತೆ ನೃತ್ಯ ಕಾವ್ಯದ ಬಗ್ಗೆ ಭಾವನ ಮಾಹಿತಿ ನೀಡಿದರು. ತ.ರಾ.ಸು ಅವರ ಹಂಸಗೀತೆಯ ಬಗ್ಗೆ ಇವತ್ತಿನ ಪೀಳಿಗೆಗೆ ತಿಳಿಸಿಕೊಡಬೇಕು. ಹಾಗಾಗಿ ಈ ಪ್ರಯತ್ನ ಮಾಡುತ್ತಿದ್ದೇನೆ. ಜನವರಿ 30ರ ಸಂಜೆ 6.30ಕ್ಕೆ ಚೌಡಯ್ಯ ಮೆಮೋರಿಯಲ್ ಹಾಲ್ ನಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ವೀಣಾ ಮೂರ್ತಿ ಅವರ ನೃತ್ಯ ನಿರ್ದೇಶನದಲ್ಲಿ ಈ ನೃತ್ಯಕಾವ್ಯ ಮೂಡಿಬರಲಿದೆ.

ಭಾವನ ಅವರೆ ಒಂದುವರೆ ಗಂಟೆಗಳ ಕಾಲ ನಡೆಸಿಕೊಡುವ ಏಕ ವ್ಯಕ್ತಿ ಪ್ರದರ್ಶನದ ಈ ನೃತ್ಯ ಕಾವ್ಯದಲ್ಲಿ ಹಾಡು, ನೃತ್ಯ ಹಾಗೂ ಸಂಭಾಷಣೆಗಳು ಇರುತ್ತವೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಂತ್ರಿಗಳಾದ ಡಾ.ಜಿ.ಪರಮೇಶ್ವರ್, ಎಚ್.ಸಿ.ಮಹದೇವಪ್ಪ ಅವರು ಇದರಲ್ಲಿ ಪಾಲ್ಗೊಳ್ಳುತ್ತಿರುವುದು ವಿಶೇಷ.

ಚಿತ್ರರಂಗದಿಂದ ಗುರುಗಳಾದ ಡಾ.ಬರಗೂರು ರಾಮಚಂದ್ರಪ್ಪ, ಚಾಲೆಂಜಿಂಗ್ ಸ್ಟಾರ್ ದರ್ಶನ್ ಹಾಗೂ ತಾರಾ ಅನುರಾಧ ಅವರನ್ನೂ ಆಹ್ವಾನಿಸಿರುವುದಾಗಿ ಭಾವನಾ ರಾಮಣ್ಣ ತಿಳಿಸಿದ್ದಾರೆ. ಇದು ಮೊದಲ ಪ್ರಯತ್ನ. ಮುಂದೆ ಬೇರೆಬೇರೆ ಕಡೆಗಳಲ್ಲೂ ಈ ನೃತ್ಯಕಾವ್ಯವನ್ನು ಮಾಡುವ ಯೋಜನೆಯಿದೆ ಎನ್ನುತ್ತಾರೆ ಭಾವನಾ ರಾಮಣ್ಣ.

## ವಿನಯ್ ರಾಜ್‌ಕುಮಾರ್, ಸ್ವಾತಿಷ್ಠ ಕೃಷ್ಣನ್ ನಟನೆಯ ಚಿತ್ರಕ್ಕೆ

# ವಿಜಯ್ ಸೇತುಪತಿ ಸಾಥ್

ಸಿಂಪಲ್ ಸುನಿ- ವಿನಯ್ ರಾಜ್ ಕುಮಾರ್ ಸಂಗಮದ 'ಒಂದು ಸರಳ ಪ್ರೇಮಕಥೆ' ಸಿನಿಮಾ ಸದ್ಯದಲ್ಲೇ ತೆರೆ ಕಾಣಲಿದೆ. ಇದೀಗ ನಾಯಕಿ ಸ್ವಾತಿಷ್ಠ ಕೃಷ್ಣನ್ ಕ್ಯಾರೆಕ್ಟರ್ ಟೀಸರ್ ರಿಲೀಸ್ ಮಾಡಲಾಗಿದೆ. ದಕ್ಷಿಣ ಚಿತ್ರರಂಗದ ಖ್ಯಾತ ನಟ ವಿಜಯ್ ಸೇತುಪತಿ ಕ್ಯಾರೆಕ್ಟರ್ ಟೀಸರ್ ಅನಾವರಣ ಮಾಡಿ ಇಡೀ ತಂಡಕ್ಕೆ ಶುಭ ಕೋರಿದ್ದಾರೆ.

ಸ್ವಾತಿಷ್ಠ ಕೃಷ್ಣನ್ ಅನುರಾಗ ಎಂಬ ಪತ್ರಕರ್ತೆ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಯಾರಿಗೂ ಯಾವುದಕ್ಕೂ ಜಗ್ಗದೇ ಧೈರ್ಯವಾಗಿ ಮುನ್ನುಗ್ಗುವ ಜರ್ನಲಿಸ್ಟ್ ಆಗಿ ನಟಿಸಿದ್ದಾರೆ. ಕಮಲ್ ಹಾಸನ್ ನಟನೆಯ 'ವಿಕ್ರಮ್' ಸೇರಿದಂತೆ ಒಂದಷ್ಟು ತಮಿಳು ಸಿನಿಮಾದಲ್ಲಿ ನಟಿಸಿರುವ ಸ್ವಾತಿಷ್ಠಗೆ 'ಒಂದು ಸರಳ ಪ್ರೇಮಕಥೆ' ಚೊಚ್ಚಲ ಕನ್ನಡ ಸಿನಿಮಾವಾಗಿದೆ.



ಇದೇ ಮೊದಲ ಬಾರಿಗೆ ದೊಡ್ಮನೆಯ ಹೀರೋ ವಿನಯ್ ರಾಜ್ ಕುಮಾರ್‌ಗೆ ಸಿಂಪಲ್ ಸುನಿ ನಿರ್ದೇಶನ ಮಾಡಿದ್ದಾರೆ. ವಿನಯ್ ನಾಯಕನಾಗಿ ನಟಿಸಿರುವ ಚಿತ್ರಕ್ಕೆ ಸ್ವಾತಿಷ್ಠ ಕೃಷ್ಣನ್, ರಾಧಾ ಕೃಷ್ಣ ಧಾರಾವಾಹಿ ಖ್ಯಾತಿಯ ಮಲ್ಲಿಕಾ ಸಿಂಗ್ ಎಂಬ ಇಬ್ಬರು ಚೆಲುವೆಯರ ನಾಯಕಿಯರಾಗಿ ನಟಿಸಿದ್ದಾರೆ.

ರಾಘವೇಂದ್ರ ರಾಜ್ ಕುಮಾರ್ ಸ್ಪೆಷಲ್ ರೋಲ್‌ನಲ್ಲಿ ನಟಿಸಿದ್ದಾರೆ. ರಾಜೇಶ್ ನಟರಂಗ, ಅರುಣಾ ಬಾಲರಾಜ್, ಸಾಧುಕೋಕಿಲ ಮುಂತಾದವರು ತಾರಾಬಳಗದಲ್ಲಿದ್ದಾರೆ. ಆದಿ ಸಂಕಲನವಿದ್ದು, ಹಾಡುಗಳಿಗೆ ವೀರ್ ಸಮರ್ಥ್ ಸಂಗೀತ ನೀಡುತ್ತಿದ್ದು, ಕಾರ್ತಿಕ್ ಕ್ಯಾಮೆರಾ ಹಿಡಿದಿದ್ದಾರೆ. ಅಂದಹಾಗೆ, ಈ ಸಿನಿಮಾಗೆ ಮೈಸೂರು ರಮೇಶ್ ನಿರ್ಮಾಣ ಮಾಡಿದ್ದಾರೆ.



# 'ಕಬ್ಜ2' ಬರಲ್ಲ ಎಂದವರಿಗೆ ಉತ್ತರ ಕೊಟ್ಟ ಚಂದ್ರು

ಆರ್ . ಚಂದ್ರು ನಿರ್ದೇಶನದ, ಉಪೇಂದ್ರ ನಟನೆಯ 'ಕಬ್ಜ' ಸಿನಿಮಾ ಟೀಸರ್ ಹಾಗೂ ಟ್ರೇಲರ್ ಮೂಲಕ ಸಾಕಷ್ಟು ನಿರೀಕ್ಷೆ ಹುಟ್ಟುಹಾಕಿತ್ತು. ಸಿನಿಮಾ ರಿಲೀಸ್ ಆದ ಬಳಿಕ ಅನೇಕರಿಗೆ ಈ ಸಿನಿಮಾ ಇಷ್ಟ ಆಗಲೇ ಇಲ್ಲ. ಆದರೆ, ಚಿತ್ರತಂಡ ಹೇಳೋದೇ ಬೇರೆ. ಸಿನಿಮಾ ಗೆಲುವು ಕಂಡಿದೆ ಎಂದು ತಂಡ ಬೀಗಿದೆ. ಈ ಚಿತ್ರಕ್ಕೆ ಸೀಕ್ವೆಲ್ ಯಾವುದೇ ಕಾರಣಕ್ಕೂ ಸಿದ್ಧವಾಗುವುದಿಲ್ಲ ಎಂದು ಎಲ್ಲರೂ ಅಂದುಕೊಂಡಿದ್ದರು. ಆದರೆ, ಆ ರೀತಿ ಆಗಿಲ್ಲ. ಜನವರಿ 23ರಂದು ಚಂದ್ರು ಅವರು ಒಟ್ಟೊಟ್ಟಿಗೆ ಐದು ಸಿನಿಮಾ ಘೋಷಣೆ ಮಾಡಿದ್ದಾರೆ. ಅದರಲ್ಲಿ 'ಕಬ್ಜ 2' ಸಿನಿಮಾ ಕೂಡ ಇದೆ.



ಆರ್. ಚಂದ್ರು ಅವರು ಮಂಗಳವಾರ ಒಟ್ಟೊಟ್ಟಿಗೆ ಐದು ಸಿನಿಮಾ ಘೋಷಣೆ ಮಾಡಿದ್ದಾರೆ. ಈ ಕಾರ್ಯಕ್ರಮಕ್ಕೆ ಸಿದ್ದರಾಮಯ್ಯ ಅವರು ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಈ ವೇಳೆ 'ಕಬ್ಜ' ನಾಯಕ ಉಪೇಂದ್ರ, ಬಾಲಿವುಡ್ ನಿರ್ಮಾಪಕ ಆನಂದ್ ಪಂಡಿತ್ ಮೊದಲಾದವರು ಇದ್ದರು. ಅವರು 'ಕಬ್ಜ 2' ಅನೌನ್ಸ್ ಮಾಡಿ ಅನೇಕರಿಗೆ ಅಚ್ಚರಿ ಮೂಡಿಸಿದ್ದಾರೆ.

'ಕಬ್ಜ' ಸಿನಿಮಾದ ಕಲೆಕ್ಷನ್ ಫೇಕ್ ಎಂದು ಅನೇಕರು ಹೇಳಿದ್ದರು. ಆದರೆ, ಕಲೆಕ್ಷನ್ ಆಗಿದ್ದು ನಿಜ ಎನ್ನುತ್ತಾರೆ ಆರ್ . ಚಂದ್ರು. 'ಕಬ್ಜ ಸಿನಿಮಾದಿಂದ ನಾನು ಸರ್ಕಾರಕ್ಕೆ 20 ಕೋಟಿ ರೂಪಾಯಿ ಟ್ಯಾಕ್ಸ್ ಕಟ್ಟಿದ್ದೀನಿ. ಇದನ್ನು ಓಪನ್ ಆಗಿ ಹೇಳಿಕೊಳ್ಳುತ್ತಿದ್ದೇನೆ. ಎಷ್ಟು ಜನರು ಇದರಿಂದ ಊಟ ಮಾಡಿರ್ತಾರೆ. ಬಾಯಿ ಇದೆ ಎಂದು ಮಾತನಾಡಿದರೆ ಐದು ಸಿನಿಮಾ, ಹತ್ತು ಸಿನಿಮಾ ಆಗಲ್ಲ' ಎಂದು ಅವರು ನೇರವಾಗಿ ಹೇಳಿದ್ದಾರೆ.

'ಕಬ್ಜ' ಸಿನಿಮಾ ಅಂದುಕೊಂಡ ರೀತಿಯಲ್ಲಿ ಮೂಡಿ ಬರಲಿಲ್ಲ ಎಂಬುದು ಅನೇಕರ ಆರೋಪ. ಚಂದ್ರು ಅವರನ್ನು ಟ್ರೋಲ್ ಮಾಡಲಾಯಿತು. ಈ ಆರೋಪಕ್ಕೆ ಅವರು 'ಕಬ್ಜ 2' ಅನೌನ್ಸ್ ಮಾಡುವ ಮೂಲಕ ಉತ್ತರ ನೀಡಿದ್ದಾರೆ. ಮೊದಲ ಭಾಗದಲ್ಲಿ ಉಪೇಂದ್ರ ಹಾಗೂ ಶ್ರೀಯಾ ಶರಣ್ ಪಾತ್ರ ಹೈಲೈಟ್ ಆಗಿತ್ತು. ಪೊಲೀಸ್ ಪಾತ್ರದಲ್ಲಿ ಸುದೀಪ್ ಕಾಣಿಸಿಕೊಂಡಿದ್ದರು. ಶಿವರಾಜ್ ಕುಮಾರ್ ಎಂಟ್ರಿ ಕೊನೆಯಲ್ಲಿ ಆಗಿತ್ತು. ಈಗ ಸೀಕ್ವೆಲ್ ನಲ್ಲಿ ಶಿವಣ್ಣನ ಪಾತ್ರ ಹೈಲೈಟ್ ಆಗಲಿದೆಯೇ ಎನ್ನುವ ಕುತೂಹಲ ಮೂಡಿದೆ.

'ಕಬ್ಜ 2' ಮಾತ್ರವಲ್ಲದೆ 'ಡಾಗ್', 'ಫಾದರ್', 'ಶ್ರೀ ರಾಮ ಬಾಣಂ', 'ಪಿಓಕೆ' ಹೆಸರಿನ ಸಿನಿಮಾಗಳನ್ನೂ ಅವರು ಘೋಷಣೆ ಮಾಡಿದ್ದಾರೆ. ಈ ಸಿನಿಮಾಗಳ ಬಗ್ಗೆಯೂ ಸಾಕಷ್ಟು ನಿರೀಕ್ಷೆ ಮೂಡಿದೆ. ಎಲ್ಲಾ ಸಿನಿಮಾಗಳಿಗೂ ಅವರು ನಿರ್ದೇಶನ ಮಾಡುತ್ತಿಲ್ಲ. ಕೆಲ ಸಿನಿಮಾಗಳನ್ನು ಅವರು ನಿರ್ಮಾಣ ಮಾಡುತ್ತಿದ್ದಾರೆ.

# ರಿಲೀಸ್ ಗೂ ಮೊದಲೇ 'ಫೈಟರ್ 'ಗೆ ಶಾಕ್

ಹೃತಿಕ್ ರೋಷನ್ ಹಾಗೂ ದೀಪಿಕಾ ಪಡುಕೋಣೆ ನಟನೆಯ 'ಫೈಟರ್' ಸಿನಿಮಾ ಜನವರಿ 25ರಂದು ರಿಲೀಸ್ ಆಗಲಿದೆ. ಈ ಸಿನಿಮಾ ಬಗ್ಗೆ ಅಭಿಮಾನಿಗಳಲ್ಲಿ ಸಾಕಷ್ಟು ನಿರೀಕ್ಷೆ ಇದೆ. ಈ ಚಿತ್ರದಲ್ಲಿ ಸಾಕಷ್ಟು ಆ ಯಕ್ಷನ್ ದೃಶ್ಯಗಳು ಇರಲಿವೆ ಎಂಬುದಕ್ಕೆ ಟ್ರೇಲರ್ ನಲ್ಲಿ ಸಾಕ್ಷಿ ಸಿಕ್ಕಿದೆ. ಹಾಗಂತ ಈ ಸಿನಿಮಾದಲ್ಲಿ ಇರೋದು ಭೂಮಿಯಲ್ಲಿ ನಡೆಯೋ ಕಾದಾಟ ಇಲ್ಲ. ಫೈಟರ್ ಜೆಟ್ ಗಳ ಮೂಲಕ ಆಗಸದಲ್ಲಿ ಕಿತ್ತಾಡಿಕೊಳ್ಳುತ್ತಾರೆ. ಈ ಸಿನಿಮಾಗೆ ಹಿನ್ನಡೆ ಆಗಿದೆ. ಸಿದ್ದಾರ್ಥ್ ಆನಂದ್ ನಟನೆಯ ಈ ಸಿನಿಮಾ ಯುಎಇ ಹೊರತುಪಡಿಸಿ ಗಲ್ಫ್ ರಾಷ್ಟ್ರಗಳಲ್ಲಿ ಬ್ಯಾನ್ ಆಗಿದೆ.




ನಿರ್ಮಾಪಕ ಹಾಗೂ ಸಿನಿಮಾ ಎಕ್ಸ್‌ಪರ್ಟ್ ಗಿರೀಶ್ ಜೋಹರ್ ಅವರು ಈ ಬಗ್ಗೆ ಬರೆದುಕೊಂಡಿದ್ದಾರೆ. ಸಿನಿಮಾದಲ್ಲಿ ಆ ಯಕ್ಷೇಪಾರ್ಹ ವಿಚಾರ ಇರುವ ಕಾರಣದಿಂದಲೇ ರಿಲೀಸ್ ಗೆ ತಡೆ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಯಾವುದನ್ನು ಅಲ್ಲಿನ ಸೆನ್ಸಾರ್ ಮಂಡಳಿಯವರು ಆಕ್ಷೇಪಾರ್ಹ ಎಂದು ಪರಿಗಣಿಸಿದ್ದಾರೆ ಎಂಬುದು ಇನ್ನಷ್ಟೇ ತಿಳಿಯಬೇಕಿದೆ.

ಸಿದ್ದಾರ್ಥ್ ಆನಂದ್ ಅವರು 'ಫೈಟರ್' ಸಿನಿಮಾ ನಿರ್ದೇಶನ ಮಾಡಿದ್ದಾರೆ. ಈ ಚಿತ್ರವನ್ನು 'ವಯಕಾಮ್ 18 ಸ್ಟುಡಿಯೋಸ್' ಹಾಗೂ 'ಮಾರ್ಫ್ಲಿಕ್ಸ್ ಪಿಕ್ಚರ್ಸ್' ನಿರ್ಮಾಣ ಮಾಡಿದೆ. ಈ ಸಿನಿಮಾದ ಟ್ರೇಲರ್ ಇತ್ತೀಚೆಗೆ ರಿಲೀಸ್ ಆಗಿ ಸದ್ದು ಮಾಡಿತ್ತು. ಈಗ ರಿಲೀಸ್ ಗೆ ಒಂದು ದಿನ ಇರುವಾಗ ಸಿನಿಮಾ ಮೇಲೆ ಬ್ಯಾನ್ ಹೇರಲಾಗಿದೆ.

'ಫೈಟರ್' ಚಿತ್ರಕ್ಕೆ ಭಾರತದಲ್ಲಿ ಪ್ರಮಾಣ ಪತ್ರ ನೀಡಲಾಗಿದೆ. ಸಿನಿಮಾಗೆ ಎರಡು ಕಡೆ ಕತ್ತರಿ ಹಾಕುವಂತೆ ಸೂಚಿಸಿದೆ. ಫೈಟರ್ ಸಿನಿಮಾದ ಅವಧಿ 2 ಗಂಟೆ 46 ನಿಮಿಷ ಇದೆ. ಈ ಚಿತ್ರ 3ಡಿಯಲ್ಲೂ ಮೂಡಿ ಬಂದಿದೆ ಅನ್ನೋದು ವಿಶೇಷ. ಈ ಚಿತ್ರವನ್ನು ಕಣ್ತುಂಬಿಕೊಳ್ಳಲು ಕಾದಿದ್ದಾರೆ.

# ಭಾರತ-ಇಂಗ್ಲೆಂಡ್ ಟೆಸ್ಟ್ ಪಂದ್ಯ

ಭಾರತ ಮತ್ತು ಇಂಗ್ಲೆಂಡ್ ಬಹುನಿರೀಕ್ಷಿತ ನಡುವಣ ಟೆಸ್ಟ್ ಸರಣಿಗೆ ವೇದಿಕೆ ಸಿದ್ಧವಾಗಿದೆ. ನಾಳೆಯಿಂದ (ಜ.25) ಶುರುವಾಗಲಿರುವ ಈ ಸರಣಿಯ ಮೊದಲ ಪಂದ್ಯಕ್ಕೆ ಹೈದರಾಬಾದ್ ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ಆತಿಥ್ಯವಹಿಸಲಿದೆ. ಇದೀಗ ಮೊದಲ ಪಂದ್ಯದ ಸೆಷನ್ ಅನ್ನು ನಿಗದಿಪಡಿಸಲಾಗಿದ್ದು, ಅದರಂತೆ ಪಂದ್ಯವು ಬೆಳಿಗ್ಗೆ 9.30 ರಿಂದ ಶುರುವಾಗಲಿದೆ.

ಈ ಸರಣಿಯ ಮೊದಲೆರಡು ಪಂದ್ಯಗಳಿಗೆ ಮಾತ್ರ ಭಾರತ ತಂಡವನ್ನು ಘೋಷಿಸಲಾಗಿದೆ. ಈ ತಂಡದಲ್ಲಿ ಹಿರಿಯ ಆಟಗಾರರಿಗೆ ಮಣೆ ಹಾಕಿಲ್ಲ ಎಂಬುದು ವಿಶೇಷ. ಅಂದರೆ ಭಾರತ ತಂಡದ ಟೆಸ್ಟ್ ಸ್ಪೆಷಲಿಸ್ಟ್ ಎಂದೇ ಖ್ಯಾತರಾಗಿರುವ ಚೇತೇಶ್ವರ ಪೂಜಾರ ಹಾಗೂ ಅಜಿಂಕ್ಯ ರಹಾನೆ ಅವರನ್ನು ಮೊದಲೆರಡು ಪಂದ್ಯಗಳಿಂದ ಕೈ ಬಿಡಲಾಗಿದೆ. ಅಲ್ಲದೆ ತಂಡದಲ್ಲಿ ಯುವ ಆಟಗಾರರಿಗೆ ಮಣೆ ಹಾಕಲಾಗಿದೆ.



ಈ ಸರಣಿಯ ಮೊದಲ ಎರಡು ಪಂದ್ಯಗಳಲ್ಲಿ ವಿರಾಟ್ ಕೊಹ್ಲಿ ಕಾಣಿಸಿಕೊಳ್ಳುವುದಿಲ್ಲ. ವೈಯುಕ್ತಿಕ ಕಾರಣಗಳ ಹಿನ್ನಲೆಯಲ್ಲಿ ಅವರು ತಂಡದಿಂದ ಹಿಂದೆ ಸರಿದಿದ್ದಾರೆ. ಇದೀಗ ಅವರ ಬದಲಿ ಆಟಗಾರನಾಗಿ ರಜತ್ ಪಾಟಿದಾರ್ ಅವರನ್ನು ಆಯ್ಕೆ ಮಾಡಲಾಗಿದೆ. ಪ್ರಸ್ತುತ ಭಾರತ ಎ ತಂಡದ ಭಾಗವಾಗಿರುವ ರಜತ್ ಪಾಟಿದಾರ್ ಶೀಘ್ರದಲ್ಲೇ ಟೀಮ್ ಇಂಡಿಯಾವನ್ನು ಕೂಡಿಕೊಳ್ಳಲಿದ್ದಾರೆ.

ಭಾರತ ಮತ್ತು ಇಂಗ್ಲೆಂಡ್ ನಡುವಣ ಮೊದಲ ಟೆಸ್ಟ್ ಪಂದ್ಯವು ಹೈದಾರಾಬಾದ್ ನಲ್ಲಿ ನಡೆಯಲಿದೆ. ರಾಜೀವ್ ಗಾಂಧಿ ಇಂಟರ್ ನ್ಯಾಷನಲ್ ಸ್ಟೇಡಿಯಂನಲ್ಲಿ ಜರುಗಲಿರುವ ಈ ಪಂದ್ಯವು ಬೆಳಿಗ್ಗೆ 9.30 ರಿಂದ ಶುರುವಾಗಲಿದೆ.

**ಭಾರತ ಟೆಸ್ಟ್ ತಂಡ (ಮೊದಲೆರಡು ಪಂದ್ಯಗಳಿಗೆ):** ರೋಹಿತ್ ಶರ್ಮಾ (ನಾಯಕ ), ಶುಭ್‌ಮನ್ ಗಿಲ್, ಯಶಸ್ವಿ ಜೈಸ್ವಾಲ್, ರಜತ್ ಪಾಟಿದಾರ್, ಶ್ರೇಯಸ್ ಅಯ್ಯರ್, ಕೆಎಲ್ ರಾಹುಲ್ (ವಿಕೆಟ್ ಕೀಪರ್), ಕೆಎಸ್ ಭರತ್ (ವಿಕೆಟ್ ಕೀಪರ್), ಧ್ರುವ್ ಜುರೇಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಅಕ್ಷರ್ ಪಟೇಲ್, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ಮುಕೇಶ್ ಕುಮಾರ್, ಜಸ್ಪ್ರಿತ್ ಬುಮ್ರಾ (ಉಪನಾಯಕ), ಅವೇಶ್ ಖಾನ್.

# ಮೋದಿ ಹಿಂದೂ ಸಂಪ್ರದಾಯ ಮುರಿದಿದ್ದಾರೆ

**ಗದಗ:** ಪ್ರಧಾನಿ ಮೋದಿ ಅವರು ನಿನ್ನೆ (ಜನವರಿ 22) ಅಯೊಧ್ಯೆಯ ರಾಮಮಂದಿರದಲ್ಲಿ ಬಾಲ ರಾಮನ ಪ್ರಾಣ ಪ್ರತಿಷ್ಠಾಪನೆಯನ್ನ ನೆರವೇರಿಸಿದ್ದಾರೆ. ಇದಕ್ಕೆ ಇದೀಗ ರಾಜ್ಯ ಕಾಂಗ್ರೆಸ್ ನಾಯಕರು ಬೇರೆ ಬೇರೆಯದ್ದೇ ಮಾತುಗಳನ್ನಾಡಲು ಶುರು ಮಾಡಿದ್ದಾರೆ. ಮೋದಿ ಉಪವಾಸ ವ್ರತ ಮಾಡಿದ್ದು ಅನುಮಾನ ಎಂದು ಮಾಜಿ ಸಿಎಂ ವೀರಪ್ಪ ಮೊಯ್ಲಿ ಹೇಳಿಕೆ ನಿಡಿದ್ದ ಬೆನ್ನಲ್ಲೇ ಇದೀಗ ಕಾಂಗ್ರೆಸ್ ಶಾಸಕ ಜಿ.ಎಸ್.ಪಾಟೀಲ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಹಿಂದೂ ಸಂಪ್ರದಾಯ ಮುರಿದಿದ್ದಾರೆ ಎಂದು ಆರೋಪಿಸಿದ್ದಾರೆ.

ಗದಗದಲ್ಲಿ ಮಾತನಾಡಿರುವ ಕಾಂಗ್ರೆಸ್ ಶಾಸಕ ಜಿ.ಎಸ್.ಪಾಟೀಲ್, ದೇವರ ಪ್ರತಿಷ್ಠಾಪನೆ ಮಾಡುವಾಗ ಹಿಂದೂ ಸಂಪ್ರದಾಯದಂತೆ ದಂಪತಿ ಸಮೇತ ಪೂಜೆ ಸಲ್ಲಿಸಬೇಕು. ಆದ್ರೆ, ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆ ವೇಳೆ ಮೋದಿ ಶಿಷ್ಟಾಚಾರ ಮರೆತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಸಾರ್ವಭೌಮ, ಒನ್ ಮ್ಯಾನ್ ಆರ್ಮಿ. ಸಂಪುಟದ ಸಹೋದ್ಯೋಗಿಗಳು, ಪಕ್ಷದ ನಾಯಕರು ಬೇಕಾಗಿಲ್ಲ, ಎಲ್ಲಾ ಅವರೇ ಮಾಡಿ ಹಿಂದೂ ಸಂಪ್ರದಾಯ ಮುರಿದಿದ್ದಾರೆ. ಅವರಿಗೆ ಕುಟುಂಬ ಇಲ್ಲದಿದ್ರೆ, ದಂಪತಿಯನ್ನು ಕೂರಿಸಿ ಪೂಜೆ ಮಾಡಿಸಬೇಕಿತ್ತು. ಪ್ರಧಾನಿ ನರೇಂದ್ರ ಮೋದಿ ಹಿಂದೂ ಸಂಪ್ರದಾಯ ಮುರಿದಿದ್ದಾರೆ. ಸಂಪ್ರದಾಯ ಮುರಿದಾಗ ಕೆಟ್ಟ ಘಟನೆ ಎದುರಿಸಬೇಕಾಗುತ್ತದೆ ಎಂದು ಹೇಳಿದ್ದಾರೆ. ಲೋಕಸಭೆ ಚುನಾವಣೆ ಬಂದಾಗ ಪ್ರಧಾನಿಗಳು ಭಾವನಾತ್ಮಕ ವಿಷಯ ತರುತ್ತಾರೆ. ಪ್ರಧಾನಿ ಮೋದಿಯವರು ಭಾವನಾತ್ಮಕ ವಿಷಯದ ಮೂಲಕ ಮತದಾರರನ್ನ ತಮ್ಮ ಕಡೆ ಕೊಂಡೊಯ್ಯುತ್ತಾರೆ. ಇಂತಹ ಅನೇಕ ವಿಚಾರ ದೇಶದಾದ್ಯಂತ ಕಾಣುತ್ತಿದ್ದೇವೆ ಎಂದು ಮೋದಿ ವಿರುದ್ಧ ಕಿಡಿಕಾರಿದರು.





ಮತ್ತೊಂದೆಡೆ ಚಿಕ್ಕಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ, ರಾಮಲಲ್ಲಾ ಪ್ರತಿಷ್ಠಾಪನಾ ಕಾರ್ಯಕ್ರಮದ ಅಂಗವಾಗಿ ಮೋದಿ ಉಪವಾಸ ಮಾಡಿಲ್ಲ. ಏಳನೀರು ಮಾತ್ರ ಕುಡಿದು ಉಪವಾಸ ಮಾಡಿದ್ರೆ, ಒಂದೆರೆಡು ದಿನದಲ್ಲಿ ಮನುಷ್ಯ ಬೀಳುತ್ತಾನೆ. 11 ದಿನಗಳ ಉಪವಾಸ ಮಾಡಿದ್ರೆ ಮನುಷ್ಯ ಬದುಕಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಈ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಉಪವಾಸ ವ್ರತದ ಮೇಲೆ ಅನುಮಾನ ವ್ಯಕ್ತಪಡಿಸಿದ್ದಾರೆ.

ರಾಮಮಂದಿರದ ಕೆಲಸ ಸಂಪೂರ್ಣ ಆಗಲಿಲ್ಲ. ನರೇಂದ್ರ ಮೋದಿ ಪ್ರಾಣ ಪ್ರತಿಷ್ಟಾಪನೆ ನಡೆಸಿಕೊಟ್ಟಿದ್ದು ತಪ್ಪು. ನರೇಂದ್ರ ಮೋದಿ ಗರ್ಭಗುಡಿಗೆ ಪ್ರವೇಶ ಮಾಡಿದ್ದು ಸಹ ತಪ್ಪು. ಅವರ ಕೈಗೆ ತೀರ್ಥ ಬಾಯಿಗೆ ಕೊಡುವುದು ಇದು ಹಿಂದೂ ಧರ್ಮಕ್ಕೆ ಬಂದ ದುಸ್ಥಿತಿ ಎಂದು ಹೇಳಿದ್ದಾರೆ.

# ಐಸಿಸಿ ವರ್ಷದ ಟೆಸ್ಟ್ ತಂಡ ಪ್ರಕಟ

ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ 2023ರ ಸಾಲಿನ ಟೆಸ್ಟ್ ತಂಡವನ್ನು ಪ್ರಕಟಿಸಿದೆ. ಈ ಬಳಗದ ನಾಯಕರಾಗಿ ಆಸ್ಟ್ರೇಲಿಯಾ ತಂಡದ ಕ್ಯಾಪ್ಟನ್ ಪ್ಯಾಟ್ ಕಮಿನ್ಸ್ ಆಯ್ಕೆಯಾಗಿದ್ದಾರೆ. ಇನ್ನು ತಂಡದಲ್ಲಿ ಭಾರತದ ಇಬ್ಬರು ಆಟಗಾರರು ಮಾತ್ರ ಸ್ಥಾನ ಪಡೆದಿದ್ದಾರೆ. ಭಾರತ ಟೆಸ್ಟ್ ತಂಡದಿಂದ ರವೀಂದ್ರ ಜಡೇಜಾ ಮತ್ತು ರವಿಚಂದ್ರನ್ ಅಶ್ವಿನ್ ಐಸಿಸಿ ವರ್ಷದ ಟೀಮ್ ಗೆ ಆಯ್ಕೆಯಾಗಿದ್ದಾರೆ. ವಿಶೇಷ ಎಂದರೆ ಈ ಇಬ್ಬರು ಆಟಗಾರರು ಆಲ್ ರೌಂಡರ್ ಗಳು. ಇದರ ಹೊರತಾಗಿ ಟೀಮ್ ಇಂಡಿಯಾದ ಯಾವುದೇ ಬ್ಯಾಟರ್ ಈ ತಂಡದಲ್ಲಿ ಸ್ಥಾನ ಪಡೆದಿಲ್ಲ.

**ಐಸಿಸಿ ಪ್ಲೇಯಿಂಗ್ ಇಲೆವೆನ್:** 2023 ರಲ್ಲಿ ಟೆಸ್ಟ್ ಕ್ರಿಕೆಟ್ ನಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ 11 ಆಟಗಾರರನ್ನು ಒಳಗೊಂಡಿರುವ ಈ ತಂಡದಲ್ಲಿ ಆರಂಭಿಕರಾಗಿ ಆಸ್ಟ್ರೇಲಿಯಾದ ಉಸ್ಮಾನ್ ಖ್ವಾಜಾ ಹಾಗೂ ಶ್ರೀಲಂಕಾದ ದಿಮುತ್ ಕರುಣರತ್ನೆ ಆಯ್ಕೆಯಾಗಿದ್ದಾರೆ. ಇನ್ನು ಮೂರನೇ ಕ್ರಮಾಂಕದಲ್ಲಿ ನ್ಯೂಝಿಲೆಂಡ್ ನಾಯಕ ಕೇನ್ ವಿಲಿಯಮ್ಸನ್ ಸ್ಥಾನ ಪಡೆದಿದ್ದಾರೆ.

ಇಂಗ್ಲೆಂಡ್ ತಂಡದ ಟೆಸ್ಟ್ ಸ್ಪೆಷಲಿಸ್ಟ್ ಜೋ ರೂಟ್ ಈ ತಂಡದಲ್ಲಿ 4ನೇ ಕ್ರಮಾಂಕಕ್ಕೆ ಆಯ್ಕೆಯಾಗಿದ್ದರೆ, 5ನೇ ಕ್ರಮಾಂಕದಲ್ಲಿ ಆಸ್ಟ್ರೇಲಿಯಾದ ಸ್ಪೋಟಕ ದಾಂಡಿಗ ಟ್ರಾವಿಸ್ ಹೆಡ್ ಕಾಣಿಸಿಕೊಂಡಿದ್ದಾರೆ.



ಹಾಗೆಯೇ ವಿಕೆಟ್ ಕೀಪರ್ ಬ್ಯಾಟರ್ ಆಗಿ ತಂಡದಲ್ಲಿ ಸ್ಥಾನ ಪಡೆದಿರುವುದು ಆಸ್ಟ್ರೇಲಿಯಾದ ಅಲೆಕ್ಸ್ ಕ್ಯಾರಿ. ಇನ್ನು ವೇಗದ ಬೌಲಿಂಗ್ ಆಲ್ ರೌಂಡರ್ ಆಗಿ ಆಸ್ಟ್ರೇಲಿಯಾದ ಪ್ಯಾಟ್ ಕಮಿನ್ಸ್ ಕಾಣಿಸಿಕೊಂಡರೆ, ಸ್ಪಿನ್ನರ್ ಆಲ್ ರೌಂಡರ್ ಗಳಾಗಿ ಟೀಮ್ ಇಂಡಿಯಾದ ರವೀಂದ್ರ ಜಡೇಜಾ ಹಾಗೂ ರವಿಚಂದ್ರನ್ ಅಶ್ವಿನ್ ಸ್ಥಾನ ಪಡೆದಿದ್ದಾರೆ.

ವೇಗಿಗಳ ವಿಭಾಗದಲ್ಲಿ ಆಸ್ಟ್ರೇಲಿಯಾದ ಎಡಗೈ ವೇಗಿ ಮಿಚೆಲ್ ಸ್ಟಾರ್ಕ್ ತಂಡದಲ್ಲಿದ್ದಾರೆ. ಇವರ ಜೊತೆಗೆ ಕಳೆದ ವರ್ಷ ಟೆಸ್ಟ್ ಕ್ರಿಕೆಟ್ ಗೆ ವಿದಾಯ ಹೇಳಿದ್ದ ಇಂಗ್ಲೆಂಡ್ ವೇಗಿ ಸ್ಟುವರ್ಟ್ ಬ್ರಾಡ್ ಕೂಡ ಐಸಿಸಿ ಟೆಸ್ಟ್ ತಂಡದಲ್ಲಿ ಕಾಣಿಸಿಕೊಂಡಿದ್ದಾರೆ.

**ಐಸಿಸಿ ವರ್ಷದ ಟೆಸ್ಟ್ ತಂಡ:** ● ಉಸ್ಮಾನ್ ಖ್ವಾಜಾ (ಆಸ್ಟ್ರೇಲಿಯಾ) ● ದಿಮುತ್ ಕರುಣಾರತ್ನೆ (ಶ್ರೀಲಂಕಾ) ● ಕೇನ್ ವಿಲಿಯಮ್ಸನ್ (ನ್ಯೂಝಿಲೆಂಡ್) ● ಜೋ ರೂಟ್ (ಇಂಗ್ಲೆಂಡ್) ● ಟ್ರಾವಿಸ್ ಹೆಡ್ (ಆಸ್ಟ್ರೇಲಿಯಾ) ● ರವೀಂದ್ರ ಜಡೇಜಾ ● ಅಲೆಕ್ಸ್ ಕ್ಯಾರಿ (ಆಸ್ಟ್ರೇಲಿಯಾ) ● ಪ್ಯಾಟ್ ಕಮಿನ್ಸ್ (ನಾಯಕ/ಆಸ್ಟ್ರೇಲಿಯಾ) ● ರವಿಚಂದ್ರನ್ ಅಶ್ವಿನ್ (ಭಾರತ) ● ಮಿಚೆಲ್ ಸ್ಟಾರ್ಕ್ (ಆಸ್ಟ್ರೇಲಿಯಾ)

ಸ್ಟುವರ್ಟ್ ಬ್ರಾಡ್ (ಇಂಗ್ಲೆಂಡ್).

**ಏಕದಿನ ತಂಡದಲ್ಲಿ ಭಾರತೀಯರದ್ದೇ ದರ್ಬಾರ್:** ಐಸಿಸಿ ಪ್ರಕಟಿಸಿದ ಟೆಸ್ಟ್ ತಂಡದಲ್ಲಿ ಇಬ್ಬರು ಭಾರತೀಯರು ಮಾತ್ರ ಸ್ಥಾನ ಪಡೆದಿದ್ದರೂ, ಅತ್ತ ಏಕದಿನ ತಂಡದಲ್ಲಿ ಟೀಮ್ ಇಂಡಿಯಾದ 6 ಆಟಗಾರರು ಕಾಣಿಸಿಕೊಂಡಿದ್ದಾರೆ. ಅಲ್ಲದೆ ಈ ತಂಡದ ನಾಯಕನಾಗಿ ರೋಹಿತ್ ಶರ್ಮಾ ಆಯ್ಕೆಯಾಗಿದ್ದಾರೆ. ಈ ಮೂಲಕ ಐಸಿಸಿ ಪ್ರಕಟಿಸಿರುವ 2023 ರ ಏಕದಿನ ತಂಡದಲ್ಲಿ ಅರ್ಧಕ್ಕಿಂತ ಹೆಚ್ಚು ಸ್ಥಾನ ಪಡೆಯುವಲ್ಲಿ ಭಾರತೀಯ ಆಟಗಾರರು ಯಶಸ್ವಿಯಾಗಿದ್ದಾರೆ.

**ಐಸಿಸಿ ವರ್ಷದ ಏಕದಿನ ತಂಡ:** ● ರೋಹಿತ್ ಶರ್ಮಾ (ನಾಯಕ/ಭಾರತ), ● ಶುಭ್ ಮನ್ ಗಿಲ್ (ಭಾರತ) ● ಟ್ರಾವಿಸ್ ಹೆಡ್ (ಆಸ್ಟ್ರೇಲಿಯಾ) ● ವಿರಾಟ್ ಕೊಹ್ಲಿ (ಭಾರತ) ● ಡೇರಿಲ್ ಮಿಚೆಲ್ (ನ್ಯೂಝಿಲೆಂಡ್) ● ಹೆನ್ರಿಕ್ ಕ್ಲಾಸೆನ್ (ಸೌತ್ ಆಫ್ರಿಕಾ) ● ಮಾರ್ಕೊ ಯಾನ್ಸೆನ್ (ಸೌತ್ ಆಫ್ರಿಕಾ) ● ಆ ಯಡಂ ಝಂಪಾ (ಆಸ್ಟ್ರೇಲಿಯಾ) ● ಮೊಹಮ್ಮದ್ ಸಿರಾಜ್ (ಭಾರತ) ● ಕುಲ್ದೀಪ್ ಯಾದವ್ (ಭಾರತ) ● ಮೊಹಮ್ಮದ್ ಶಮಿ (ಭಾರತ)

# ಹೈಕಮಾಂಡ್ ವಿರುದ್ಧವೇ ಪರಮೇಶ್ವರ್ ಅಸಮಾಧಾನ

**ಬೆಂಗಳೂರು:** ನಮ್ಮ ಅಭಿಪ್ರಾಯ ತೆಗೆದುಕೊಂಡು ಮಾಡದಿರುವುದಕ್ಕೆ ನಿಗಮ ಮಂಡಳಿ ನೇಮಕ ಇಷ್ಟು ಗೊಂದಲ ಆಗ್ತಿದೆ ಅಂತ ಗೃಹ ಸಚಿವ ಪರಮೇಶ್ವರ್, ಹೈಕಮಾಂಡ್ ವಿರುದ್ಧವೇ ಅಸಮಾಧಾನ ಹೊರ ಹಾಕಿದ್ದಾರೆ.

ನಿಗಮ ಮಂಡಳಿ ನೇಮಕ ತಡ ಆಗ್ತಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಿಗಮ ಮಂಡಳಿ ನೇಮಕಾತಿಗೆ ನಮ್ಮ ಅಭಿಪ್ರಾಯವನ್ನೂ ಪಡೆಯಬೇಕು. ಆದ್ರೆ ನಮ್ಮನ್ನ ಯಾರೂ ಕೇಳಿಲ್ಲ. ಒಂದೆರಡು ಹೆಸರು ಕೊಡಿ ಅಂದಾಗ ಕೊಟ್ಟಿರಬಹುದು. ಆದರೆ ನಮ್ಮ ಜತೆ ಮಾತನಾಡಿ ಪಟ್ಟಿ ಮಾಡಿಲ್ಲ ಅಂತ ಬೇಸರ ವ್ಯಕ್ತಪಡಿಸಿದ್ದಾರೆ.

ಜಿಲ್ಲಾವಾರು ಕೆಲಸ ಮಾಡಿರೋದು ನಮಗೆ ಗೊತ್ತಿರುತ್ತೆ. ಸಿಎಂ, ಪಕ್ಷದ ಅಧ್ಯಕ್ಷರು ಇದ್ದಾರೆ ಅವರಿಗೆ ಜವಾಬ್ದಾರಿ ಕೊಡಬೇಕು. ಸಿಎಂ, ಅಧ್ಯಕ್ಷರು ಜಿಲ್ಲಾ ನಾಯಕರ ಜೊತೆ ಮಾತನಾಡಿ ಪಟ್ಟಿ ಮಾಡಬೇಕು. ಆದರೆ ಈಗ ಜನರಲ್ ಸೆಕ್ರೆಟರಿ ಅವರೇ ಮಾಡ್ತಿದ್ದಾರೆ. ಪಟ್ಟಿ ನಿಧಾನವಾಗಿದೆ. ನೋಡೋಣ ಏನ್ ಮಾಡ್ತಾರೆ ಅಂತ ಎಂದು ಹೇಳಿದ್ದಾರೆ.



ಕಾರ್ಯಕರ್ತರು ಯಾರ್ಯಾರು ಕೆಲಸ ಮಾಡಿದ್ದಾರೆ ಅಂತ ನನಗೆ ಗೊತ್ತಿದೆ. ಹತ್ತಾರು ವರ್ಷಗಳ ಕಾಲ ಪಕ್ಷಕ್ಕೆ ದುಡಿದಿದ್ದಾರೆ. ಅವರಿಗೆ ಅಧಿಕಾರ ಕೊಡಬೇಕು. ನಮ್ಮ ಅಭಿಪ್ರಾಯ ಪಡೆಯದೇ ಇರೋದಕ್ಕೆ ಹೀಗೆ ಆಗಿದೆ. ಕೆಲಸ ಮಾಡೋರಿಗೆ ಕೊಡರ್ದೇ ಹೋದ್ರೆ, ಕೆಲಸ ಮಾಡಿರೋರಿಗೆ ನೋವಾಗುತ್ತದೆ. ಅಸಮಾಧಾನ ಆಗುತ್ತದೆ, ಹೀಗಾಗಿ ಮುಖಂಡರು, ಜಿಲ್ಲಾ ಅಧ್ಯಕ್ಷರನ್ನ ಕೇಳಬೇಕಾಗುತ್ತದೆ ಎಂದು ಸಲಹೆ ನೀಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com